

# ಬೆಳಗಾವಿ ವರದಿ

ಪ್ರಧಾನ ಸಂಪಾದಕರು: ಸತೀಶ್.ಬಿ.ಜಿ

BELAGAVI VARADI KANNADA DAILY

ಕನ್ನಡ ದಿನಪತ್ರಿಕೆ 24

Read,Share and Follow - www.belagavivaradi.com

Vol-04 | Issue: 268 | ₹ ಬೆಲೆ: 4 | Tuesday, 19, December,2023 | newsbelagavi@gmail.com | 9900332089 | Regn,No:G-2/PMG/KA/NK/BM/139/2021-23




## ಲೋಕಸಭೆಯಿಂದ ಮತ್ತೆ 31 ಸಂಸದರು ಅಮಾನತು


ನವದೆಹಲಿ: ಕಲಾಪಕ್ಕೆ ಅಡ್ಡಿಪಡಿಸಿದ ಕಾರಣಕ್ಕಾಗಿ ಕಾಂಗ್ರೆಸ್‌ನ ಅಧೀರ್ ರಂಜನ್ ಚೌಧರಿ ಸೇರಿದಂತೆ ವಿಪಕ್ಷಗಳ 31 ಸಂಸದರನ್ನು ಲೋಕಸಭೆಯಿಂದ ಅಮಾನತುಗೊಳಿಸಲಾಗಿದೆ.

ಕಳೆದ ವಾರ ಆಗಿದ್ದ ಲೋಕಸಭಾ ಭದ್ರತಾ ಲೋಪ ಪ್ರಕರಣಕ್ಕೆ ಸಂಬಂಧಿಸಿದಂತೆ ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರು ಹೇಳಿಕೆ ನೀಡಬೇಕು ಎಂದು ಒತ್ತಾಯಿಸಿ ವಿಪಕ್ಷಗಳು ಪ್ರತಿಭಟಿಸಿದ್ದವು. ಕಲಾಪಕ್ಕೆ ಅಡ್ಡಿಪಡಿಸಿದ್ದರಿಂದ ಪ್ರತಿಪಕ್ಷಗಳ ಸಂಸದರನ್ನು ಚಳಿಗಾಲದ ಅಧಿವೇಶನದ ಉಳಿದ ಅವಧಿಗೆ ಲೋಕಸಭೆಯಿಂದ ಅಮಾನತುಗೊಳಿಸಲಾಯಿತು.

ಗೃಹ ಸಚಿವರ ಹೇಳಿಕೆಗೆ ಒತ್ತಾಯಿಸಿ ಕಳೆದ ವಾರ ವಿಪಕ್ಷಗಳ 13 ಸಂಸದರು ಅಮಾನತುಗೊಂಡಿದ್ದರು. ಈಗ ಮತ್ತೊಂದು ಸುತ್ತಿನಲ್ಲಿ 31 ಸಂಸದರು ಅಮಾನತುಗೊಂಡಿದ್ದಾರೆ. ಇದಲ್ಲದೇ ಇನ್ನೂ ಮೂವರು ಸಂಸದರನ್ನು ವಿಶೇಷಾಧಿಕಾರ ಸಮಿತಿ ವರದಿ ಬರುವವರೆಗೆ ಅಮಾನತುಗೊಳಿಸಲಾಗಿದೆ. ಇದರರ್ಥ ಒಟ್ಟು 46 ಸಂಸದರನ್ನು ಅಮಾನತುಗೊಳಿಸಲಾಗಿದೆ. ಅವರಲ್ಲಿ 43 ಮಂದಿ ಭದ್ರತಾ ಲೋಪದ ಬಗ್ಗೆ ಗೃಹ ಸಚಿವರ ಹೇಳಿಕೆಗೆ ಆಗ್ರಹಿಸಿದ್ದಾರೆ.

ಅಮಾನತುಗೊಂಡ ಸಂಸದರಲ್ಲಿ ಲೋಕಸಭೆಯಲ್ಲಿ ಕಾಂಗ್ರೆಸ್‌ನ ನಾಯಕ ಅಧೀರ್ ರಂಜನ್ ಚೌಧರಿ ಮತ್ತು ಸದನದಲ್ಲಿ ಪಕ್ಷದ ಉಪನಾಯಕ ಗೌರವ್ ಗೊಗೊಯ್ ಸೇರಿದ್ದಾರೆ.

# ಮತ್ತೆ ರಾಜ್ಯದಲ್ಲಿ ಕೊರೊನಾ ಭೀತಿ



ಬೆಂಗಳೂರು: ದೇಶ, ರಾಜ್ಯದಲ್ಲಿ ಮತ್ತೊಮ್ಮೆ ಕೊರೊನಾ ಸಾಂಕ್ರಾಮಿಕ ರೋಗದ ಭೀತಿ ಎದುರಾಗಿದೆ. ದಿನೇ ದಿನೇ ಕೊರೊನಾಗೆ ತುತ್ತಾದವರ ಸಂಖ್ಯೆ ಹೆಚ್ಚಾಗುತ್ತಿದ್ದಂತೆ ದೇಶಾದ್ಯಂತ ಮುನ್ನೆಚ್ಚರಿಕೆ ಕೈಗೊಳ್ಳಲಾಗುತ್ತಿದೆ. ಕೇರಳದಲ್ಲಿ ಹೊಸ ಉಪ ತಳಿ ಕೂಡ ಕಾಣಿಸಿಕೊಂಡಿರೋದು ಸಹಜವಾಗೇ ಕರ್ನಾಟಕದಲ್ಲೂ ಆತಂಕ ಹೆಚ್ಚಾಗುವಂತೆ ಮಾಡಿದೆ.

ದೇಶದಲ್ಲಿ ಕೊರೊನಾ ಪಾಸಿಟಿವ್ ಕೇಸ್ ಹೆಚ್ಚಾಗುತ್ತಿದ್ದಂತೆ ರಾಜ್ಯದಲ್ಲಿ ಕಠಿಣ ಕ್ರಮಗಳನ್ನು ಕೈಗೊಳ್ಳಲಾಗುತ್ತಿದೆ. ಇನ್ಮುಂದೆ 60 ವರ್ಷ ಮೇಲ್ಪಟ್ಟವರಿಗೆ ರಾಜ್ಯದಲ್ಲಿ ಮಾಸ್ಕ್ ಕಡ್ಡಾಯಗೊಳಿಸುವ ಸಾಧ್ಯತೆ ಇದೆ. ಈಗಾಗಲೇ ತಾಂತ್ರಿಕ ಸಲಹಾ ಸಮಿತಿಯಿಂದ ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ಅವರು ಒಂದಷ್ಟು ಸಲಹೆಯನ್ನು ಪಡೆದಿದ್ದಾರೆ. ಶೀಘ್ರದಲ್ಲೇ ರಾಜ್ಯ ಆರೋಗ್ಯ ಇಲಾಖೆ ಮಾರ್ಗಸೂಚಿಗಳನ್ನು ಪ್ರಕಟಿಸುವ ಸಾಧ್ಯತೆ ಇದೆ.

ಮೂಲಗಳ ಪ್ರಕಾರ ಸಲಹಾ ಸಮಿತಿಯ ವರದಿಯನ್ನು ಆಧರಿಸಿ ರಾಜ್ಯ ಆರೋಗ್ಯ ಇಲಾಖೆಯಿಂದ ಇಂದು ಮಾರ್ಗಸೂಚಿ ಬಿಡುಗಡೆಯಾಗುವ ಸಾಧ್ಯತೆ ಇದೆ. ಈ ಮಾರ್ಗಸೂಚಿಯಲ್ಲಿ 60 ವರ್ಷ ಮೇಲ್ಪಟ್ಟವರು ಹಾಗೂ ಹೃದಯ ಸಂಬಂಧಿ ಕಾಯಿಲೆ ಹೊಂದಿದವರು, ಉಸಿರಾಟದ ಸಮಸ್ಯೆ ಇರುವವರಿಗೆ ಮಾಸ್ಕ್ ಕಡ್ಡಾಯಗೊಳಿಸುವ ಸಾಧ್ಯತೆ ಹೆಚ್ಚಿದೆ.

ಮಾಸ್ಕ್ ಕಡ್ಡಾಯಗೊಳಿಸುವುದರ ಜೊತೆಗೆ ಶೀತ, ಜ್ವರ ಕೆಮ್ಮು ಇರುವವರು ಕೊರೊನಾ ಪರೀಕ್ಷೆ ಮಾಡಿಸಿಕೊಳ್ಳಬೇಕು. ಹೆಚ್ಚು, ಹೆಚ್ಚು ಕೊರೊನಾ ಟೆಸ್ಟಿಂಗ್ ಮಾಡುವಂತೆ ಆರೋಗ್ಯ ಇಲಾಖೆಗೆ ಅಧಿಕಾರಿಗಳು ಸೂಚಿಸಲಿದ್ದಾರೆ. ಅಗತ್ಯವಿರುವ ಬೆಡ್, ಪಿಪಿಇ ಕಿಟ್, ಆಕ್ಸಿಜನ್ ಸನ್ನದ್ಧ ಸ್ಥಿತಿಯಲ್ಲಿ ಇರಿಸಿಕೊಳ್ಳಲು ಎಲ್ಲಾ ಜಿಲ್ಲಾ ಆರೋಗ್ಯಾಧಿಕಾರಿಗಳಿಗೆ ಸೂಚನೆ ನೀಡಲಾಗುತ್ತಿದೆ.

ಸದ್ಯ ಸಾರ್ವಜನಿಕ ಸ್ಥಳಗಳಲ್ಲಿ ಯಾವುದೇ ನಿರ್ಬಂಧ ವಿಧಿಸಲಾಗುವುದಿಲ್ಲ. ಆದರೆ ಮುಂದಿನ ದಿನದಲ್ಲಿ ಹೆಚ್ಚು ಕೊರೊನಾ ಪ್ರಕರಣಗಳ ಸಂಖ್ಯೆ ಜಾಸ್ತಿ ಆದರೆ ಸಾರ್ವಜನಿಕ ಸ್ಥಳಗಳಲ್ಲಿ ಕಟ್ಟುನಿಟ್ಟಿನ ಕ್ರಮಗಳನ್ನ ಕೈಗೊಳ್ಳುವ ಸಾಧ್ಯತೆ ಇದೆ.

### ಕೊವಿಡ್ ವಿಚಾರದಲ್ಲಿ ಯಾರೂ ಗಾಬರಿಯಾಗುವುದು ಬೇಡ: ಡಿಸಿಎಂ ಡಿಕೆಶಿ



ದೆಹಲಿ: ಕೋವಿಡ್ ಬಗ್ಗೆ ದಯವಿಟ್ಟು ಯಾರು ಗಾಬರಿ ಆಗುವುದು ಬೇಡ. ಆರೋಗ್ಯ ಇಲಾಖೆ ವತಿಯಿಂದ ಮುಂಜಾಗ್ರತ ಕ್ರಮ ತೆಗೆದುಕೊಳ್ಳಲಾಗುತ್ತಿದೆ ಎಂದು ಡಿಸಿಎಂ ಡಿ.ಕೆ. ಶಿವಕುಮಾರ್ ಹೇಳಿದ್ದಾರೆ.

ಈಗಾಗಲೇ ಜನರು ಮಾಸ್ಕ್ ಹಾಕಿಕೊಳ್ಳುತ್ತೊದ್ದಾರೆ. ಆದರೆ ಯಾರು ಸದ್ಯಕ್ಕೆ ಗಾಬರಿ ಪಡುವುದು ಬೇಡ ಎಂದು ಹೇಳಿದ್ದಾರೆ.

ಜನರಲ್ಲಿ ಅನಾವಶ್ಯಕವಾಗಿ ಆತಂಕ ಸೃಷ್ಟಿಸುವುದು ಬೇಡ. ಕೇರಳಗಡಿಯಲ್ಲಿ ಎಲ್ಲರನ್ನೂ ತಪಾಸಣೆ ಮಾಡುವ ಅಗತ್ಯ ಇಲ್ಲ. ಕೊರೊನಾ ಲಕ್ಷಣ ಇದ್ದವರಿಗೆ ಮಾತ್ರ ತಪಾಸಣೆ ಮಾಡಲಾಗುತ್ತದೆ ಎಂದು ಸಚಿವ ದಿನೇಶ್ ಗುಂಡೂರಾವ್ ಹೇಳಿದ್ದಾರೆ. ಮಡಿಕೇರಿಯಲ್ಲಿ ಮಾಧ್ಯಮದವರೊಂದಿಗೆ ಮಾತನಾಡಿದ ಅವರು, ಚೆಕ್ಪೋಸ್ಟ್, ಏರ್ಪೋರ್ಟ್, ರೈಲ್ವೆ ನಿಲ್ದಾಣದಲ್ಲಿ ಜನರ ನಿಯಂತ್ರಣ ಅಸಾಧ್ಯ. ಈ ವಿಚಾರದಲ್ಲಿ ಕೇಂದ್ರ ಸರ್ಕಾರದ ಗೈಡ್ ಲೈನ್ಸ್ ಕೂಡಾ ಇದೆ ಎಂದು ಹೇಳಿದ್ದಾರೆ.

## ಸಿಐಡಿ ಎಡಿಜಿಪಿಯಾಗಿ ಬಿಜಯ್ ಕುಮಾರ್ ಸಿಂಗ್ ನೇಮಕ



ಬೆಂಗಳೂರು:ಕೇಂದ್ರ ಸೇವೆಯಿಂದ ಮರಳಿದ ಹಿರಿಯ ಅಧಿಕಾರಿ ಬಿಜಯ್ ಕುಮಾರ್ ಸಿಂಗ್ ಅವರನ್ನು ಸಿಐಡಿ ಎಡಿಜಿಪಿಯನ್ನಾಗಿ ನೇಮಿಸಿ ಕರ್ನಾಟಕ ಸರ್ಕಾರ ಆದೇಶ ಹೊರಡಿಸಿದೆ.

ಗೌರಿ ಲಂಕೇಶ್ ಹತ್ಯೆ ಪ್ರಕರಣದ ತನಿಖಾ ತಂಡ ಎಸ್‌ಐಟಿಯ ಮುಖ್ಯಸ್ಥರಾಗಿದ್ದ ಬಿಜಯ್ ಸಿಂಗ್, ಕಳೆದ ನಾಲ್ಕು ವರ್ಷಗಳಿಂದ ಕೇಂದ್ರ ಸೇವೆಗೆ ತೆರಳಿದ್ದರು. ಇದೀಗ ಮತ್ತೆ ರಾಜ್ಯ ಸೇವೆಗೆ ಮರಳಿದ ಹಿನ್ನೆಲೆ ಸಿಐಡಿ ಎಡಿಜಿಪಿಯಾಗಿ ನಿಯುಕ್ತಿಗೊಳಿಸಲಾಗಿದೆ. ಪತ್ರಕರ್ತೆ ಗೌರಿ ಲಂಕೇಶ್ ಹತ್ಯೆ ಪ್ರಕರಣದ ತನಿಖೆಯನ್ನು ರಾಜ್ಯ ಸರ್ಕಾರ ಎಸ್‌ಐಟಿಗೆ ಒಪ್ಪಿಸಿ 2019ರಲ್ಲಿ ಆದೇಶಿಸಿತ್ತು. ಬಿಜಯ್ ಸಿಂಗ್ ನೇತೃತ್ವದಲ್ಲಿ 21 ಪೊಲೀಸ್ ಅಧಿಕಾರಿಗಳ ತಂಡವನ್ನು ರಚಿಸಲಾಗಿತ್ತು. ಈ ಎಲ್ಲಾ ಅಧಿಕಾರಿಗಳು ಹೊಂದಿದ್ದ ಪದವಿ, ಜವಾಬ್ದಾರಿಗಳಿಂದ ವಿಮುಕ್ತಿಗೊಳಿಸಲಾಗಿತ್ತು.

ಬಲಪಂಥೀಯ ಸಿದ್ಧಾಂತಗಳನ್ನು ವಿರೋಧಿಸುತ್ತಾ ಬರಹಗಳನ್ನು ಬರೆಯುತ್ತಿದ್ದ ಪತ್ರಕರ್ತೆ ಗೌರಿ ಲಂಕೇಶ್ ಅವರನ್ನು ಗುಂಡಿಕ್ಕಿ ಹತ್ಯೆ ಮಾಡಲಾಗಿತ್ತು. ಪ್ರಕರಣ ಸಂಬಂಧ 18 ಆರೋಪಿಗಳನ್ನು ಪೊಲೀಸರು ಬಂಧಿಸಿದ್ದಾರೆ. ಈ ಪೈಕಿ ಆರೋಪಿಗಳಿಗೆ ಆಶ್ರಯ ನೀಡಿದ್ದ ಮೋಹನ್ ನಾಯಕ್ಗೆ ಇತ್ತೀಚೆಗೆ ಹೈಕೋರ್ಟ್ ಜಾಮೀನು ಮಂಜೂರು ಮಾಡಿತ್ತು. ಇಡೀ ಪ್ರಕರಣದಲ್ಲಿ ಜಾಮೀನು ಮೇಲೆ ಬಿಡುಗಡೆಯಾದ ಮೊದಲ ಆರೋಪಿ ಈತನಾಗಿದ್ದಾನೆ.

## ಅರ್ಷದೀಪ್ ಮಾರಕ ದಾಳಿಗೆ ಮೂಂಡಿಯೂರಿದ ದಕ್ಷಿಣ ಆಫ್ರಿಕಾ; 5 ವಿಕೆಟ್ , ಶ್ರೇಷ್ಠ ದಾಖಲೆ ಸೃಷ್ಟಿ



ಬೆಂಗಳೂರು: ದಕ್ಷಿಣ ಆಫ್ರಿಕಾ ವಿರುದ್ಧದ ಮೊದಲ ಏಕದಿನ ಪಂದ್ಯದಲ್ಲಿಅರ್ಷದೀಪ್ ಸಿಂಗ್ ಅದ್ಭುತ ಬೌಲಿಂಗ್ ಮಾಡಿ 5 ವಿಕೆಟ್ ಪಡೆಯುವಲ್ಲಿ ಯಶಸ್ವಿಯಾಗಿದ್ದಾರೆ. ಈ ಮೂಲಕ ತಮ್ಮ ವೃತ್ತಿ ಜೀವನದಲ್ಲಿ ವಿಶೇಷ ದಾಖಲೆಯನ್ನು ಬರೆದಿದ್ದಾರೆ. ದಕ್ಷಿಣ ಆಫ್ರಿಕಾ ವಿರುದ್ಧದ ಏಕದಿನ ಪಂದ್ಯದಲ್ಲಿ 5 ವಿಕೆಟ್ ಕಬಳಿಸಿದ ಭಾರತದ ಏಕೈಕ ವೇಗದ ಬೌಲರ್ ಎಂಬ ಹೆಗ್ಗಳಿಕೆಗೆ ಅರ್ಷದೀಪ್ ಪಾತ್ರರಾಗಿದ್ದಾರೆ. ಈ ಮೊದಲು, ದಕ್ಷಿಣ ಆಫ್ರಿಕಾದಲ್ಲಿ ಆಫ್ರಿಕನ್ ತಂಡದ ವಿರುದ್ಧ ಆಡುವಾಗ ಯಾವುದೇ ಭಾರತೀಯ ವೇಗದ ಬೌಲರ್ ಈ ಸಾಧನೆ ಮಾಡಿರಲಿಲ್ಲ.

ಪಂದ್ಯದಲ್ಲಿ ಅರ್ಷದೀಪ್ 10 ಓವರ್ ಬೌಲ್ ಮಾಡಿ 37 ರನ್ ನೀಡಿ 5 ವಿಕೆಟ್ ಪಡೆದರು. ಇನ್ನು ಅರ್ಷದೀಪ್ ಹೊರತಾಗಿ ಅವೇಶ್ ಖಾನ್ ಕೂಡ ಅದ್ಭುತವಾಗಿ ಬೌಲಿಂಗ್ ಮಾಡಿ 4 ವಿಕೆಟ್ ಪಡೆದರು. ಅಂದಹಾಗೆ, ಅರ್ಷದೀಪ್ ದಕ್ಷಿಣ ಆಫ್ರಿಕಾದಲ್ಲಿ 5 ಅಥವಾ ಅದಕ್ಕಿಂತ ಹೆಚ್ಚು ವಿಕೆಟ್ ಪಡೆದ ಭಾರತದ ಮೂರನೇ ಬೌಲರ್ ಆಗಿದ್ದಾರೆ. ಅರ್ಶ್‌ದೀಪ್'ಗೂ ಮುನ್ನ ಆಶಿಶ್ ನೆಹ್ರಾ 2003ರ ವಿಶ್ವಕಪ್'ನಲ್ಲಿ ಇಂಗ್ಲೆಂಡ್ ವಿರುದ್ಧ 6 ವಿಕೆಟ್ ಪಡೆದಿದ್ದರೆ, 2018ರಲ್ಲಿ ಯುಜುವೇಂದ್ರ ಚಾಹಲ್ ಸೆಂಚುರಿಯನ್'ನಲ್ಲಿ 5 ವಿಕೆಟ್ ಪಡೆದಿದ್ದರು. ಇನ್ನೊಂದೆಡೆ ಅರ್ಷದೀಪ್ ಅಂತರಾಷ್ಟ್ರೀಯ ಕ್ರಿಕೆಟ್'ನಲ್ಲಿ ಮೊದಲ ಬಾರಿಗೆ 5 ವಿಕೆಟ್ ಪಡೆದ ಸಾಧನೆ ಮಾಡಿದ್ದಾರೆ.

## ಇಂದು ಸಿಎಂ ಭೇಟಿಗೆ ಅವಕಾಶ ನೀಡಿದ ಪಿಎಂ



ನವದೆಹಲಿ: ಇಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಪ್ರಧಾನಿ ನರೇಂದ್ರ ಮೋದಿ ಅವರನ್ನು ಬೇಟಿಯಾಗಲು ಅವಕಾಶ ನೀಡಲಾಗಿದೆ. ಬೆಳಗ್ಗೆ 11 ಗಂಟೆಗೆ ಸಂಸತ್ನಲ್ಲಿ ಮೋದಿ ಭೇಟಿಗೆ ಸಮಯ ನಿಗದಿ ಮಾಡಲಾಗಿದೆ.

ಎರಡನೇ ಬಾರಿ ಮುಖ್ಯಮಂತ್ರಿಯಾದ ನಂತರ ಸಿದ್ದರಾಮಯ್ಯ ಅವರು ಪ್ರಧಾನಿ ನರೇಂದ್ರ ಮೋದಿ ಅವರನ್ನು ಆಗುತ್ತಿರುವ ಎರಡನೇ ಭೇಟಿ ಇದಾಗಿದೆ.

ಇಂದು ಸಂಸತ್ ಭವನದಲ್ಲಿ ಮೋದಿ ಅವರನ್ನು ಭೇಟಿಯಲಿರುವ ಸಿದ್ದರಾಮಯ್ಯ ಅವರು ರಾಜ್ಯದಲ್ಲಿನ ಬರಗಾಲದ ಕುರಿತು ಚರ್ಚಿಸುವ ಸಾಧ್ಯತೆ ಇದೆ. ಇದೇ ವೇಳೆ ಬರ ಪರಿಹಾರವನ್ನು ಕೂಡಲೇ ಬಿಡುಗಡೆ ಮಾಡುವಂತೆ ಒತ್ತಾಯಿಸುವ ಸಾಧ್ಯತೆ ಇದೆ.

ಪ್ರಧಾನಿ ಮೋದಿ ಅವರನ್ನು ಆಗಸ್ಟ್ 3ರಂದು ಸಿದ್ದರಾಮಯ್ಯ ಅವರು ಭೇಟಿಯಾಗಿ ವಿಶೇಷ ಕೊಡುಗೆ ನೀಡಿದ್ದರು. ಆದರೆ, ಸಚಿವ ಎಂಬಿ ಪಾಟೀಲ್ ಅವರು ವರ್ಷಾನುಗಟ್ಟಲೆಯಿಂದ ಅವಕಾಶ ಕೊಟ್ಟಿರಲಿಲ್ಲ ಎಂದು ಆರೋಪಿಸಿದ್ದಾರೆ.

ವಿರೋಧ ಪಕ್ಷದ ಮುಖ್ಯಮಂತ್ರಿಗಳಿರಬಹುದು ಅಥವಾ ಸ್ವಪಕ್ಷದ ಮುಖ್ಯಮಂತ್ರಿಗಳಿರಬಹುದು, ಈ ರೀತಿ ಕಡೆಗಣಿಸಿರುವ ಇತಿಹಾಸ ಇರಲಿಲ್ಲ.

ಹಿಂದೆ ವಾಜಪೇಯಿ, ಮನಮೋಹನ್ ಸಿಂಗ್, ರಾಜೀವ್ ಗಾಂಧಿ ಯಾರೂ ಈ ರೀತಿಯಾಗಿ ಮುಖ್ಯಮಂತ್ರಿಗಳನ್ನು ನಡೆಸಿಕೊಂಡಿರಲಿಲ್ಲ.

ಪ್ರಧಾನಿ ವಿರೋಧ ಪಕ್ಷಗಳ ಮುಖ್ಯಮಂತ್ರಿಗಳನ್ನ ಕಡೆಗಣಿಸುತ್ತಿದ್ದಾರೆ. ಆ ರಾಜ್ಯಗಳು ಅಭಿವೃದ್ಧಿ ಹೊಂದಬಾರದು, ಅನುದಾನ ಸಿಗಬಾರದು ಎಂಬ ಮನಸ್ಥಿತಿ ಇದ್ದಂತೆ ಕಾಣುತ್ತಿದೆ ಎಂದರು.

ಸಿದ್ದರಾಮಯ್ಯನವರು ಎರಡನೇ ಬಾರಿಗೆ ಮುಖ್ಯಮಂತ್ರಿಯಾದ ಬಳಿಕ ಆಗಸ್ಟ್ 3 ರಂದು ಮೊದಲ ಬಾರಿ ಮೋದಿ ಅವರನ್ನು ಭೇಟಿಯಾಗಿದ್ದರು.

ತಮ್ಮ ಜನ್ಮದಿನದಂದೇ ಸಿದ್ದರಾಮಯ್ಯ ಅವರು ಭೇಟಿಯಾಗಿದ್ದರು.

ಈ ವೇಳೆ ಪ್ರಧಾನಿಗೆ ವಿಶೇಷ ಉಡುಗೊರೆಯಾಗಿ ಆನೆಯ ಅಂಬಾರಿ ಹೊತ್ತಿರುವ ಕೆತ್ತನೆಯ ಆಕೃತಿಯನ್ನು ನೀಡಿದ್ದರು. ಮೈಸೂರು ಪೇಟ, ಶಾಲು ಹಾಕಿ ಸನ್ಮಾನಿಸಿದ್ದರು.

ಮೋದಿ ಭೇಟಿಯಾಗಿ ಮಾತುಕತೆ ನಡೆಸಿದ ನಂತರ ಸಿದ್ದರಾಮಯ್ಯ ಅವರು ಕೇಂದ್ರ ರಕ್ಷಣಾ ಸಚಿವ ರಾಜನಾಥ್ ಸಿಂಗ್ ಅವರನ್ನು ಭೇಟಿಯಾಗಿದ್ದರು.


ಇವರಿಗೂ ಅದೇ ರೀತಿಯ ಉಡುಗೊರೆ ನೀಡಿದ್ದ ಸಿದ್ದರಾಮಯ್ಯ, ಮೈಸೂರು ದಸರಾ ಉತ್ಸವದಲ್ಲಿ ಏರ್ಶೋ ಆಯೋಜಿಸಲು ಮನವಿ ಮಾಡಿದ್ದರು. ಬಳಿಕ ಕೇಂದ್ರ ವಿತ್ತಸಚಿವೆ ನಿರ್ಮಲಾ ಸೀತಾರಾಮನ್ ಅವರನ್ನು ಭೇಟಿಯಾಗಿದ್ದರು.

### ರಾಜ್ಯ ಪೊಲೀಸರಿಂದ ಡ್ರಗ್ಸ್ ಕುರಿತು ಬೃಹತ್ ಜಾಗೃತಿ ಅಭಿಯಾನ

ಬೆಂಗಳೂರು: ರಾಜ್ಯದಲ್ಲಿ ಡ್ರಗ್ಸ್ ವಿರುದ್ಧದ ಕ್ರಮವನ್ನು ಮತ್ತಷ್ಟು ಹೆಚ್ಚಿಸಲು ಕರ್ನಾಟಕ ಪೊಲೀಸ್ ಮಹಾನಿರ್ದೇಶಕರು, ಡ್ರಗ್ಸ್ ಬಳಕೆ ಮತ್ತು ದುಷ್ಪರಿಣಾಮಗಳ ವಿರುದ್ಧ ಬೃಹತ್ ಸಾರ್ವಜನಿಕ ಜಾಗೃತಿ ಕಾರ್ಯಕ್ರಮ ನಡೆಸುವಂತೆ ಎಲ್ಲಾ ಪೊಲೀಸ್ ಆಯುಕ್ತರು ಮತ್ತು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಿಗೆ ನಿರ್ದೇಶನ ನೀಡಿದ್ದಾರೆ. "ಪೊಲೀಸ್ ಸಬ್-ಇನ್ಸ್‌ಪೆಕ್ಟರ್ರ್(ಎಸ್‌ಐ) ಶ್ರೇಣಿಯಿಂದ ಪೊಲೀಸ್ ವರಿಷ್ಠಾಧಿಕಾರಿ /ಪೊಲೀಸ್ ಉಪ ಆಯುಕ್ತ(ಎಸ್‌ಪಿ/ಡಿಸಿಪಿ) ಶ್ರೇಣಿಯ ಅಧಿಕಾರಿಗಳು ತಮ್ಮ ವ್ಯಾಪ್ತಿಯ ಕಾಲೇಜುಗಳು ಮತ್ತು ಶಾಲೆಗಳಿಗೆ ಡಿಸೆಂಬರ್ 20 ರಂದು ಭೇಟಿ ನೀಡಿ ಜಾಗೃತಿ ಕಾರ್ಯಕ್ರಮ ನಡೆಸಲಿದ್ದಾರೆ ಎಂದು ಪ್ರಕಟಣೆ ತಿಳಿಸಿದೆ.

ಈ ನಿಟ್ಟಿನಲ್ಲಿ ಶಾಲಾ-ಕಾಲೇಜುಗಳಲ್ಲಿ ಮಾದಕ ದ್ರವ್ಯ ಮತ್ತು ಮಾದಕ ದ್ರವ್ಯಗಳ ದುಷ್ಪರಿಣಾಮಗಳ ಬಗ್ಗೆ ಜಾಗೃತಿ ಮೂಡಿಸಲು ಪ್ರಸ್ತುತಿ, ಕಿರುನಾಟಕ, ಚರ್ಚಾಸ್ಪರ್ಧೆ, ಸಂವಾದ ಇತ್ಯಾದಿಗಳನ್ನು ಆಯೋಜಿಸಬೇಕು. ರಾಜ್ಯವನ್ನು ಡ್ರಗ್ಸ್ ಮುಕ್ತಗೊಳಿಸಲು ಕರ್ನಾಟಕ ರಾಜ್ಯ ಪೊಲೀಸ್ ಬದ್ಧವಾಗಿದೆ" ಎಂದು ಪ್ರಕಟಣೆಯಲ್ಲಿ ತಿಳಿಸಲಾಗಿದೆ.

## ಸೋಲಾರ್ ಕಾರ್ಖಾನೆಯಲ್ಲಿ ಸ್ಫೋಟ 6 ಜನ ಸಾವು



ಮುಂಬೈ: ಮಹಾರಾಷ್ಟ್ರ ರಾಜ್ಯದ ನಾಗ್ಪುರದ ಕಾರ್ಖಾನೆಯೊಂದರಲ್ಲಿ ಸ್ಫೋಟ ಸಂಭವಿಸಿದ್ದು, 6 ಮಂದಿ ಸಾವನ್ನಪ್ಪಿದ್ದಾರೆ.

ಬೆಳಗ್ಗೆ ಸುಮಾರು 9.30 ಕ್ಕೆ ಬಜಾರ್‌ಗಾಂವ್ ಪ್ರದೇಶದಲ್ಲಿರುವ ಸೋಲಾರ್ ಇಂಡಸ್ಟ್ರೀಸ್ ಇಂಡಿಯಾ ಲಿಮಿಟೆಡ್‌ನಲ್ಲಿ ಸ್ಫೋಟ ಸಂಭವಿಸಿದೆ. ಘಟನೆಯಲ್ಲಿ ಹಲವರು ಗಾಯಗೊಂಡಿದ್ದು, ಕೆಲವರ ಸ್ಥಿತಿ ಚಿಂತಾಜನಕವಾಗಿದೆ ಎಂದು ವರದಿಯಾಗಿದೆ. ಘಟನೆ ಕುರಿತು ಮಾಹಿತಿ ಪಡೆದ ತಕ್ಷಣ ಪೊಲೀಸ್ ತಂಡ ಸ್ಥಳಕ್ಕೆ ಆಗಮಿಸಿದೆ. ಕಲ್ಲಿದ್ದಲು ಸ್ಫೋಟಕ್ಕಾಗಿ ಸ್ಫೋಟಕಗಳನ್ನು ಪ್ಯಾಕ್ ಮಾಡುತ್ತಿದ್ದಾಗ ಈ ಘಟನೆ ಸಂಭವಿಸಿದೆ. ಕಂಪನಿಯು ದೇಶದ ರಕ್ಷಣಾ ಇಲಾಖೆಗೆ ಸ್ಫೋಟಕಗಳು ಮತ್ತು ಇತರ ರಕ್ಷಣಾ ಸಾಧನಗಳ ಪೂರೈಕೆಯೊಂದಿಗೆ ವ್ಯವಹರಿಸುತ್ತದೆ.

## 30 ಸಾವಿರ ಬೆಲೆಯ ಸ್ಕೂಟಿ ಮೇಲೆ 3.22 ಲಕ್ಷ ರೂ. ದಂಡ ವಿಧಿಸಿದ ಟ್ರಾಫಿಕ್ ಪೊಲೀಸರು

ಬೆಂಗಳೂರು: 30 ಸಾವಿರ ಬೆಲೆಯ ಸ್ಕೂಟಿ ಮೇಲೆ 3.22 ಲಕ್ಷ ರೂಪಾಯಿ ದಂಡವನ್ನು ಬೆಂಗಳೂರು ಟ್ರಾಫಿಕ್ ಪೊಲೀಸರು ವಿಧಿಸಿದ್ದಾರೆ.

ಮಾಲಾ ಎಂಬುವರಿಗೆ ಸೇರಿದ ಸ್ಕೂಟಿ ಇದಾಗಿದೆ. ಈ ಸ್ಕೂಟಿ ಮೂಲಕ ಬರೋಬ್ಬರಿ 643 ಬಾರಿ ಸಂಚಾರ ನಿಯಮಗಳ ಉಲ್ಲಂಘಿಸಲಾಗಿದೆ. ಟ್ರಾಫಿಕ್ ನಿಯಮ ಪಾಲಿಸದ ಸ್ಕೂಟಿ ಮೇಲೆ ಕ್ಯಾಮೆರಾ ಕಣ್ಣಲ್ಲಿ ಸೆರೆಯಾಗಿದೆ.

ಪೊಲೀಸರ ಕಣ್ತಪ್ಪಿಸಿ ಓಡಾಡಬಹುದು ಅಂತಿದ್ದವರಿಗೆ ಇದು ಶಾಕಿಂಗ್ ಆಗಬಹುದು. ಯಾಕಂದರೆ ಕ್ಯಾಮೆರಾ ಕಣ್ಣಲ್ಲಿ ದಾಖಲಾದ ಕೇಸ್ಗಳು ಇದಾಗಿದೆ. ವಿತೌಟ್ ಹೆಲ್ಮೆಟ್, ಸಿಗ್ನಲ್ ಜಂಪ್ ಸೇರಿದಂತೆ ಒಟ್ಟು 643 ಬಾರಿ ನಿಯಮಗಳ ಉಲ್ಲಂಘನೆ ಆಗಿದೆ. ಸದ್ಯ ಈ ವೆಹಿಕಲ್ಗಾಗಿ ಪೊಲೀಸರು ಹುಡುಕಾಟ ನಡೆಸುತ್ತಿದ್ದಾರೆ.

## ಭ್ರೂಣ ಹತ್ಯೆ ಸುಳಿವು ನೀಡಿದವರಿಗೆ 1 ಲಕ್ಷ ಬಹುಮಾನ ಘೋಷಿಸಿದ ಆರೋಗ್ಯ ಇಲಾಖೆ



ಬೆಂಗಳೂರು: ರಾಜ್ಯದಲ್ಲಿ ಭ್ರೂಣ ಹತ್ಯೆ ಪ್ರಕರಣಗಳು ಹೆಚ್ಚು ಪತ್ತೆಯಾಗುತ್ತಿವೆ. ಹೀಗಾಗಿ ಆರೋಗ್ಯ ಇಲಾಖೆ ಮಾಸ್ಟರ್ ಪ್ಲಾನ್ ಮಾಡಿದ್ದು ಭ್ರೂಣ ಹತ್ಯೆ ಸಂಪೂರ್ಣ ನೆಲಸಮ ಮಾಡಲು ಮುಂದಾಗಿದೆ.

ರಾಜ್ಯದಲ್ಲಿ ಭ್ರೂಣ ಹತ್ಯೆ ಸುಳಿವು ನೀಡಿದವರಿಗೆ ರೂ 1 ಲಕ್ಷ ನಗದು ಬಹುಮಾನ ನೀಡುವುದಾಗಿ ಆರೋಗ್ಯ ಇಲಾಖೆ ಘೋಷಿಸಿದೆ. ಸುಳಿವು ನೀಡುವವರ ಹೆಸರನ್ನು ಗೌಪ್ಯವಾಗಿಡಲಾಗುವುದು ಎಂದು ತಿಳಿಸಿದೆ.

ಭ್ರೂಣ ಹತ್ಯೆ ಮಟ್ಟ ಹಾಕಲು ಆರೋಗ್ಯ ಇಲಾಖೆ ಹೊಸ ತಂತ್ರ ರೂಪಿಸಿದೆ. ರಾಜ್ಯದ ಜನರನ್ನೇ ದಾಳವಾಗಿಸಿಕೊಂಡು ಭ್ರೂಣ ಹತ್ಯೆಯನ್ನು ಬುಡಸಮೇತ ಕಿತ್ತು ಹಾಕಲು ಮುಂದಾಗಿದೆ. ರಾಜ್ಯದಲ್ಲಿ ಭ್ರೂಣ ಲಿಂಗ ಪತ್ತೆ ಹಾಗೂ ಹತ್ಯೆ ನಡೆಯುವ ಬಗ್ಗೆ ಸಾರ್ವಜನಿಕರು ಆರೋಗ್ಯ ಇಲಾಖೆಗೆ ಸುಳಿವು ನೀಡಿದರೆ ಬರೋಬ್ಬರಿ ಒಂದು ಲಕ್ಷ ಬಹುಮಾನ ನೀಡಲಾಗುವುದು ಎಂದು ಘೋಷಣೆ ಮಾಡಿದೆ. ಯಾವುದೇ ಭಾಗದಲ್ಲಿ ಆಸ್ಪತ್ರೆಯಲ್ಲಿ ಭ್ರೂಣಲಿಂಗ ಪತ್ತೆ ನಡೆಯುತ್ತಿರುವ ಬಗ್ಗೆ ಸಾರ್ವಜನಿಕರು ಸ್ಪಷ್ಟವಾಗಿ ಆರೋಗ್ಯ ಇಲಾಖೆಗೆ ಮಾಹಿತಿ ನೀಡಿದ್ರೆ ಸಾಕು. ಸುಳಿವು ನೀಡಿದವರಿಗೆ ಒಂದು ಲಕ್ಷ ಬಹುಮಾನ ಹಣ ನೀಡುತ್ತೇವೆ. ಮಾಹಿತಿ ನೀಡಿದವರ ಮಾಹಿತಿಯನ್ನ ಕೂಡಾ ಗೌಪ್ಯವಾಗಿ ಇಡಲಾಗುತ್ತೆ ಎಂದು ಆರೋಗ್ಯ ಇಲಾಖೆ ಅಧಿಕಾರಿಗಳು ತಿಳಿಸಿದ್ದಾರೆ.

ಇನ್ನು ಸಾರ್ವಜನಿಕರ ಸಹಾಯಕ್ಕಾಗಿ ಆರೋಗ್ಯ ಇಲಾಖೆ ಹೆಲ್ಪ್ ಲೈನ್ ತೆರೆದಿದ್ದು 080- 25202264/65 ಗೆ ಕರೆ ಮಾಡಿ ಮಾಹಿತಿ ನೀಡಬಹುದು ಎಂದು ತಿಳಿಸಿದೆ. ಸರಿಯಾದ ಮಾಹಿತಿ ನೀಡಿದ್ರೆ ಒಂದ ಲಕ್ಷ ಬಹುಮಾನ ನೀಡುವುದರ ಜೊತೆಗೆ ಯಾವುದೇ ಮಾಹಿತಿ ಬಹಿರಂಗ ಪಡಿಸದೇ ಇರಲು ಆರೋಗ್ಯ ಇಲಾಖೆ ನಿರ್ಧರಿಸಿದೆ.

ಇನ್ನು ಹೆಣ್ಣು ಭ್ರೂಣ ಹತ್ಯೆ ತಡೆಗೆ ರಾಜ್ಯ ಸರ್ಕಾರ ಕಾನೂನು ತಿದ್ದುಪಡಿ, ಹೊಸ ನೀತಿ ರೂಪಿಸುವುದು, ರಾಜ್ಯಮಟ್ಟದ ಕಾರ್ಯಪಡೆ ರಚನೆ ಸೇರಿದಂತೆ ಹಲವು ಕ್ರಮಗಳನ್ನು ಕೈಗೊಳ್ಳುತ್ತಿದೆ ಎಂದು ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ತಿಳಿಸಿದ್ದಾರೆ.

ರಾಜ್ಯದಲ್ಲಿ ಹೆಣ್ಣು ಭ್ರೂಣ ಹತ್ಯೆ, ಲಿಂಗ ಪತ್ತೆ ಬಗ್ಗೆ ಆರೋಗ್ಯ ಸಚಿವರು ಕಳವಳ ವ್ಯಕ್ತಪಡಿಸಿದರು. "ಅಂಕಿಅಂಶಗಳನ್ನು ನೋಡಿದರೆ, ಕಳೆದ ವರ್ಷ 1,000 ಪುರುಷರಿಗೆ 947 ಮಹಿಳೆಯರಿದ್ದರು, ಈ ವರ್ಷ 929 ಇದ್ದಾರೆ. ಮಹಿಳೆಯರ ಸಂಖ್ಯೆ ಕಡಿಮೆಯಾಗಿದೆ ಎಂದರು.

## ಸುಳ್ಳು ಹೇಳಿ ಮಹಿಳೆಯರನ್ನು ವಂಚಿಸುತ್ತಿದ್ದ ವ್ಯಕ್ತಿ ಬಂಧನ



ನವದೆಹಲಿ: ನಾನು ಸೇನಾ ವೈದ್ಯ, ನರಶಸ್ತ್ರ ಚಿಕಿತ್ಸಕ, ಪ್ರಧಾನ ಮಂತ್ರಿ ಕಚೇರಿಯ ಅಧಿಕಾರಿ ಎಂದೆಲ್ಲ ಸುಳ್ಳು ಹೇಳಿ ಮಹಿಳೆಯರನ್ನು ವಂಚಿಸುತ್ತಿದ್ದ ವ್ಯಕ್ತಿಯನ್ನು ಒರಿಸ್ಸಾದಲ್ಲಿ ಪೊಲೀಸರು ಬಂಧಿಸಿದ್ದಾರೆ.

ಜನರನ್ನು ವಂಚಿಸಿದ ಆರೋಪದ ಮೇಲೆ ಕಾಶ್ಮೀರದ ಕುಪ್ವಾರದ ವ್ಯಕ್ತಿಯನ್ನು ಒಡಿಶಾದಲ್ಲಿ ಬಂಧಿಸಲಾಗಿದೆ. ಕಾಲಕಾಲಕ್ಕೆ ತಮ್ಮ ಗುರುತನ್ನು ಬದಲಾಯಿಸುತ್ತಿದ್ದ. ನರಶಸ್ತ್ರ ಚಿಕಿತ್ಸಕ, ಸೇನಾ ವೈದ್ಯ, ಪ್ರಧಾನ ಮಂತ್ರಿ ಕಚೇರಿಯ ಅಧಿಕಾರಿ ಮತ್ತು ಉನ್ನತ ರಾಷ್ಟ್ರೀಯ ತನಿಖಾ ಸಂಸ್ಥೆ ಅಧಿಕಾರಿಗಳ ನಿಕಟ ಸಹವರ್ತಿ ಎಂದೆಲ್ಲ ಹೇಳಿಕೊಂಡು ಓಡಾಡುತ್ತಿದ್ದ.

ಒಡಿಶಾ ಪೊಲೀಸ್ ವಿಶೇಷ ಕಾರ್ಯಪಡೆ (ಎಸ್‌ಟಿಎಫ್), ಜನರನ್ನು ವಂಚಿಸಿದ್ದಕ್ಕಾಗಿ 37 ವಯಸ್ಸಿನ ಸೈಯದ್ ಇಶಾನ್ ಬುಖಾರಿ ಅಲಿಯಾಸ್ ಇಶಾನ್ ಬುಖಾರಿ ಅಲಿಯಾಸ್ ಡಾ ಇಶಾನ್ ಬುಖಾರಿಯನ್ನು ಒಡಿಶಾದ ಜೈಪುರ ಜಿಲ್ಲೆಯ ನ್ಯೂಲ್‌ಪುರ ಗ್ರಾಮದಲ್ಲಿ ಶನಿವಾರ ಬಂಧಿಸಿದೆ. ಹಲವಾರು ನಕಲಿ ಗುರುತುಗಳನ್ನು ಹೊಂದಿರುವ ವ್ಯಕ್ತಿ ಪಾಕಿಸ್ತಾನದ ಹಲವಾರು ಜನರೊಂದಿಗೆ ಮತ್ತು ಕೇರಳದ ಕೆಲವು ಅನುಮಾನಾಸ್ಪದ ಅಂಶಗಳೊಂದಿಗೆ ಸಂಪರ್ಕ ಹೊಂದಿದ್ದಾನೆ ಎಂದು ಎಸ್‌ಟಿಎಫ್ ಇನ್ಸ್‌ಪೆಕ್ಟರ್ ಜನರಲ್ ಜೆ.ಎನ್. ಪಂಕಜ್ ಹೇಳಿದ್ದಾರೆ.

ಯುಎಸ್‌ನ ಉನ್ನತ ಐವಿ ಲೀಗ್ ಕಾಲೇಜಾಗಿರುವ ಕಾರ್ನೆಲ್ ವಿಶ್ವವಿದ್ಯಾಲಯದ ನಕಲಿ ವೈದ್ಯಕೀಯ ಪದವಿ ಪ್ರಮಾಣಪತ್ರ ಹೊಂದಿದ್ದ. ಕೆನಡಿಯನ್ ಹೆಲ್ತ್ ಸರ್ವಿಸಸ್ ಇನ್‌ಸ್ಟಿಟ್ಯೂಟ್ ಮತ್ತು ತಮಿಳಿನಲ್ಲಿ ಕ್ರಿಶ್ಚಿಯನ್ ಮೆಡಿಕಲ್ ಕಾಲೇಜ್‌ನಿಂದ ವೈದ್ಯಕೀಯ ಪ್ರಮಾಣಪತ್ರವನ್ನು ನಕಲಿ ಮಾಡಿದ್ದ.

ಅಂತಾರಾಷ್ಟ್ರೀಯ ಪದವಿಗಳು, ಅಫಿಡವಿಟ್‌ಗಳು, ಬಾಂಡ್‌ಗಳು, ಎಟಿಎಂ ಕಾರ್ಡ್‌ಗಳು, ಖಾಲಿ ಚೆಕ್‌ಗಳು, ಆಧಾರ್ ಕಾರ್ಡ್‌ಗಳು ಮತ್ತು ವಿಸಿಟಿಂಗ್ ಕಾರ್ಡ್‌ಗಳನ್ನು ಇಟ್ಟುಕೊಂಡು ಸುಳ್ಳು ಹೇಳಿ ಜನರನ್ನು ವಂಚಿಸುತ್ತಿದ್ದ.

ಎಸ್‌ಟಿಎಫ್ ತಂಡಕ್ಕೆ ದೊರೆತ ಸುಳಿವು ಆಧರಿಸಿ ಪೊಲೀಸರು ನಡೆಸಿದ ದಾಳಿಯಲ್ಲಿ 100 ಕ್ಕೂ ಹೆಚ್ಚು ದಾಖಲೆಗಳು ಮತ್ತು ಹಲವಾರು ವಸ್ತುಗಳನ್ನು ವಶಪಡಿಸಿಕೊಂಡಿದ್ದಾರೆ.

## ಶೌಚ ಗುಂಡಿಗೆ ಮಕ್ಕಳನ್ನು ಇಳಿಸಿದ್ದ ಶಿಕ್ಷಕ; ಇಬ್ಬರ ಬಂಧನ



ಕೋಲಾರ: ಜಿಲ್ಲೆಯ ಮಾಲೂರು ತಾಲೂಕಿನ ಯಲುವಳ್ಳಿಯ ಮೊರಾರ್ಜಿ ದೇಸಾಯಿ ವಸತಿ ಶಾಲೆಯಲ್ಲಿ ವಿದ್ಯಾರ್ಥಿಗಳಿಂದ ಶೌಚಾಲಯದ ಗುಂಡಿ ಸ್ವಚ್ಛ ಮಾಡಿಸಿದ ಪ್ರಕರಣಕ್ಕೆ ಸಂಬಂಧಿಸಿದಂತೆ ಶಾಲೆಯ ಪ್ರಾಂಶುಪಾಲರು ಸೇರಿದಂತೆ ಇಬ್ಬರನ್ನು ಪೊಲೀಸರು ಬಂಧನಕ್ಕೊಳಪಡಿಸಿದ್ದಾರೆ. ಪ್ರಾಂಶುಪಾಲೆ ಭಾರತಮ್ಮ, ಸಹ ಶಿಕ್ಷಕ ಮುನಿಯಪ್ಪ ಬಂಧಿತರು. ಹಾಸ್ಟೆಲ್ ವಾರ್ಡನ್ ಮಂಜುನಾಥ್ ಮತ್ತು ಅತಿಥಿ ಶಿಕ್ಷಕ ಅಭಿಷೇಕ್ ಪರಾರಿ ಆಗಿದ್ದು, ಹುಡುಕಾಟ ನಡೆಸಲಾಗುತ್ತಿದೆ. ಸಮಾಜ ಕಲ್ಯಾಣ ಇಲಾಖೆ ಜಂಟಿ ನಿರ್ದೇಶಕ ಶ್ರೀನಿವಾಸ್ ದೂರು ಹಿನ್ನೆಲೆ ಮಲಹೊರುವ ಪದ್ಧತಿ ನಿಯಂತ್ರಣ ಕಾಯ್ದೆ, ಅಟ್ರಾಸಿಟಿ ಕಾಯ್ದೆಯಡಿ ನಾಲ್ವರ ವಿರುದ್ಧ ಎಫ್‌ಐಆರ್ ದಾಖಲಾಗಿತ್ತು. ಶಾಲೆಗೆ ಭೇಟಿ ಕೊಟ್ಟು ವಿದ್ಯಾರ್ಥಿಗಳೊಂದಿಗೆ ಮಾತುಕತೆ ನಡೆಸಿದ್ದೇನೆ. ವಿಸ್ತೃತ ವಿಚಾರಣೆ ನಡೆಸಲು ಉಪ ಪೊಲೀಸ್ ವರಿಷ್ಠಾಧಿಕಾರಿ ಮಲ್ಲೇಶ್ ಅವರನ್ನು ನಿಯೋಜಿಸಲಾಗಿದೆ ಎಂದು ಕೋಲಾರ ಪೊಲೀಸ್ ವರಿಷ್ಠಾಧಿಕಾರಿ ಎಂ.ನಾರಾಯಣ್ ಅವರು ತಿಳಿಸಿದ್ದಾರೆ.

## ಕೆಪಿಎಸ್‌ಸಿ ಪರೀಕ್ಷಾ ಅಭ್ಯರ್ಥಿಗಳ ತಪಾಸಣೆಗೆ ಮಕ್ಕಳ ಬಳಕೆ



ಮಂಗಳೂರು: ಲೆಕ್ಕಪರಿಶೋಧನೆ ಮತ್ತು ಲೆಕ್ಕಪತ್ರ ಇಲಾಖೆಯ ಗ್ರೂಪ್ ಸಿ ವೃಂದದ ಕಿರಿಯ ಲೆಕ್ಕ ಸಹಾಯಕ ಹುದ್ದೆಗಳ ನೇಮಕಾತಿಗೆ ಕರ್ನಾಟಕ ಲೋಕಸೇವಾ ಆಯೋಗವು ಭಾನುವಾರ ಸ್ಪರ್ಧಾತ್ಮಕ ಪರೀಕ್ಷೆ ನಡೆಸಿದ್ದು, ಈ ವೇಳೆ ಸ್ಪರ್ಧಾತ್ಮಕ ಪರೀಕ್ಷೆಗೆ ಹಾಜರಾದ ಅಭ್ಯರ್ಥಿಗಳ ತಪಾಸಣೆಗೆ ಮಕ್ಕಳನ್ನು ಬಳಕೆ ಮಾಡಿರುವುದಕ್ಕೆ ಆಕ್ಷೇಪ ವ್ಯಕ್ತವಾಗಿದೆ.

ಮಂಗಳೂರಿನ ಬಲ್ಮಠದ ಸರ್ಕಾರಿ ಮಹಿಳಾ ಕಾಲೇಜಿನಲ್ಲಿ ಭಾನುವಾರ ಪರೀಕ್ಷೆ ನಡೆಯಿತು. ಸಣ್ಣ ಸಣ್ಣ ಮಕ್ಕಳು ಸರ್ಕಾರದ ಸ್ಪರ್ಧಾತ್ಮಕ ಪರೀಕ್ಷಾ ಕೇಂದ್ರದಲ್ಲಿ ಅಭ್ಯರ್ಥಿಗಳ ತಪಾಸಣೆ ಮಾಡುವ ಕಾರ್ಯ ಮಾಡಿದ್ದು ಕಂಡು ಬಂದಿತ್ತು.

ಸರ್ಕಾರಿ ಪರೀಕ್ಷೆಗೆ ವಿದ್ಯಾರ್ಥಿಗಳನ್ನ ತಪಾಸಣೆಗೆ ಬಳಸಿಕೊಂಡು ಅಧಿಕಾರಿಗಳು ಬೇಜವಾಬ್ದಾರಿ ತೋರಿರುವುದು ಕಂಡು ಬಂದಿದೆ.

ಪರೀಕ್ಷಾ ಅಕ್ರಮವನ್ನು ತಡೆಯುವ ದೃಷ್ಟಿಯಿಂದ ಮೊಬೈಲ್ ಜಾಮರ್, ಮೆಟಲ್ ಡಿಟೆಕ್ಟರ್, ಬಯೋ ಮೆಟ್ರಿಕ್ ಫೇಸ್ ಡಿಟೆಕ್ಷನ್ ಹಾಗೂ ಬಾಡಿ ಕ್ಯಾಮೆರಾ ಬಳಕೆಗೆ ಕೆಪಿಎಸ್‌ಸಿ ಸೂಚಿಸಿದೆ. ಆದರೆ, ಅಧಿಕಾರಿಗಳು ವಿದ್ಯಾರ್ಥಿಗಳನ್ನು ಬಳಸಿಕೊಂಡು ಕಾಟಾಚಾರದ ತಪಾಸಣೆಯನ್ನು ನಡೆಸಿದ್ದಾರೆ.

ವಿದ್ಯಾರ್ಥಿಗಳು ಮೆಟಲ್ ಡಿಟೆಕ್ಟರ್ ಹಿಡಿದು ಪರೀಕ್ಷಾರ್ಥಿಗಳ ತಪಾಸಣೆ ಮಾಡಿದ್ದಾರೆ. ಮೆಟಲ್ ಡಿಟೆಕ್ಟರ್ ಹಿಡಿದು ನಿಂತ ವಿದ್ಯಾರ್ಥಿಗಳು ಬೇಕಾಬಿಟ್ಟಿಯಾಗಿ ಪರೀಕ್ಷಾರ್ಥಿಗಳನ್ನು ತಪಾಸಣೆ ಮಾಡಿರುವುದು ಕಂಡು ಬಂದಿದೆ. ಪರೀಕ್ಷಾ ಕೇಂದ್ರದ ಪ್ರವೇಶ ದ್ವಾರದಲ್ಲಿ ಏಳೆಂಟು ವಿದ್ಯಾರ್ಥಿಗಳಿಂದ ಅಭ್ಯರ್ಥಿಗಳ ತಪಾಸಣೆ ಮಾಡಲಾದ ಫೋಟೋಗಳು ಇದೀಗ ಸಾಮಾಜಿಕ ಜಾಲತಾಣಗಳಲ್ಲಿ ವೈರಲ್ ಆಗಿವೆ. ಭದ್ರತೆ ಬಗ್ಗೆ ಅರಿವೇ ಇಲ್ಲದ ಮಕ್ಕಳನ್ನು ಪರೀಕ್ಷಾ ಕೇಂದ್ರದ ಭದ್ರತೆಗೆ ನೇಮಕ ಮಾಡಲಾಗಿದ್ದು, ಈ ಮೂಲಕ ಕೆಪಿಎಸ್ಸಿ ಪರೀಕ್ಷಾ ನಿಯಮಗಳನ್ನು ಗಾಳಿಗೆ ತೂರಲಾಗಿದೆ. ಪರೀಕ್ಷಾ ಕೇಂದ್ರದ ಮೇಲ್ವಿಚಾರಕರು ಮಾತನಾಡಿ, ಪರೀಕ್ಷೆ ನಡೆಸಲು ಕೆಪಿಎಸ್‌ಸಿ ಸಂಸ್ಥೆಗೆ ಗುತ್ತಿಗೆ ನೀಡಿದೆ."ಸ್ಕ್ರೀನಿಂಗ್ ಪ್ರಕ್ರಿಯೆಯಲ್ಲಿ ತೊಡಗಿರುವವರು ನಮ್ಮ ಕಾಲೇಜಿನವರಲ್ಲ, ಗುತ್ತಿಗೆ ಪಡೆದ ಏಜೆನ್ಸಿಯಿಂದ ಬಂದವರಾಗಿದ್ದಾರೆಂದು ಹೇಳಿದ್ದಾರೆ.

## ಪ್ರವಾಹದ ನಡುವೆ ಹಸಮನೆ ಏರಿದ ದಂಪತಿ




ಚೆನ್ನೈ: ತಮಿಳುನಾಡು ಧಾರಾಕಾರ ಮಳೆ, ಪ್ರವಾಹದ ಅಬ್ಬರಕ್ಕೆ ತತ್ತರಿಸಿ ಹೋಗಿದೆ. ಅದರಲ್ಲೂ ತಿರುವನ್ವೇಲಿ, ಟೂಟಿಕಾರಿನ್, ಟೆನಕಾಶಿ, ಕನ್ಯಾಕುಮಾರಿ ಜಿಲ್ಲೆಗಳಲ್ಲಿ ಭಾರೀ ಮಳೆ ಸುರಿದಿದ್ದು ಜನಜೀವನ ಅಸ್ತವ್ಯಸ್ತವಾಗಿದೆ.

ಇಲ್ಲಿ ಶಾಲಾ ಕಾಲೇಜು, ಬ್ಯಾಂಕ್, ಖಾಸಗಿ ಕಚೇರಿಗಳಿಗೂ ರಜೆ ಘೋಷಣೆ ಮಾಡಲಾಗಿದ್ದು, ಎಸ್‌ಡಿಆರ್‌ಎಫ್ ತಂಡ ರಕ್ಷಣಾ ಕಾರ್ಯದಲ್ಲಿ ನಿರತವಾಗಿದೆ.

ಟೂಟಿಕಾರಿನ್ ಜಿಲ್ಲೆಯಲ್ಲಿ ಕಳೆದ 15 ಗಂಟೆಯಲ್ಲಿ 60 ಸೆಂಟಿಮೀಟರ್ ಮಳೆಯಾಗಿದೆ. ತಿರುವನ್ವೇಲಿ ಜಿಲ್ಲೆಯಲ್ಲಿ 26 ಸೆಂಟಿಮೀಟರ್, ಕನ್ಯಾಕುಮಾರಿ ಜಿಲ್ಲೆಯಲ್ಲಿ 17 ಸೆಂಟಿಮೀಟರ್ ಮಳೆಯಾಗಿದೆ. ಇದರ ಜೊತೆಗೆ ಗಂಟೆಗೆ 40 ರಿಂದ 55 ಕಿಲೋಮೀಟರ್ ವೇಗದಲ್ಲಿ ಬಿರುಗಾಳಿ ಬೀಸುತ್ತಿದೆ.

ಟೂಟಿಕಾರಿನ್‌ಗೆ ವಿಮಾನ ಲ್ಯಾಂಡಿಂಗ್, ಟೇಕಾಫ್ ರದ್ದು ಮಾಡಲಾಗಿದೆ. ತಿರುವನ್ವೇಲಿಗೆ ಹೋಗುವ 17 ರೈಲುಗಳ ಸಂಚಾರ ರದ್ದು ಮಾಡಲಾಗಿದೆ.

ಧಾರಾಕಾರ ಮಳೆ, ಪ್ರವಾಹದ ಮಧ್ಯೆಯೂ ತಮಿಳುನಾಡಿನಲ್ಲಿ ಅಪರೂಪದ ಮದುವೆಯೊಂದು ನಡೆದಿದೆ. ಮಳೆ ನೀರು ಮದುವೆ ಮಂಟಪಕ್ಕೆ ನುಗ್ಗಿದರೂ ಕ್ಯಾರೇ ಅನ್ನದ ವಧುವರರು ಫೋಟೋಶೂಟ್ ಮಾಡಿಸಿಕೊಂಡಿದ್ದಾರೆ. ಸಂಬಂಧಿಕರು ಅಷ್ಟೇ ಮಳೆ ನೀರಿನ ಮಧ್ಯೆ ವಿವಾಹ ಸಮಾರಂಭದಲ್ಲಿ ಭಾಗಿಯಾಗಿದ್ದಾರೆ. ಸದ್ಯ ಸೋಷಿಯಲ್ ಮೀಡಿಯಾದಲ್ಲಿ ಈ ವಿಡಿಯೋ ವೈರಲ್ ಆಗಿದೆ.

# ನೂತನವಾಗಿ ನಿರ್ಮಿಸಿದ ಶ್ರೀ ಪಾಂಡುರಂಗ ವಿಠ್ಠಲ ರುಕ್ಮೀಣಿ ದೇವಸ್ಥಾನ



ಗುಳೇದಗುಡ್ಡ: ತಾಲ್ಲೂಕಿನ ಮುರುಡಿ ಗ್ರಾಮದಲ್ಲಿ ಮೂರು ದಿನಗಳವರೆಗೆ ದೇವರ ಮೂರ್ತಿ ಪ್ರತಿಷ್ಠಾಪನೆ ನಿಮಿತ್ತ ಮೆರವಣಿಗೆ, ಮೂರ್ತಿ ಪ್ರತಿಷ್ಠಾಪನೆ ಹಾಗೂ ಸರ್ವ ಧರ್ಮಗಳ ಸಾಮೂಹಿಕ ವಿವಾಹ ಜರುಗಲಿದೆ.

ಡಿ.20 ರಂದು ಬೆಳಿಗ್ಗೆ 8 ಗಂಟೆಗೆ ಗುಳೇದಗುಡ್ಡದಿಂದ ಮುರುಡಿ ಗ್ರಾಮದವರೆಗೆ ಶ್ರೀ ಪಾಂಡುರಂಗ ವಿಠ್ಠಲ ರುಕ್ಮೀಣಿ ದೇವರ ಮೂರ್ತಿ ಮೆರವಣಿಗೆ ಜರುಗುವುದು. 21 ರಂದು ಬೆಳಿಗ್ಗೆ 8 ಗಂಟೆಗೆ ಮೂರ್ತಿ ಪ್ರತಿಷ್ಠಾಪನೆ ಜರುಗುವುದು. 22 ರಂದು ಶುಕ್ರವಾರ ಬೆಳಿಗ್ಗೆ 10.30 ಗಂಟೆಗೆ ಸರ್ವ ಧರ್ಮಗಳ ಸಾಮೂಹಿಕ ವಿವಾಹ ಜರುಗುವುದು.

ಪಂಢರಾಪುರದ ಶಿವುರಕರ ಮಹಾರಾಜರು, ಕೋಲಾರದ ಕಲ್ಲಿನಾಥ ಶ್ರೀಗಳು, ಬಬಲಾದಿ ಮಠದ ಸಿದ್ದರಾಮಯ್ಯ ಅಜ್ಜಾರು, ಧರ್ಮಸ್ಥಳದ ಶ್ರೀ ಮಂಜುನಾಥ ದೇವಸ್ಥಾನದ ಧರ್ಮಾಧಿಕಾರಿ ವಿರೇಂದ್ರ ಹೆಗಡೆ ಕಾರ್ಯಕ್ರಮದ ದಿವ್ಯ ಸಾನಿಧ್ಯ ವಹಿಸುವರು.

ಬಾದಾಮಿ ಶಾಸಕ ಭೀಮಸೇನ ಚಿಮ್ಮನಕಟ್ಟಿ ಕಾರ್ಯಕ್ರಮ ಉದ್ಘಾಟಿಸುವರು. ಮಾಜಿ ಸಾರಿಗೆ ಸಚಿವ ಶ್ರೀರಾಮುಲು ಪಾರಿವಾಳ ಹಾರಿ ಬಿಡುವರು. ಲೋಕಸಭಾ ಸಂಸದ ಪಿ.ಸಿ.ಗದ್ದಿಗೌಡರ ಜ್ಯೋತಿ ಬೆಳಗಿಸುವರು. ಹಾನಾಪೂರ ಎಸ್.ಪಿ. ಗ್ರಾಪಂ ಅಧ್ಯಕ್ಷ ಜಗದೀಶ ಹಿರೇಗೌಡ್ರ ಅಧ್ಯಕ್ಷತೆ ವಹಿಸುವರು. ಜಿಲ್ಲಾ ಉಸ್ತುವಾರಿ ಸಚಿವ ಆರ್.ಬಿ.ತಿಮ್ಮಾಪೂರ ಗೌರವಾಧ್ಯಕ್ಷತೆ ವಹಿಸುವರು. ಮುಖ್ಯ ಅತಿಥಿಗಳಾಗಿ ವಿವಿಧ ಮುಖಂಡರು ಪಾಲ್ಗೊಳ್ಳುವರು ಎಂದು ಸಂಘಟಕರು ತಿಳಿಸಿದ್ದಾರೆ.

# ಆಟಿಕೆ ಆಧಾರಿತ ಭೋದನಾ ಮೇಳ ಉದ್ಘಾಟಿಸಿದ ಬಿಇಒ ಜುಟ್ಟನ್ನವರ




ಚನ್ನಮ್ಮನ ಕಿತ್ತೂರು: ಗುರುವಾರ ಪೇಟೆಯಲ್ಲಿ ಇರುವ ಮಾದರಿ ಕನ್ನಡ ಪ್ರಾಥಮಿಕ ಶಾಲೆಯಲ್ಲಿ ಆಟಿಕೆ ಆಧಾರಿತ ಭೋದನಾ ಮೇಳ ಜರುಗಿತು. ಕ್ಷೇತ್ರ ಶಿಕ್ಷಣಾಧಿಕಾರಿ ಆರ.ಪಿ ಜುಟ್ಟನ್ನವರ ಉದ್ಘಾಟಿಸಿ ಮಾತನಾಡಿ ಶಾಲೆಗಳಲ್ಲಿ ಗುಣಮಟ್ಟದ ಶಿಕ್ಷಣಕ್ಕಾಗಿ ಆಟಿಕೆ ಆಧಾರಿತ ಚಟುವಟಿಕೆ ಮಹತ್ವದಾಗಿದ್ದು ಮಕ್ಕಳ ಕಲಿಕೆ ಪೂರಕವಾಗುತ್ತದೆ. ಮಕ್ಕಳು ಸುಲಭವಾಗಿ ಅರ್ಥಮಾಡಿಕೊಳ್ಳುತ್ತಾರೆ. ಎಂದರು

ಡಯಟ್ ಹಿರಿಯ ಉಪನ್ಯಾಸಕಿ ಮಂಗಳಾ ಕೊರಬು ಮಾತನಾಡಿ ಮಕ್ಕಳ ಏಕಾಗ್ರತೆಯನ್ನು ಈ ಆಟಿಕೆ ಆಧಾರಿತ ಭೋದನೆ ಹಿಡಿದಿಟ್ಟುಕೊಳ್ಳುವದರಿಂದ ಮಗುವಿನ ಕಲಿಕೆ ಸುಲಭವಾಗುತ್ತದೆ ಎಂದರು.ಅಥಿತಿಗಳಾಗಿ ಆಗಮಿಸಿದ ಗಾಯತ್ರಿ ಅಜ್ಜನ್ನವರ ಮಾತನಾಡಿ ಮಕ್ಕಳು ಓದು ಬರಹ ಲೆಕ್ಕಾಚಾರ ಕಲಿಯಲು ಈ ಆಟಿಕೆ ಆಧಾರಿತ ಭೋದನೆ ತುಂಬಾ ಉಪಯುಕ್ತವಾಗುತ್ತದೆ ಎಂದರು.

ಮೇಳದಲ್ಲಿ ಪಟ್ಟಣವ್ಯಾಪ್ತಿಯ ವಿವಿಧ ಶಾಲೆಗಳಿಂದ ಆಟಿಕೆ ಆಧಾರಿತ ಕಲಿಕೋಪಕರಣಗಳನ್ನು ಮಾಡಿಕೊಂಡು ಪ್ರದರ್ಶನ ನೀಡಿದರು. ಉತ್ತಮ ಆಯ್ಕೆಗಳನ್ನು ತಾಲೂಕ ಹಂತಕ್ಕೆ ಕಳುಹಿಸಲಾಯಿತು. ಸಭೆಯಲ್ಲಿ ಎಮ್. ಕೆ. ಹುಬ್ಬಳ್ಳಿಯ ಸಿ.ಆರ್.ಸಿ ಯ ಮುಖವಾಣಿಯಾದ ಧಾತ್ರಿ ತಿಂಗಳ ಪತ್ರಿಕೆಯನ್ನು ಬಿಡುಗಡೆ ಮಾಡಿದರು. ಸಭೆಯಲ್ಲಿ ಕಿತ್ತೂರ ಸಿ.ಆರ.ಪಿ ಗಳಾದ ಡಿ.ಎಚ್.ಪಾಟೀಲ ಎಸ.ವಾಯ್ ಕಾಶಪ್ಪನ್ನವರ ವಿನೋದ ಪಾಟೀಲ ಸುನೀತಾ ಪರಪ್ಪನ್ನವರ ಸುನಂದಾ ಪಾಟೀಲ ಅರ್ಜುನ ಕಾಗ್ಯಾಪ್ಪಗೋಳ ಸೇರಿದಂತೆ ಇತರರಿದ್ದರು.

# ಮದುವೆ ಸಮಾರಂಭದಿಂದ ಬರುತ್ತಿದ್ದ ಆರು ಮಂದಿ ಅಪಘಾತದಲ್ಲಿ ದುರ್ಮರಣ

ಮಹಾರಾಷ್ಟ್ರ: ಕ್ವಾಲಿಸ್ ಕಾರು ಮತ್ತು ಟ್ರಕ್ ನಡುವೆ ಸಂಭವಿಸಿದ ಭೀಕರ ರಸ್ತೆ ಅಪಘಾತದಲ್ಲಿ ಆರು ಜನರು ಮೃತಪಟ್ಟು, ಮತ್ತೊಬ್ಬ ವ್ಯಕ್ತಿ ಗಾಯಗೊಂಡಿರುವ ಘಟನೆ ಮಹಾರಾಷ್ಟ್ರದ ನಾಗ್ಪುರ ಸಮೀಪ ಶನಿವಾರ ಬೆಳಗಿನ ಜಾವ ನಡೆದಿದೆ.

ಮದುವೆ ಸಮಾರಂಭದಿಂದ ಹಿಂತಿರುಗುತ್ತಿರುವಾಗ ಈ ದುರಂತ ನಡೆದಿದೆ. ಮೃತರನ್ನು ಮಯೂರ್ ಇಂಗಳೆ (22), ವೈಭವ್ ಚಿಖಲೆ (32), ಸುಧಾಕರ್ ಮಾನಕರ್ (42), ವಿಠ್ಠಲ್ ತೋಟೆ (45), ಅಜಯ್ ಚಿಖಲೆ (40) ಮತ್ತು ರಮೇಶ ಹಲೊಂಡೆ ಎಂದು ಗುರುತಿಸಲಾಗಿದೆ. ಜಗದೀಶ್ ಧೋನ್ ಎಂಬಾತ ಗಂಭೀರವಾಗಿ ಗಾಯಗೊಂಡಿದ್ದಾರೆ. ಇವರೆಲ್ಲರೂ ನಾಗ್ಪುರ ಜಿಲ್ಲೆಯ ಕಟೋಲ್ ತಾಲೂಕಿನ ಮೆಂಡಿಪಥರ್ ಗ್ರಾಮದವರು ಎಂದು ತಿಳಿದು ಬಂದಿದೆ.

ನಾಗ್ಪುರದಿಂದ ಕಟೋಲ್ ಕಡೆಗೆ ಹೋಗುತ್ತಿದ್ದಾಗ ಸೋಂಖಾಂಬ್ ಮತ್ತು ತಾರಾಬೋಡಿ ಗ್ರಾಮಗಳ ಮಧ್ಯೆ ಕಾರಿಗೆ ಟ್ರಕ್ ಡಿಕ್ಕಿ ಹೊಡೆದಿದೆ. ಪರಿಣಾಮ ಕಾರಿನಲ್ಲಿದ್ದ ಆರು ಮಂದಿ ಸಾವನ್ನಪ್ಪಿದ್ದಾರೆ. ಮತ್ತೊಂದೆಡೆ, ವಿಷಯ ತಿಳಿದು ಸ್ಥಳಕ್ಕೆ ದೌಡಾಯಿಸಿದ ಪೊಲೀಸರು ಪರಿಶೀಲನೆ ನಡೆಸಿ ಆಸ್ಪತ್ರೆಗೆ ಸಾಗಿದ್ದಾರೆ.

# ಅರ್ಧ ಕೆ.ಜಿಗೂ ಅಧಿಕ ಚಿನ್ನಾಭರಣ, 4 ಕೆ.ಜಿ ಬೆಳ್ಳಿ ಕಳವು

ಕೊಪ್ಪಳ: ನಗರದಲ್ಲಿ ಭಾನುವಾರ ರಾತ್ರಿ ಕಳ್ಳತನ ನಡೆದಿದ್ದು, ಜನರಲ್ಲಿ ಆತಂಕ ಮೂಡಿದೆ. ನಗರದ ಕಿನ್ನಾಳ ರಸ್ತೆಯ ಎಫ್. ಸಿ.ಐ ಗೋದಾಮಿನ ಎದುರು ಇರುವ ಉಲ್ಲಾಸ್ ವೆಂಕಟೇಶ ರಾಯ್ಕರ್ ಅವರ ಮನೆ ಸೇರಿದಂತೆ ಎರಡು ಮನೆಗಳಲ್ಲಿ ಕಳ್ಳತನ ನಡೆದಿದೆ.

ಉಲ್ಲಾಸ ಅವರ ಮನೆಯಲ್ಲಿ ಸುಮಾರು 50 ತೊಲೆ ಚಿನ್ನಾಭರಣ, ನಾಲ್ಕು ಕೆ, ಜಿ ಬೆಳ್ಳಿ ಹಾಗೂ 50 ಸಾವಿರ ನಗದು ಕಳ್ಳತನವಾಗಿದೆ ಎಂದು ಪ್ರಾಥಮಿಕ ಮಾಹಿತಿಯಿಂದ ತಿಳಿದು ಬಂದಿದೆ ಎಂದು ಪೊಲೀಸ್ ಮೂಲಗಳು ತಿಳಿಸಿವೆ. ಉಲ್ಲಾಸ ಅವರು ಇತ್ತೀಚೆಗೆ ಚಿನ್ನಾಭರಣದ ಅಂಗಡಿ ಪ್ರಾರಂಭಿಸಿದ್ದರು. ಹೊಸ ಅಂಗಡಿಯಲ್ಲಿ ಲಾಕರ್ ಇರದ ಕಾರಣ ಮನೆಯಲ್ಲಿ ಬಂಗಾರ ಹಾಗೂ ಬೆಳ್ಳಿ ಸಾಮಗ್ರಿಗಳನ್ನು ಇರಿಸಿದ್ದರು. ಅವರು ಊರಿಗೆ ತೆರಳಿದ್ದಾಗ ಘಟನೆ ನಡೆದಿದೆ.

ನಗರ ಠಾಣೆಯ ಪೊಲೀಸರು ಮನೆಗೆ ಭೇಟಿ ನೀಡಿ ಪರಿಶೀಲನೆ ನಡೆಸುತ್ತಿದ್ದಾರೆ. ಇಲ್ಲಿನ ಬಸವ ನಗರದಲ್ಲಿ ಎರಡು ದಿನಗಳ ಹಿಂದೆಯೂ ಘಟನೆ ನಡೆದಿದ್ದು ಹತ್ತು ತೊಲೆ ಚಿನ್ನಾಭರಣ ಹಾಗೂ 25 ಸಾವಿರ ನಗದು ಕಳುವಾಗಿತ್ತು. ರಾಯರ ಮಠದ ಸುತ್ತಲಿನ ಮನೆಯಲ್ಲಿ ಶನಿವಾರ ಕಳ್ಳತನವಾಗಿದೆ. ಮೇಲಿಂದ ಮೇಲೆ ಕಳ್ಳತನ ನಡೆಯುತ್ತಿರುವ ಕಾರಣ ಜನ ಆತಂಕಗೊಂಡಿದ್ದಾರೆ.

# ನಟ ವಿಷ್ಣುವರ್ಧನ್ ಪುಣ್ಯಭೂಮಿ ಅಭಿವೃದ್ಧಿಪಡಿಸುವಂತೆ ಆಗ್ರಹ: ಅಭಿಮಾನಿಗಳಿಂದ ಪ್ರತಿಭಟನೆ



ಬೆಂಗಳೂರು: ನಟ ಡಾ.ವಿಷ್ಣುವರ್ಧನ್ ಸ್ಮಾರಕ ವಿವಾದ ಬಗೆಹರಿಸುವಂತೆ ಒತ್ತಾಯಿಸಿ 50 ಕ್ಕೂ ಹೆಚ್ಚು ವಿವಿದ ಸಂಘಟನೆಗಳ ಮುಖಂಡರು, ಕಾರ್ಯಕರ್ತರು ಹಾಗೂ ವಿಷ್ಣುವರ್ಧನ್ ಅವರ ಅಭಿಮಾನಿಗಳು ನಗರದ ಫ್ರೀಡಂ ಪಾರ್ಕ್ ನಲ್ಲಿ ಬೃಹತ್ ಪ್ರತಿಭನೆ ನಡೆಸಿದರು.

2009ರ ಡಿಸೆಂಬರ್ ತಿಂಗಳಿನಲ್ಲಿ ನಿಧನರಾದ ವಿಷ್ಣುವರ್ಧನ್ ಅವರ ಅಂತ್ಯಕ್ರಿಯೆಯನ್ನು ಉತ್ತರಹಳ್ಳಿ–ಕೆಂಗೇರಿ ರಸ್ತೆಯಲ್ಲಿರುವ ಅಭಿಮಾನ್ ಸ್ಟುಡಿಯೋದಲ್ಲಿ ನೆರವೇರಿಸಲಾಗಿತ್ತು.

ಇದೀಗ ಈಗಾಗಲೇ ಮೈಸೂರಿನಲ್ಲಿ ವಿಷ್ಣುವರ್ಧನ್ ಅವರ ಸ್ಮಾರಕವನ್ನು ನಿರ್ಮಾಣ ಮಾಡಲಾಗಿದೆ, ಆದರೆ, ಇದನ್ನು ಒಪ್ಪದ ಅಭಿಮಾನಿಗಳು ಅಂತ್ಯಕ್ರಿಯೆ ನಡೆಸಿದ ಭೂಮಿಯನ್ನೇ ಅಭಿವೃದ್ಧಿಪಡಿಸಿ ಅಭಿಮಾನಿಗಳ ಭೇಟಿಗೆ ಅವಕಾಶ ಕಲ್ಪಿಸಬೇಕೆಂದು ಒತ್ತಾಯಿಸುತ್ತಿದ್ದಾರೆ.

ಈ ಪ್ರತಿಭಟನೆಗೆ ಕರ್ನಾಟಕ ರಕ್ಷಣಾ ವೇದಿಕೆ (ಕ.ರಾ.ವಿ.) (ಟಿ.ಎ. ನಾರಾಯಣಗೌಡ ಬಣ), ದಲಿತ ಸಂಘರ್ಷ ಸಮಿತಿ, ಕನ್ನಡ ಸಾಹಿತ್ಯ ಪರಿಷತ್ತಿನ ಬೆಂಗಳೂರು ಘಟಕ ಸೇರಿದಂತೆ ಸುಮಾರು 40 ಸಂಘಟನೆಗಳು ಬೆಂಬಲ ಸೂಚಿಸಿವೆ.

ಒಕ್ಕೂಟದ ಮುಖಂಡ ವೀರಕಪುತ್ರ ಶ್ರೀನಿವಾಸ್ ಮಾತನಾಡಿ. 'ಕನ್ನಡ ಚಿತ್ರರಂಗದ ಮೇರುನಟ ವಿಷ್ಣುವರ್ಧನ್. ಅಭಿಮಾನ್ ಸ್ಟುಡಿಯೊದಲ್ಲಿ ಅವರ ಪುಣ್ಯಭೂಮಿ ಇದೆ. ಅಭಿಮಾನಿಗಳು ಪುಣ್ಯಭೂಮಿಗೆ ಹೋಗಲು ಸ್ಟುಡಿಯೊ ಮಾಲೀಕರು ನಿರ್ಬಂಧ ವಿಧಿಸುತ್ತಿದ್ದಾರೆ.

ವಿಷ್ಣುವರ್ಧನ್ ಅವರ ಜನ್ಮದಿನ ಮತ್ತು ಪುಣ್ಯಸ್ಮರಣೆ ಆಚರಿಸಲು ತೊಂದರೆ ಉಂಟಾಗುತ್ತಿದೆ.

ವಿಷ್ಣುವರ್ಧನ್ ಅವರ ಪುಣ್ಯಭೂಮಿ ಅಭಿವೃದ್ಧಿಗಾಗಿ ಅಭಿಮಾನಿಗಳು ಕಳೆದ 14 ವರ್ಷಗಳಿಂದ ಹೋರಾಟ ನಡೆಸುತ್ತಿದ್ದಾರೆ. ಎಲ್ಲಾ ವರ್ಷಗಳಲ್ಲಿಯೂ ಸರ್ಕಾರಕ್ಕೆ ಮನವಿ ಸಲ್ಲಿಸಿದ್ದೇವೆ.

ಮೂರು ತಿಂಗಳ ಹಿಂದೆ ಡಿಸಿಎಂ ಡಿ.ಕೆ.ಶಿವಕುಮಾರ್ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಚಿವ ಶಿವರಾಜ್ ತಂಗಡಗಿ ಅವರಿಗೆ ಮನವಿ ಸಲ್ಲಿಸಿದ್ದೆವು. ಯಾವುದೇ ಪ್ರಗತಿಯಾಗದ ಕಾರಣ ಪ್ರತಿಭಟನೆ ನಡೆಸಲು ನಿರ್ಧರಿಸಿದೆವು.

ನಮ್ಮ ಪ್ರತಿಭಟನೆಗೆ 40 ಕ್ಕೂ ಹೆಚ್ಚು ಸಂಘಟನೆಗಳು ಬೆಂಬಲ ವ್ಯಕ್ತಪಡಿಸಿವೆ. ಈ ಸಂಬಂಧ ಸರ್ಕಾರ ಪ್ರತಿಕ್ರಿಯೆ ಆಧರಿಸಿ ಮುಂದಿನ ನಡೆಯನ್ನು ನಿರ್ಧರಿಸುತ್ತೇವೆ. ಬೇಡಿಕೆ ಈಡೇರದಿದ್ದಲ್ಲಿ ತಾಲ್ಲೂಕು ಮಟ್ಟದಲ್ಲಿ ಪ್ರತಿಭಟನೆ ನಡೆಸುತ್ತೇವೆ, ಸರ್ಕಾರಕ್ಕೆ ಜಮೀನಿನ ವೆಚ್ಚ ಭರಿಸಲು ಸಾಧ್ಯವಾಗದಿದ್ದರೆ ಅಭಿಮಾನಿಗಳು ಭರಿಸಲಿದ್ದಾರೆಂದು ಹೇಳಿದರು.

# ನಾದಿನಿ ಜೊತೆ ಅಕ್ರಮ ಸಂಬಂಧ; ಮನನೊಂದು ಹುಬ್ಬಳ್ಳಿಯಲ್ಲಿ ಆತ್ಮಹತ್ಯೆಗೆ ಶರಣಾದ ಇಬ್ಬರು



ಹುಬ್ಬಳ್ಳಿ: ಹೆಂಡತಿಯ ಸಹೋದರಿ ಜೊತೆ ಅಕ್ರಮ ಸಂಬಂಧ ಹೊಂದಿದ್ದ ಗಂಡ ಹಾಗೂ ನಾದಿನಿ ನೇಣಿಗೆ ಶರಣಾಗಿರೋ ಘಟನೆ ಬೆಳಕಿಗೆ ಬಂದಿದೆ. ಲೋಕೇಶ್ ಹಾಗೂ ಶಾಂತಿ ಮೃತ ದುರ್ದೈವಿಗಳು. ಈ ಇಬ್ಬರು ಬೆಂಗಳೂರಿನ ಪೀಣ್ಯದಲ್ಲಿ ನೆಲೆಸಿದ್ದು ಹುಬ್ಬಳ್ಳಿಗೆ ಹೋಗಿ ಆಟೋ ಡ್ರೈವರ್ ಮನೆಯಲ್ಲಿ ಸಾವಿಗೆ ಶರಣಾಗಿದ್ದಾರೆ.

ಪೀಣ್ಯದ ಲೋಕೇಶ್ ತನ್ನ ಹೆಂಡತಿ ಪಾರ್ವತಿಯ ಸಹೋದರಿ ಶಾಂತಿ ಜೊತೆ ಅಕ್ರಮ ಸಂಬಂಧ ಹೊಂದಿದ್ದ. ನಾದಿನಿ ಶಾಂತಿಗೆ ಹಲವು ವರ್ಷಗಳ ಹಿಂದೆ ಆಂಧ್ರ ಮೂಲದ ವ್ಯಕ್ತಿಯೊಂದಿಗೆ ಮದುವೆಯಾಗಿತ್ತು. ಆದರೆ ಲೋಕೇಶ್ ಜೊತೆ ಹಲವಾರು ವರ್ಷಗಳಿಂದ ಸಂಬಂಧ ಇತ್ತು. ಬೆಂಗಳೂರಿನ ಮನೆಯಲ್ಲಿ ಹೆಂಡತಿ ಪಾರ್ವತಿ ಕೈಯಲ್ಲಿ ಲೋಕೇಶ್ ಹಾಗೂ ಶಾಂತಿ ರೆಡ್ ಹ್ಯಾಂಡ್ ಆಗಿ ಸಿಕ್ಕಿದ್ದರು.

ಕಳೆದ ಶುಕ್ರವಾರ ಲೋಕೇಶನ ಹೆಂಡತಿ ಪಾರ್ವತಿಗೆ ಇಬ್ಬರು ರೆಡ್ ಹ್ಯಾಂಡ್ ಆಗಿ ಸಿಕ್ಕಿಬಿದ್ದಿದ್ದರು. ನಂತರ ಇದ್ದಕ್ಕಿದ್ದಂತೆ ಇಬ್ಬರು ಪರಾರಿಯಾಗಿದ್ದರು.

ಭಾನುವಾರ ಈ ಜೋಡಿ ಹುಬ್ಬಳ್ಳಿಗೆ ತೆರಳಿದ್ದು ಆಟೋ ಡ್ರೈವರ್‌ನ ಸಹಾಯ ಪಡೆದಿದ್ದಾರೆ. ಆಟೋ ಡ್ರೈವರ್ ಬಳಿ ಯಾವುದಾದರೂ ಲಾಡ್ಜ್‌ನಲ್ಲಿ ಉಳಿದುಕೊಳ್ಳಲು ವ್ಯವಸ್ಥೆ ಮಾಡಲು ಕೇಳಿದ್ದಾರೆ.

ಒಂದೇ ಸಮುದಾಯದವರು ಎಂಬ ಕಾರಣಕ್ಕೆ ಆಟೋ ಡ್ರೈವರ್ ಆಗೋಕೆ ಲಾಡ್ಜ್ ಯಾಕೆ? ನಮ್ಮ ಮನೆಯಲ್ಲಿಯೇ ಇರಿ ಎಂದಿದ್ದಾರೆ. ಗಂಡ, ಹೆಂಡತಿ ಆಗಿರಬಹುದು ಎಂದುಕೊಂಡಿದ್ದ ಆಟೋ ಡ್ರೈವರ್ ತನ್ನ ಮನೆಯನ್ನು ಬಳಸಲು ಹೇಳಿದ್ದಾರೆ. ಕೊನೆಗೆ ಆಟೋ ಡ್ರೈವರ್ ಫೋನ್ ರಿಸೀವ್ ಮಾಡದಿದ್ದಾಗ ಅನುಮಾನದಿಂದ ಮನೆಗೆ ತೆರಳಿ ನೋಡಿದಾಗ ಇಬ್ಬರೂ ನೇಣಿಗೆ ಶರಣಾಗಿದ್ದರು. ಆಟೋ ಡ್ರೈವರ್ ಮಾರುತಿ ಎಂಬುವವರು ಹಳೇ ಹುಬ್ಬಳ್ಳಿ ಪೊಲೀಸರಿಗೆ ಮಾಹಿತಿ ನೀಡಿದ್ದಾರೆ.

# ತಾವರಗೇರಾ: ಕನಕದಾಸ ಜಯಂತಿ ಆಚರಣೆ



ತಾವರಗೇರಾ ಪಟ್ಟಣದಲ್ಲಿ ಭಾನುವಾರ ಹಾಲುಮತ ಸಮಾಜದ ವತಿಯಿಂದ ಕನಕದಾಸ ಜಯಂತಿ ಪ್ರಯುಕ್ತ ಮಹಿಳೆಯರ ಕುಂಭ, ಕಳಸ ಮತ್ತು ಸ್ತಬ್ಧ ಚಿತ್ರ ಮೆರವಣಿಗೆ ನಡೆಯಿತು.

ತಾವರಗೇರಾ: ಸ್ಥಳೀಯ ಹಾಲುಮತ ಸಮಾಜದ ವತಿಯಿಂದ ಭಾನುವಾರ ನಡೆದ ಕನಕದಾಸ ಜಯಂತಿ ಕಾರ್ಯಕ್ರಮಕ್ಕೆ ಶಾಸಕ ದೊಡ್ಡನಗೌಡ ಪಾಟೀಲ್ ಕನಕದಾಸ ವೃತ್ತದ ಕನಕದಾಸರ ಪ್ರತಿಮೆಗೆ ಹೂ ಮಾಲೆ ಹಾಕುವ ಮೂಲಕ ಚಾಲನೆ ನೀಡಿದರು.

ಹಾಲುಮತ ಸಮಾಜದ ಮಹಿಳೆಯರ ಕುಂಭ, ಕಳಸ ಮತ್ತು ಭಜನೆ, ಡೊಳ್ಳು ವಾದ್ಯಗಳೊಂದಿಗೆ ಕನಕದಾಸ ವೃತ್ತದಿಂದ ಪ್ರಮುಖ ಬೀದಿಗಳಲ್ಲಿ ಸ್ತಬ್ಧ ಚಿತ್ರ ಮೆರವಣಿಗೆ ಮತ್ತು ಕನಕದಾಸರ ಭಾವಚಿತ್ರ ಮೆರವಣಿಗೆ ಮಾಡಲಾಯಿತು.

ತಾವರಗೇರಾ ಪಟ್ಟಣದಲ್ಲಿ ಭಾನುವಾರಹಾಲುಮತ ಸಮಾಜದ ವತಿಯಿಂದ ನಡೆದ ಕನಕದಾಸ ಜಯಂತಿ ಕಾರ್ಯಕ್ರಮಕ್ಕೆ ಶಾಸಕ ದೊಡ್ಡನಗೌಡ ಪಾಟೀಲ್ ಕನಕದಾಸ ವೃತ್ತದ ಕನಕದಾಸರ ಪ್ರತಿಮೆಗೆ ಹೂ ಮಾಲೆ ಹಾಕುವ ಮೂಲಕ ಚಾಲನೆ ನೀಡಿದರು.

ತಾವರಗೇರಾ ಪಟ್ಟಣದಲ್ಲಿ ಭಾನುವಾರಹಾಲುಮತ ಸಮಾಜದ ವತಿಯಿಂದ ನಡೆದ ಕನಕದಾಸ ಜಯಂತಿ ಕಾರ್ಯಕ್ರಮಕ್ಕೆ ಶಾಸಕ ದೊಡ್ಡನಗೌಡ ಪಾಟೀಲ್ ಕನಕದಾಸ ವೃತ್ತದ ಕನಕದಾಸರ ಪ್ರತಿಮೆಗೆ ಹೂ ಮಾಲೆ ಹಾಕುವ ಮೂಲಕ ಚಾಲನೆ ನೀಡಿದರು.

ವೃತ್ತದಲ್ಲಿ ಕನಕದಾಸ ಪ್ರತಿಮೆಗೆ ಹೂ, ದೀಪಾಲಂಕಾರದಿಂದ ಶೃಂಗಾರ ಮಾಡಲಾಗಿತ್ತು. ಮುಖಂಡ ಚಂದ್ರಶೇಖರಗೌಡ ಪೊಲೀಸ್ ಪಾಟೀಲ್, ಜಿಪಂ ಮಾಜಿ ಸದಸ್ಯ ಕೆ.ಮಹೇಶ, ಹಾಲುಮತ ಸಮಾಜದ ಪ್ರಮುಖರು ಮತ್ತು ವಿವಿಧ ಸಮಾಜದ ಹಿರಿಯರು ಮಹಿಳೆಯರು ಇದ್ದರು.

# ಉತ್ತಮ ಆರೋಗ್ಯಕ್ಕೆ ಕ್ರೀಡೆ ಅವಶ್ಯಕ: ದತ್ತಾತ್ರೇಯ ಹೆಗ್ಡೆ



**ಕನಕಗಿರಿ ಪಿಯು ಕಾಲೇಜಿನಲ್ಲಿ ಶನಿವಾರ ಆಯೋಜಿಸಿದ್ದ ಇಸಿಎಲ್ ಪಂದ್ಯಾವಳಿಯನ್ನು ಪಟ್ಟಣ ಪಂಚಾಯಿತಿ ಮುಖ್ಯಾಧಿಕಾರಿ ದತ್ತಾತ್ರೇಯ ಹೆಗ್ಡೆ ಅವರು ಉದ್ಘಾಟಿಸಿದರು**

ಕನಕಗಿರಿ: ವಿವಿಧ ಇಲಾಖೆಗಳ ಸರ್ಕಾರಿ ಹಾಗೂ ಖಾಸಗಿ ನೌಕರರು ಒತ್ತಡದಲ್ಲಿ ಕೆಲಸ ಮಾಡುತ್ತಿರುವುದು ಕಂಡು ಬಂದಿದ್ದು ಸೇವೆಯ ಜತೆಗೆ ನೌಕರರು ಕ್ರೀಡೆ, ಇಲ್ಲಿನ ಸರ್ಕಾರಿ ಪದವಿ ಪೂರ್ವ ಕಾಲೇಜಿನ ಮೈದಾನದಲ್ಲಿ ಶನಿವಾರ ನಡೆದ ಇಸಿಎಲ್ ಟೂರ್ನಿಯನ್ನು ಉದ್ಘಾಟಿಸಿ ಅವರು ಮಾತನಾಡಿದರು. ದೈಹಿಕ, ಮಾನಸಿಕ ಹಾಗೂ ಬೌದ್ಧಿಕ ಬೆಳವಣಿಗೆ ಹಾಗೂ ಮನೋಲ್ಲಾಸಕ್ಕಾಗಿ ಆಟೋಟಗಳು ಹಾಗೂ ಸಂಗೀತ ಕಾರ್ಯಕ್ರಮ ಪೂರಕವಾಗಿದೆ, ಪ್ರತಿ ದಿನವೂ ಆಟದ ಮೈದಾನದಲ್ಲಿದ್ದು ದೈಹಿಕ ಕಸರತ್ತುಗಳನ್ನು ಮಾಡಬೇಕೆಂದು ಹೇಳಿದರು.

ತಾಲ್ಲೂಕು ಪಂಚಾಯಿತಿ ಪ್ರಭಾರ ಇಒ ಚಂದ್ರಶೇಖರ ಕಂದಕೂರು ಮಾತನಾಡಿ, ಜಂಜಾಟಗಳ ಮಧ್ಯೆಯೂ ನೌಕರರು ಆರೋಗ್ಯದ ಕಡೆಗೆ ಗಮನ ನೀಡಬೇಕೆಂದು ಹೇಳಿದರು.

ರಾಜ್ಯ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ತಾಲ್ಲೂಕು ಅಧ್ಯಕ್ಷೆ ಶಂಶಾದ್ ಬೇಗಂ ಮಾತನಾಡಿ, ತಾಲ್ಲೂಕಿನ ನೌಕರರು ಕ್ರೀಡೆ ಒಳಗೊಂಡಂತೆ ಸಹ ಪಠ್ಯ ಚಟುವಟಿಕೆಗಳಲ್ಲಿ ತಾಲ್ಲೂಕಿನ ಕೀರ್ತಿ ತರುವ ಕೆಲಸ ಮಾಡಬೇಕು. ನೌಕರರಿಗೆ ಸದಾ ತಾವು ಬೆಂಬಲ ನೀಡಲಾಗುವುದು ಎಂದು ಹೇಳಿದರು.

ಕ್ರಿಕೆಟ್ ಲೀಗ್ ಅಧ್ಯಕ್ಷ ಶಿವರೆಡ್ಡಿ ಮಣ್ಣೂರು ಮಾತನಾಡಿದರು.

# ಆನೆಕಾಲು ರೋಗ ಸಮೀಕ್ಷೆ: 154 ಜನರ ರಕ್ತ ಲೇಪನ ಸಂಗ್ರಹ



ಮುದ್ದೇಬಿಹಾಳ ತಾಲ್ಲೂಕಿನ ಕೋಳೂರು ಗ್ರಾಮದಲ್ಲಿ ಶುಕ್ರವಾರ ರಾತ್ರಿ ಆನೆಕಾಲು ರೋಗ ಸಮೀಕ್ಷೆ ಹಿನ್ನೆಲೆಯಲ್ಲಿ ಗ್ರಾಮಸ್ಥರ ರಕ್ತಲೇಪನ ಸಂಗ್ರಹ ಮಾಡಲಾಯಿತು


ಮುದ್ದೇಬಿಹಾಳ: ತಾಲ್ಲೂಕಿನ ತಂಗಡಗಿ ಗ್ರಾಮದ ಪ್ರಾಥಮಿಕ ಆರೋಗ್ಯ ಕೇಂದ್ರ ವ್ಯಾಪ್ತಿಯ ಕೋಳೂರು ಗ್ರಾಮದಲ್ಲಿ ಶುಕ್ರವಾರ ರಾತ್ರಿ ಆನೆಕಾಲು ರೋಗ ಸಮೀಕ್ಷೆಗಾಗಿ ಗ್ರಾಮಸ್ಥರ ರಕ್ತಲೇಪನ ಸಂಗ್ರಹ ಕಾರ್ಯಕ್ರಮ ನಡೆಸಲಾಯಿತು.

ಆರೋಗ್ಯ ನಿರೀಕ್ಷಣಾಧಿಕಾರಿ ಎಂ.ಎಸ್. ಗೌಡರ, ಆನೆಕಾಲು ರೋಗವು ಪೈಲೇರಿಯಾ ಸೋಂಕು ಹೊಂದಿದ ಕ್ಯೂಲೆಕ್ಸ್ ಸೊಳ್ಳೆಗಳ ಕಚ್ಚುವಿಕೆಯಿಂದ ಒಬ್ಬರಿಂದ ಒಬ್ಬರಿಗೆ ಹರಡುತ್ತದೆ. ಮುಖ್ಯವಾಗಿ ನಾವು ವಾಸಿಸುವ ಸುತ್ತಮುತ್ತಲಿನ ಪರಿಸರವನ್ನು ಸ್ವಚ್ಛವಾಗಿಟ್ಟುಕೊಳ್ಳಬೇಕು.

ರೋಗ ನಿಯಂತ್ರಣಕ್ಕಾಗಿ ಹಾಗೂ ರೋಗಿಗಳ ಪತ್ತೆ ಮಾಡುವುದು ಕಷ್ಟಕರವಾಗಿದ್ದು ಆನೆಕಾಲು ರೋಗದ ಪತ್ತೆಗಾಗಿ ರಾತ್ರಿ ವೇಳೆಯಲ್ಲಿಯೇ ರಕ್ತದ ಮಾದರಿ ಸಂಗ್ರಹಿಸಬೇಕಾಗುತ್ತದೆ. ಆರೋಗ್ಯ ಇಲಾಖೆಯ ನಿರ್ದೇಶನದಂತೆ ತಾಲ್ಲೂಕಿನಾದ್ಯಂತ ಪ್ರಾಥಮಿಕ ಆರೋಗ್ಯ ಕೇಂದ್ರವಾರು ಸಮೀಕ್ಷೆ ಕೈಗೊಳ್ಳಲಾಗಿದೆ ಎಂದರು.

ಸುಮಾರು 154 ಜನರ ರಕ್ತ ಲೇಪನಗಳನ್ನು ಸಂಗ್ರಹಿಸಿ ಅವುಗಳನ್ನು ಪರೀಕ್ಷೆಗಾಗಿ ಪ್ರಯೋಗಾಲಯಕ್ಕೆ ತಲುಪಿಸಲಾಯಿತು. ಸಮೀಕ್ಷಾ ಕಾರ್ಯದಲ್ಲಿ ಪ್ರಾಥಮಿಕ ಆರೋಗ್ಯ ಕೇಂದ್ರದ ಪ್ರಯೋಗ ಶಾಲಾ ತಾಂತ್ರಿಕ ಅಧಿಕಾರಿ ಮಹಮ್ಮದ್‌ರಫೀಕ್ ನಾಗರಾಳ, ಹಿರಿಯ ಆರೋಗ್ಯ ನಿರೀಕ್ಷಣಾಧಿಕಾರಿ ಬಿ.ಎಸ್.ಶಿವಯೋಗಿಮಠ ,ಆರೋಗ್ಯ ನಿರೀಕ್ಷಣಾಧಿಕಾರಿ ಎಂ.ಎಸ್.ಗೌಡರ, ಎಸ್.ಐ.ಕಮಲಪ್ಪನವರ, ಐ.ಬಿ.ಹೂಗಾರ, ಸಿ.ಜಿ.ಬಿದರಕುಂದಿ, ಇಸ್ಮಾಯಿಲ್ ವಾಲೀಕಾರ,ಎಸ್. ಆರ್.ಸಜ್ಜನ, ರೇಷ್ಮಾ ರೂಢಗಿ ಇದ್ದರು.

# ಬೆಳಗಾವಿಗೆ ಭೇಟಿ ನೀಡಿ ತನಿಖೆ ಚುರುಕುಗೊಳಿಸಿದ ಸಿಐಡಿ ತಂಡ



ಬೆಳಗಾವಿ: ಜಿಲ್ಲೆ ಗ್ರಾಮವೊಂದರಲ್ಲಿ ಮಹಿಳೆಯನ್ನು ವಿವಸ್ತ್ರಗೊಳಿಸಿ, ಹಲ್ಲೆ ನಡೆಸಿದ ಪ್ರಕರಣವನ್ನು ನಿನ್ನೆಯಷ್ಟೇ ರಾಜ್ಯ ಸರ್ಕಾರ ಸಿಐಡಿಗೆ ವಹಿಸಿದೆ. ಈ ಪ್ರಕರಣದ ಕುರಿತು ಸಿಐಡಿ ಡಿಐಜಿ ಸುಧೀರಕುಮಾರ ರೆಡ್ಡಿ ನೇತೃತ್ವದ ತಂಡ ಇಂದು (ಸೋಮವಾರ) ತನಿಖೆ ಚುರುಗೊಳಿಸಿದೆ.

ಭಾನುವಾರ ರಾತ್ರಿಯೇ ಬೆಳಗಾವಿಗೆ ಬಂದು ವಾಸ್ತವ್ಯ ಹೂಡಿರುವ ಸಿಐಡಿ ತಂಡವು, ಇಂದು ಬೆಳಗ್ಗೆಯೇ ಬಿಮ್ಸ್ ಆಸ್ಪತ್ರೆಯ ಆವರಣದಲ್ಲಿರುವ ಸಖಿ ಒನ್ ಸ್ಟಾಪ್ ಸೆಂಟರ್‌ಗೆ ಭೇಟಿ ನೀಡಿ, ಸಂತ್ರಸ್ತ ಮಹಿಳೆಯಿಂದ ಮಾಹಿತಿ ಕಲೆ ಹಾಕಿದೆ. ಸಿಐಡಿ ಎಸ್ಪಿ ಪೃಥ್ವಿಕ್, ರಶ್ಮಿ ಪರಡ್ಡಿ ಹಾಗೂ ಡಿವೈಎಸ್‌ಪಿ ಅಂಜುಮಳ ನಾಯಕ ಸೇರಿ ಆರು ಅಧಿಕಾರಿಗಳ ತಂಡ ಈ ಪ್ರಕರಣದ ತನಿಖೆ ಆರಂಭಿಸಿದೆ.

ರಾಷ್ಟ್ರೀಯ ಮಾನವ ಹಕ್ಕುಗಳ ಆಯೋಗದ ಡಿಐಜಿ ಸುನೀಲಕುಮಾರ್ ಮೀನಾ ಕೂಡ ಸೋಮವಾರ ಬೆಳಗ್ಗೆ ಬೆಳಗಾವಿಗೆ ಆಗಮಿಸಿದ್ದರು. ದೆಹಲಿಯಿಂದ ಬೆಳಗಾವಿಯ ವಿಮಾನ ನಿಲ್ದಾಣಕ್ಕೆ ಬಂದ ಅವರನ್ನು ಸಮಾಜ ಕಲ್ಯಾಣ ಇಲಾಖೆ ಜಂಟಿ ನಿರ್ದೇಶಕ ಲಕ್ಷ್ಮಣ ಬಬಲಿ ಬರಮಾಡಿಕೊಂಡಿದ್ದರು. "ಪ್ರಕರಣ ಸಂಬಂಧ ಮಾಹಿತಿ ಪಡೆಯಲು ಈಗಷ್ಟೇ ಬೆಳಗಾವಿಗೆ ಬಂದಿದ್ದೇನೆ. ಸಂತ್ರಸ್ತೆ ಹಾಗೂ ಅವರ ಕುಟುಂಬದವರನ್ನು ಭೇಟಿ ಮಾಡಿ, ಪರಿಶೀಲನೆ ನಡೆಸಿದ ಬಳಿಕವೇ ಮಾಧ್ಯಮಗಳಿಗೆ ಮಾಹಿತಿ ನೀಡುತ್ತೇನೆ" ಎಂದು ಸುನೀಲಕುಮಾರ್ ಮೀನಾ ತಿಳಿಸಿದ್ದಾರೆ.

# ಕಾಡು ಹಂದಿ ದಾಳಿಯಿಂದ ರೈತ ಸಾವು, ಇಬ್ಬರು ಮಹಿಳೆಯರಿಗೆ ಗಾಯ, ಗುಂಡಿಟ್ಟು ಕೊಂದ ಅರಣ್ಯಾಧಿಕಾರಿಗಳು



ಹಾಸನ: ಕಾಡು ಹಂದಿಯೊಂದು ದಾಳಿ ನಡೆಸಿದ್ದರಿಂದ 65 ವರ್ಷದ ವ್ಯಕ್ತಿ ಮೃತಪಟ್ಟಿದ್ದು, ಇತರ ಇಬ್ಬರು ಮಹಿಳೆಯರು ಗಾಯಗೊಂಡಿರುವ ಘಟನೆ ಹಾಸನ ಜಿಲ್ಲೆ ಹೊಳೆನರಸೀಪುರ ತಾಲೂಕಿನ ಹರದನಹಳ್ಳಿ ಗ್ರಾಮದಲ್ಲಿ ಸೋಮವಾರ ನಡೆದಿದೆ.

ಬಳಿಕ ಕಾಡು ಹಂದಿಗೆ ಗುಂಡಿಕ್ಕಿ ಹತ್ಯೆ ಮಾಡಲಾಯಿತು ಎಂದು ಅರಣ್ಯ ಇಲಾಖೆ ಅಧಿಕಾರಿ ತಿಳಿಸಿದ್ದಾರೆ.

ರಾಜೇಗೌಡ ಹಾಗೂ ಅವರ ಪತ್ನಿ ಹೊಲದಲ್ಲಿ ಇತರ ಇಬ್ಬರು ಮಹಿಳೆಯರೊಂದಿಗೆ ಕೆಲಸ ಮಾಡುತ್ತಿದ್ದಾಗ ಹಠಾತ್ ಕಾಡು ಹಂದಿ ದಾಳಿ ನಡೆಸಿದಾಗ ತೀವ್ರವಾಗಿ ಗಾಯಗೊಂಡು ವ್ಯಕ್ತಿ ಸಾವನ್ನಪ್ಪಿದ್ದಾರೆ. ಅವರನ್ನು ರಕ್ಷಿಸಲು ಪ್ರಯತ್ನಿಸಿ ತೀವ್ರವಾಗಿ ಗಾಯಗೊಂಡ ಅವರ ಪತ್ನಿ ಶಾಂತಮ್ಮ ಹಾಗೂ ಮಹಿಳೆ ನಂಜಮ್ಮ ಅವರನ್ನು ಹೊಳೆನರಸೀಪುರ ಸರ್ಕಾರಿ ಆಸ್ಪತ್ರೆಗೆ ನಂತರ ಹಾಸನ ಆಸ್ಪತ್ರೆಗೆ ಕರೆದೊಯ್ಯಲಾಯಿತು ಎಂದು ಅಧಿಕಾರಿ ಮಾಹಿತಿ ನೀಡಿದ್ದಾರೆ.

ಹಂದಿ ಇತರರ ಮೇಲೆ ದಾಳಿ ಮಾಡದಂತೆ ನಿಯಂತ್ರಿಸಲು ಸ್ಥಳೀಯರು ದೊಣ್ಣೆಯಿಂದ ಹೊಡೆದಿದ್ದಾರೆ. ಆದರೂ ಪ್ರಯೋಜನವಾಗಲಿಲ್ಲ. ಇತರ ಮೇಲೂ ದಾಳಿ ನಡೆಸುತಿತ್ತು.

ಇದರಿಂದಾಗಿ ಅರಣ್ಯ ಇಲಾಖೆ ಅಧಿಕಾರಿಗಳು ಬಂದೂಕಿನಿಂದ ಕಾಡು ಹಂದಿಯನ್ನು ಹೊಡೆದುರುಳಿಸಿದರು ಎಂದು ಹೆಚ್ಚುವರಿ ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ ಕುಮಾರ್ ಪುಷ್ಕರ್ ಹೇಳಿದರು.

# ಬೆಳಗಾವಿ: ಸಿಲಿಂಡರ್ ಸ್ಫೋಟಕ್ಕೆ ಮನೆಯಲ್ಲಿದ್ದ 2 ಲಕ್ಷ ನಗದು ಚಿನ್ನಾಭರಣ ಭಸ್ಮ



ಬೆಳಗಾವಿ: ಗ್ಯಾಸ್ ಸಿಲಿಂಡರ್ ಸ್ಫೋಟಗೊಂಡು ಮನೆಯಲ್ಲಿದ್ದ 2 ಲಕ್ಷ ರೂ. ನಗದು ಹಾಗೂ ಚಿನ್ನದ ಆಭರಣಗಳು ಅಗ್ನಿಗೆ ಆಹುತಿಯಾದ ಘಟನೆ ಮೂಡಲಗಿಯ ಹುಣಶ್ಯಾಳ ಪಿವೈ ಗ್ರಾಮದಲ್ಲಿ ನಡೆದಿದೆ.

ಗ್ರಾಮದ ಗಂಗಪ್ಪ ಹಣಮಂತ ಕುರುಬರ ಎಂಬವರ ಮನೆಯಲ್ಲಿ ಈ ಘಟನೆ ನಡೆದಿದೆ. ಕುಟುಂಬದ ಸದಸ್ಯರು ಹೊಲಕ್ಕೆ ತೆರಳಿದ್ದ ವೇಳೆ ಸಿಲಿಂಡರ್ ಆಕಸ್ಮಿಕವಾಗಿ ಸ್ಫೋಟಗೊಂಡಿದೆ. ಸ್ಫೋಟದಿಂದಾಗಿ ಮನೆ ಹೊತ್ತಿ ಉರಿದಿದ್ದು, ಮನೆಯಲ್ಲಿದ್ದ ವಸ್ತುಗಳು ಸೇರಿದಂತೆ 2 ಲಕ್ಷ ರೂ. ಹಣ ಸೇರಿದಂತೆ ಚಿನ್ನದ ಆಭರಣಗಳು ಸುಟ್ಟು ಕರಕಲಾಗಿದೆ.

ಸಿಲಿಂಡರ್ ಸ್ಫೋಟಕ್ಕೆ ನಿಖರ ಕಾರಣ ತಿಳಿದು ಬಂದಿಲ್ಲ. ಘಟನೆ ವೇಳೆ ಮನೆಯಲ್ಲಿ ಯಾರೂ ಇಲ್ಲದಿದ್ದರಿಂದ ಭಾರೀ ಅನಾಹುತವೊಂದು ತಪ್ಪಿದಂತಾಗಿದೆ. ಕುಲಗೋಡ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಈ ಘಟನೆ ನಡೆದಿದೆ.

# 'ಸಲಾರ್' ಬಿಡುಗಡೆಗೆ ಮುನ್ನವೇ 120 ಅಡಿ ಎತ್ತರದ ಕಟೌಟ್ ಅನಾವರಣ



ಮುಂಬೈ: ಪ್ರಭಾಸ್ ಅಭಿನಯದ ಬಹು ನಿರೀಕ್ಷಿತ ಸಿನಿಮಾ 'ಸಲಾರ್' ಇದೀಗ ತೆರೆಗೆ ಬರಲು ಸಜ್ಜಾಗಿದೆ. ಈ ಹಿನ್ನೆಲೆಯಲ್ಲಿ ಚಿತ್ರತಂಡ ಭರ್ಜರಿ ಪ್ರಚಾರ ನಡೆಸುವ ಮೂಲಕ ಚಿತ್ರದ ಪ್ರಮೋಷನ್ಗೆ ಮುಂದಾಗಿದೆ. ಇದಕ್ಕಾಗಿ ತಂಡ ಹೊಸ ಮಾರ್ಗವನ್ನು ಅನುಸರಿಸಿದೆ. ಸಾಂಪ್ರದಾಯಿಕವಾಗಿ ಚಿತ್ರ ಬಿಡುಗಡೆಗೆ ಮುನ್ನ ಚಿತ್ರದ ನಾಯಕ – ನಾಯಕಿ, ನಿರ್ದೇಶಕರು ಪ್ರಮುಖ ನಗರಗಳಿಗೆ ಭೇಟಿ ನೀಡಿ ಪ್ರಚಾರ ಕಾರ್ಯ ನಡೆಸುವುದು ಸಂದರ್ಶನದಲ್ಲಿ ಭಾಗಿಯಾಗುವುದು ಕಾಣಬಹುದು.

ಆದರೆ ಇದೀಗ 'ಸಲಾರ್' ಚಿತ್ರತಂಡ ಅದಕ್ಕಿಂತ ವಿಭಿನ್ನ ದಾರಿ ಆಯ್ಕೆ ಮಾಡಿಕೊಂಡಿದೆ. ಚಿತ್ರದ ಬಿಡುಗಡೆ ದಿನ ಬಗ್ಗೆ ಹೆಚ್ಚು ನಿರೀಕ್ಷೆಯನ್ನೂ ಮೂಡಿಸುತ್ತಿರುವ ಚಿತ್ರ ಇದೀಗ ಮುಂಬೈನಲ್ಲಿ ಪ್ರಭಾಸ್ ಅವರ ಭರ್ಜರಿ ಕಟೌಟ್ ನಿಲ್ಲಿಸಿ ಗಮನ ಸೆಳೆದಿದೆ. ಅಷ್ಟೇ ಅಲ್ಲದೆ, ಇಷ್ಟು ದೊಡ್ಡದಾದ ಕಟ್ಔಟ್ ಜೋಡಿಸುವ ಶ್ರಮದ ವಿಡಿಯೋವನ್ನು ಇದೀಗ ಸಿನಿ ತಂಡ ಹಂಚಿಕೊಂಡಿದೆ. ಮುಂಬೈನ ಆರ್ ಮಾಲ್ನಲ್ಲಿ 120 ಅಡಿ ಎತ್ತರದ 'ಸಲಾರ್' ಕಟೌಟ್ ನಿಲ್ಲಿಸಿರುವ ವಿಡಿಯೋ ಇದಾಗಿದೆ. ಈ ಕಟೌಟ್ ಜೋಡಣೆಗೆ 125 ಜನರು ಬಿಡುವಿಲ್ಲದೇ ವಾರಗಳ ಕಾಲ ಕೆಲಸ ಮಾಡಿದ್ದಾರೆ. ಈ ವಿಡಿಯೋವನ್ನು ಮೈಕ್ರೋಬ್ಲಾಗಿಂಗ್ ತಾಣ ಎಕ್ಸ್ನಲ್ಲಿ ಹೊಂಬಾಳೆ ಫಿಲ್ಸ್ಂ ಹಂಚಿಕೊಂಡಿದೆ. ಮುಂಬೈನ ಆರ್ ಮಾಲ್ನಲ್ಲಿ ಸಲಾರ್ ಮಿಂಚು. 120 ಅಡಿ ಎತ್ತರದ ರೆಬೆಲ್ ಸ್ಟಾರ್ ಪ್ರಭಾಸ್ ಅವರ ಕಟ್ ಔಟ್ ಚಿತ್ರದ ಹೈಪ್ ಅನ್ನು ಹೆಚ್ಚಿಸಿದೆ. ಚಿತ್ರ ಬಿಡುಗಡೆಗೆ ಮುನ್ನ ಪ್ರಭಾಸ್, ಪೃಥ್ವಿರಾಜ್ ಸುಕುಮಾರನ್ ಮತ್ತು ಪ್ರಶಾಂತ್ ನೀಲ್ ಅವರ ವಿಶೇಷ ಸಂದರ್ಶನ ಕೂಡ ಬಿಡುಗಡೆಯಾಗಲಿದೆ. ಸಲಾರ್ ಚಿತ್ರತಂಡದ ಈ ತ್ರಿವಳಿಗಳು ಎಸ್ಎಸ್ ರಾಜಮೌಳಿ ಜೊತೆಗೆ ಮಾತುಕತೆ ಮಾಡಲಿದ್ದಾರೆ. ಈ ಎಕ್ಸ್ಕ್ಲೂಸಿವ್ ಸಂದರ್ಶನ ಹೊಂಬಾಳೆ ಯೂಟ್ಯೂಬ್ ಚಾನಲ್ನಲ್ಲಿ ಡಿಸೆಂಬರ್ 18ಕ್ಕೆ ಬಿಡುಗಡೆಯಾಗಲಿದೆ.

450 ಕೋಟಿ ವೆಚ್ಚದಲ್ಲಿ 'ಸಲಾರ್' ಚಿತ್ರವನ್ನು ಹೊಂಬಾಳೆ ಫಿಲ್ಮ್ ಪ್ಯಾನ್ ಇಂಡಿಯಾ ಮಟ್ಟದಲ್ಲಿ ಚಿತ್ರ ನಿರ್ಮಾಣ ಮಾಡಿದೆ. ಚಿತ್ರದಲ್ಲಿ ಪ್ರಭಾಸ್ ಜೊತೆಗೆ ಪೃಥ್ವಿರಾಜ್ ಸುಕುಮಾರನ್, ಜಗಪತಿ ಬಾಬು, ಶೃತಿ ಹಾಸನ್, ಬಾಬಿ ಸಿಂಹ ಪ್ರಮುಖ ಪಾತ್ರದಲ್ಲಿ ಕಾಣಿಸಿಕೊಳ್ಳಲಿದ್ದಾರೆ. ಇದೇ ಡಿಸೆಂಬರ್ 21ಕ್ಕೆ ಚಿತ್ರ ಬಿಡುಗಡೆ ಕಾಣಲಿದ್ದು, ಇದರ ಬಳಿಕ ಶಾರುಖ್ ಖಾನ್ ಅಭಿನಯ ಡಂಕಿ ಮತ್ತು ಮೋಹನ್ ಲಾಲ್ ಅವರ ನೆರು ಸಿನಿಮಾ ತೆರೆಗೆ ಬರಲಿವೆ.

# ಹಂಡತಿ ಸಮಾಧಿ ಪಕ್ಕದಲ್ಲೇ ನೇಣು ಬಿಗಿದುಕೊಂಡ ಪತಿ ಆತ್ಮಹತ್ಯೆ



ಚಿಕ್ಕಬಳ್ಳಾಪುರ: ಹೆಂಡತಿ ಅಸುನೀಗಿದ್ದನ್ನು ಸಹಿಸಿಕೊಳ್ಳದಾದ ಪತಿರಾಯ ಅದೇ ನೋವಿನಲ್ಲಿ ಆತ್ಮಹತ್ಯೆಗೆ ಶರಣಾಗಿದ್ದಾರೆ. ಅದೂ ಪತ್ನಿಯ ಸಮಾಧಿಯ ಬಳಿಯೇ ನೇಣು ಬಿಗಿದುಕೊಂಡು ಅಸುನೀಗಿದ್ದಾರೆ.

ಚಿಕ್ಕಬಳ್ಳಾಪುರ ಜಿಲ್ಲೆಯ ಬಾಗೇಪಲ್ಲಿ ಪಟ್ಟಣದ ತೀಮಾಕಹಳ್ಳಿ ಬಳಿ ಸ್ಮಶಾನದಲ್ಲಿ ಈ ಕರುಣಾಜನಕ ಘಟನೆ ನಡೆದಿದೆ. ಬಾಗೇಪಲ್ಲಿ ಪಟ್ಟಣದ ಗುರುಮೂರ್ತಿ(38) ಆತ್ಮಹತ್ಯೆ ಮಾಡಿಕೊಂಡ ವ್ಯಕ್ತಿ.

ಪತ್ನಿ ಮೌನಿಕಾಳ ಸಮಾಧಿ ಪೂಜೆ ಮಾಡಿ, ನಂತರ ಅಲ್ಲೇ ಇದ್ದ ಮರಕ್ಕೆ ನೇಣು ಹಾಕಿಕೊಂಡು ಆತ್ಮಹತ್ಯೆ ಮಾಡಿಕೊಂಡಿದ್ದಾರೆ. ಸ್ಥಳಕ್ಕೆ ಬಾಗೇಪಲ್ಲಿ ಠಾಣೆ ಪೊಲೀಸರು ಭೇಟಿ ನೀಡಿ, ಪರಿಶೀಲನೆ ನಡೆಸಿದ್ದಾರೆ.

# ಇಸ್ಪಿಟ್ ಆಡುತ್ತಿದ್ದ ನಗರಸಭೆ ಸದಸ್ಯ ಸಹಿತ 14 ಜನರ ಬಂಧನ



ಚಿತ್ರದುರ್ಗ: ಸರ್ಕಾರಿ ಐಬಿಯಲ್ಲಿ ಇಸ್ಪಿಟ್ ಆಡುತ್ತಿದ್ದ ನಗರಸಭೆ ಸದಸ್ಯ ಸೇರಿದಂತೆ 14 ಜನರನ್ನು ಹಿರಿಯೂರು ಗ್ರಾಮಾಂತರ ಠಾಣೆ ಪೊಲೀಸರು ಬಂಧಿಸುವಲ್ಲಿ ಯಶಸ್ವಿಯಾಗಿದ್ದಾರೆ.

ಚಿತ್ರದುರ್ಗ ಜಿಲ್ಲೆ ಹಿರಿಯೂರು ತಾಲೂಕಿನ ವಾಣಿವಿಲಾಸ ಸಾಗರ ಜಲಾಶಯದ ಬಳಿಯ ಐಬಿಯನ್ನೇ ಜೂಜು ಅಡ್ಡೆಯಾಗಿಸಿಕೊಂಡಿದ್ದ ನಗರಸಭೆ ಸದಸ್ಯರಾದ ಜಗದೀಶ್, ಅಜಯ್ ಕುಮಾರ್ ಮತ್ತು ಅನಿಲ್ ಕುಮಾರ್ ನೇತೃತ್ವದಲ್ಲಿ ಇಸ್ಪಿಟ್ ಆಡುತ್ತಿದ್ದರು. ಹೀಗಾಗಿ ಖಚಿತ ಮಾಹಿತಿ ಮೇರೆಗೆ ಎಸ್ಪಿ ಧರ್ಮೇಂದರ್ ಕುಮಾರ್ ಮೀನಾ ಮಾರ್ಗದರ್ಶನದಲ್ಲಿ ಹಿರಿಯೂರು ಗ್ರಾಮಾಂತರ ಠಾಣೆ ಪೊಲೀಸರು ದಾಳಿ ನಡೆಸಿದರು.

ಈ ವೇಳೆ ಬಂಧಿತರಿಂದ 4 ಲಕ್ಷದ 37 ಸಾವಿರ ರೂ. ವಶಕ್ಕೆ ಪಡೆದಿದ್ದಾರೆ. ಅಲ್ಲದೇ ಹಿರಿಯೂರು ನಗರಸಭೆ ಸದಸ್ಯ ಜಗದೀಶ್ ಸೇರಿದಂತೆ 14 ಜನರನ್ನು ಬಂಧಿಸಿದ್ದು, ಮತ್ತಿಬ್ಬರು ನಗರಸಭೆ ಸದಸ್ಯರಾದ ಅನಿಲ್ ಕುಮಾರ್ ಹಾಗೂ ಅಜ್ಜಪ್ಪ ಪರಾರಿಯಾಗಿದ್ದಾರೆ. ಹೀಗಾಗಿ ಮೂವರು ನಗರಸಭೆ ಸದಸ್ಯರು ಹಾಗೂ ಐಬಿ ಮೇಟಿ ನಾಸಿರ್ ಸೇರಿದಂತೆ ಹಲವರ ವಿರುದ್ಧ ಹಿರಿಯೂರು ಗ್ರಾಮಾಂತರ ಠಾಣೆಯಲ್ಲಿ ಪ್ರಕರಣ ದಾಖಲಿಸಿದ್ದಾರೆ.

# ಮೀನುಗಾರರ ಸಾವು: ಸಚಿವೆ ಲಕ್ಷ್ಮೀ ಹೆಬ್ಬಾಳಕರ್ ಸಂತಾಪ, ಪರಿಹಾರ ಘೋಷಣೆ

ಬೆಳಗಾವಿ: ಶಿರೂರು ಸಮೀಪ ಅರಬ್ಬಿ ಸಮುದ್ರದಲ್ಲಿ ದೋಣಿ ಮಗುಚಿ ಇಬ್ಬರು ಮೀನುಗಾರರು ಮೃತಪಟ್ಟಿರುವುದಕ್ಕೆ ತೀವ್ರ ಸಂತಾಪ ವ್ಯಕ್ತಪಡಿಸಿರುವ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವರೂ, ಉಡುಪಿ ಜಿಲ್ಲಾ ಉಸ್ತುವಾರಿ ಸಚಿವರೂ ಆಗಿರುವ ಲಕ್ಷ್ಮೀ ಹೆಬ್ಬಾಳಕರ್, ಮೃತರ ಕುಟುಂಬಕ್ಕೆ ಸೂಕ್ತ ಪರಿಹಾರ ನೀಡುವುದಾಗಿ ಘೋಷಿಸಿದ್ದಾರೆ.



ನವದೆಹಲಿ ಪ್ರವಾಸದಲ್ಲಿರುವ ಸಚಿವರು, ಘಟನೆ ಕುರಿತಂತೆ ಜಿಲ್ಲೆಯ ಹಿರಿಯ ಅಧಿಕಾರಿಗಳೊಂದಿಗೆ ಮಾತನಾಡಿ ಸಂಪೂರ್ಣ ಮಾಹಿತಿ ಪಡೆದಿದ್ದಾರೆ. ಮೃತರ ಕುಟುಂಬದವರನ್ನು ಭೇಟಿಯಾಗಿ ಸಾಂತ್ವನ ಹೇಳುವಂತೆ ಮತ್ತು ಆದಷ್ಟು ಬೇಗ ಸೂಕ್ತ ಪರಿಹಾರ ನೀಡಲು ಕ್ರಮ ತೆಗೆದುಕೊಳ್ಳುವಂತೆ ಅಧಿಕಾರಿಗಳಿಗೆ ಸೂಚಿಸಿದ್ದಾರೆ.

# ಹದಗೆಟ್ಟ ಹೆಬ್ಬಳ್ಳಿ–ಜಕನೂರ ರಸ್ತೆ: ವಿದ್ಯಾರ್ಥಿಗಳ ಪರದಾಟ

ಕುಳಗೇರಿ ಕ್ರಾಸ್: ಗದಗ ಜಿಲ್ಲೆಯ ರೋಣ ತಾಲೂಕಿನ ಹೊಳೆಆಲೂರು ಪಟ್ಟಣವನ್ನು ತಲುಪಲು ಹೆಬ್ಬಳ್ಳಿ ಹಾಗೂ ಸುತ್ತಮುತ್ತಲಿನ ರೈತರು ಬೆಳೆದ ಬೆಳೆಗಳನ್ನು ಮಾರುಕಟ್ಟೆಗೆ ಸಾಗಿಸಲು ಬಹಳ ಮಹತ್ವದ ವ್ಯಾಪಾರಿ ಕೇಂದ್ರವನ್ನು ಸಂಪರ್ಕಿಸುವ ಬಾದಾಮಿ ತಾಲೂಕಿನ ಹೆಬ್ಬಳ್ಳಿ–ಜಕನೂರ ಮಾರ್ಗವಾಗಿ ಹದಗೆಟ್ಟಿದೆ.

ಪ್ರತಿ ಹತ್ತು ಅಡಿಗೆ ಒಂದು ತಗ್ಗು ನಿರ್ಮಾಣವಾಗಿದ್ದು, ಅನೇಕ ತಿಂಗಳುಗಳಿಂದ ಜನರು ತೊಂದರೆ ಅನುಭವಿಸುತ್ತಿದ್ದಾರೆ. 'ಪಟ್ಟಣದಿಂದ ಸುತ್ತುಮುತ್ತಲಿನ 25 ಕಿಮೀ ವ್ಯಾಪ್ತಿಯಲ್ಲಿ ಬರುವ ಎಲ್ಲ ಗ್ರಾಮಗಳ ರೈತರು ಬೆಳೆದ ಬೆಳೆಗಳ ಫಸಲನ್ನು ಈ ಮಾರುಕಟ್ಟೆಗೆ ಸಾಗಿಸಿ ವ್ಯಾಪಾರ ವಹಿವಾಟು ಮಾಡುವ ಒಂದು ಬೃಹತ್ ವ್ಯಾಪಾರಿ ಕೇಂದ್ರವಾಗಿದ್ದು, ರೈತರು ಬೆಳೆದ ಫಸಲನ್ನು ಟ್ರ್ಯಾಕ್ಟರ್ ಮೂಲಕ ಸಾಗಿಸುವ ವೇಳೆ ಈ ಬೃಹತ್ ತಗ್ಗು–ಗುಂಡಿಗಳಿಂದ ಟ್ರ್ಯಾಕ್ಟರ ಉರುಳಿ ಅವಘಡಗಳು ಸಂಭವಿಸಿ ರೈತರ ಫಸಲು ನೆಲಕಚ್ಚಿ ಹೋಗಿದ್ದು ಹಾಗೂ ಪ್ರಾಣವನ್ನು ಕಳೆದುಕೊಂಡಿದ್ದು ಇದೆ' ಎಂದು ಗೋವನಕೊಪ್ಪ ಗ್ರಾಮದ ಪ್ರವೀಣ ಮೇಟಿ, ಲಕ್ಷ್ಮಣ ಹರಿಜನ ತಿಳಿಸಿದರು.



ಕುಳಗೇರಿ ಹೆಬ್ಬಳ್ಳಿ–ಜಕನೂರ ಮಾರ್ಗವು ಸಂಪೂರ್ಣ ಹದಗೆಟ್ಟಿದೆ

ಹೆಬ್ಬಳ್ಳಿ–ಜಕನೂರ ಮಾರ್ಗದಲ್ಲಿ ಆರು ಕಡೆಗಳಲ್ಲಿ ಮರಳು ಗಣಿಗಾರಿಕೆಗೆ ಪರವಾನಿಗೆ ನೀಡಲಾಗಿದೆ. ಈ ಭಾಗದ ರೈತರು ಹಾಗೂ ಪ್ರಯಾಣಿಕರು ಪ್ರಯಾಣಿಸುವುದು ಸವಾಲಾಗಿ ಪರಿಣಮಿಸಿದೆ. ಈ ರಸ್ತೆಯಲ್ಲಿ ಅಪಾರ ಪ್ರಮಾಣದ ಮರಳಿನ ಭಾರ ಹೊತ್ತ ಲಾರಿಗಳ ಓಡಾಟದಿಂದಾಗಿಯೇ ರಸ್ತೆಯು ಸಂಪೂರ್ಣವಾಗಿ ಹದಗೆಟ್ಟಿದೆ. ಕೆಲವು ರೈತರಿಗೆ ಈ ರಸ್ತೆಯಲ್ಲಿ ಪ್ರಯಾಣಿಸದೆ ಬೇರೆ ಮಾರ್ಗವಿಲ್ಲದ ಸ್ಥಿತಿ ಇದೆ.

> ಸರ್ಕಾರದಿಂದ ಡಿಎಂಎಫ್ ಫಂಡ್ ಬಿಡುಗಡೆಗೆ ಸರ್ಕಾರಕ್ಕೆ ಪತ್ರ ಬರೆಯಲಾಗಿದ್ದು ಫಂಡ್ ಬಂದ ತಕ್ಷಣವೇ ಅಥವಾ ಸರ್ಕಾರದಿಂದ ಯಾವುದಾದರೂ ಅನುದಾನ ಬಂದ ಕೂಡಲೇ ಆದ್ಯತೆಯಿಂದ ರಸ್ತೆ ಕೆಲಸ ಮಾಡಲಾಗುವುದು
>
> **ಎ.ಎಸ್.ತೋಪಲಕಟ್ಟಿ ಜಿಪಂ ಎಇಇ**

ಜಕನೂರ–ಮುಮ್ಮರಡ್ಡಿಕೊಪ್ಪ ಗ್ರಾಮದ ಸುತ್ತಮುತ್ತಲಿನ ಗ್ರಾಮಗಳ ಕಾಲೇಜು ವಿದ್ಯಾರ್ಥಿಗಳಿಗೆ ಸಾರಿಗೆ ಬಸ್ ವ್ಯವಸ್ಥೆಯಿಲ್ಲದೆ ಇರುವುದು, ವಿದ್ಯಾರ್ಥಿಗಳ ಪಾಲಕರು ಪ್ರತಿದಿನ ತಮ್ಮ ಮಕ್ಕಳನ್ನು ಬೈಕ್ ಮೂಲಕ ಕಾಲೇಜಿಗೆ ತಂದು ಬಿಡುವ ಪರಿಸ್ಥಿತಿಯೂ ಈ ಭಾಗದ ಜನರದ್ದಾಗಿದೆ.

ಹೆಬ್ಬಳಿ ಗ್ರಾಮದಿಂದ ಜಕನೂರ ಗ್ರಾಮಕ್ಕೆ ಆಟೊ ಮೂಲಕವೇ ಗ್ರಾಮಗಳನ್ನು ತಲುಪುವ ಪರಿಸ್ಥಿತಿ ನಿರ್ಮಾಣವಾಗಿದೆ. ಜಕನೂರ ಗ್ರಾಮದ ಮಕ್ಕಳು ಹೆಚ್ಚಿನ ವಿದ್ಯಾಭ್ಯಾಸಕ್ಕೆ ಪ್ರೌಢಶಾಲೆ–ಕಾಲೇಜುಗಳಿಗೆ ತೆರಳಲು ಆಟೊಗೆ ಹಣ ಕೊಟ್ಟು ಪ್ರಯಾಣಿಸುತ್ತಿದ್ದಾರೆ.

ಈ ಗ್ರಾಮಗಳಿಗೆ ಬಸ್ ಸೌಲಭ್ಯ ಕಲ್ಪಿಸಿದಂತೆ ಆಟೊ ಚಾಲಕರು ಬಸ್ ಚಾಲಕರೊಂದಿಗೆ ಗಲಾಟೆ ನಡೆಸಿದ ಪ್ರಸಂಗಗಳು ಈ ಹಿಂದೆ ನಡೆದಿದೆ.

ಮಲಪ್ರಭಾ ನದಿ ಅಚ್ಚುಕಟ್ಟು ಪ್ರದೇಶಗಳ ಬಹುತೇಕ ಗ್ರಾಮಗಳ ರಸ್ತೆಗಳು ಹೆಚ್ಚಾಗಿ ಮರಳು ಗಣಿಗಾರಿಕೆಯಿಂದಲೇ ಹಾಳಾಗಿವೆ. ಅಧಿಕಾರಿಗಳು ಈ ಬಗ್ಗೆ ಗಮನಹರಿಸಬೇಕು ಎಂದು ಶಿವಾನಂದ ದುರೆ, ಬಸವರಾಜ ಜುನ್ನಾಳ, ಶಿವಾನಂದ ಕೊಪ್ಪದ, ಹನುಮಂತ ದೊಡ್ಡಮನಿ ಒತ್ತಾಯಿಸಿದರು.

# ರಾಜ್ಯ ಮಟ್ಟದ ಟೇಬಲ್ ಟೆನ್ನಿಸ್‌ನಲ್ಲಿ ಪ್ರಥಮ ಸ್ಥಾನ ಪಡೆದ ಚಂದನಾ ಮೇಸ್ತ್ರಿ

ಶಿರಸಿ: ಕರ್ನಾಟಕ ಶಾಲಾ ಶಿಕ್ಷಣ ಇಲಾಖೆ ಶಿರಸಿಯಲ್ಲಿ ಆಯೋಜಿಸಿದ್ದ ರಾಜ್ಯ ಮಟ್ಟದ ಡಿಪಾರ್ಟ್ ಮೆಂಟಲ್ ಟೇಬಲ್ ಟೆನ್ನಿಸ್ ಸ್ಪರ್ಧೆಯಲ್ಲಿ ಚಂದನಾ ಶಶಿಕಾಂತ ಮೇಸ್ತ್ರಿ ಪ್ರಥಮ ಸ್ಥಾನ ಪಡೆದಿದ್ದಾರೆ.

ಚಂದನಾ ಮೇಸ್ತ್ರಿ ಹೈಸ್ಕೂಲು ವಿದ್ಯಾರ್ಥಿನಿಯಾಗಿದ್ದು, ರಾಜ್ಯದ 35 ಜಿಲ್ಲೆಯ ಸ್ಪರ್ಧಿಗಳನ್ನು ಸೋಲಿಸಿ ರಾಜ್ಯಕ್ಕೆ ಪ್ರಥಮ ಬಂದಿದ್ದು, 17 ವರ್ಷದೊಳಗಿನ ರಾಷ್ಟ್ರಮಟ್ಟದ 67ನೇ ಟೆಬಲ್ ಟೆನ್ನಿಸ್ ಚಾಂಪಿಯನ್ ಶಿಪ್ ಗೆ ಆಯ್ಕೆಯಾಗಿದ್ದಾರೆ.

ಈ ಹಿನ್ನೆಲೆಯಲ್ಲಿ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ಚಂದನಾಳನ್ನು ಸನ್ಮಾನಿಸಿ, ರಾಷ್ಟ್ರಮಟ್ಟದ ಸ್ಪರ್ಧೆಗೆ ಆಯ್ಕೆಯಾಗಿದ್ದಕ್ಕೆ ಶುಭ ಕೋರಿದರು.



ಇದೇ ವೇಳೆ ಬೆಳಗಾವಿ ಜಿಲ್ಲಾ ಉಸ್ತುವಾರಿ ಸಚಿವರೂ ಆದ ಲೋಕೋಪಯೋಗಿ ಸಚಿವ ಸತೀಶ್ ಜಾರಕಿಹೊಳಿ, ಶಿಕ್ಷಣ ಸಚಿವ ಮಧು ಬಂಗಾರಪ್ಪ ಹಾಗೂ ಕ್ರೀಡಾ ಸಚಿವ ಬಿ.ನಾಗೇಂದ್ರ ಚಂದನಾಳಿಗೆ ರಾಷ್ಟ್ರಮಟ್ಟದ ಸ್ಪರ್ಧೆಗೆ ಶುಭ ಹಾರೈಸಿದ್ದಾರೆ.

# ಕುಲವಳ್ಳಿ ರೈತರಿಗೆ ಜಾಮೀನು

ಚನ್ನಮ್ಮನ ಕಿತ್ತೂರು: ತಾಲ್ಲೂಕಿನ ಕುಲವಳ್ಳಿ ಗುಡ್ಡದ ಒಂಬತ್ತು ಹಳ್ಳಿಗಳ ಜಮೀನುಗಳಲ್ಲಿ ಸಾಗುವಳಿ ಮಾಡುತ್ತ ಬಂದಿರುವ ರೈತರ ಬೇಡಿಕೆಗಳಿಗೆ ಆಗ್ರಹಿಸಿ ಈಚೆಗೆ ರಾಷ್ಟ್ರೀಯ ಹೆದ್ದಾರಿ ತಡೆ ನಡೆಸಿದ ಆರೋಪದ ಮೇಲೆ ಬಂಧನಕ್ಕೊಳಗಾಗಿದ್ದ 12 ರೈತರಿಗೆ ಇಲ್ಲಿಯ ಕಿರಿಯ ದಿವಾಣಿ ಮತ್ತು ಸತ್ರ ನ್ಯಾಯಾಲಯ ಶನಿವಾರ ಜಾಮೀನು ಮಂಜೂರು ಮಾಡಿದೆ.

ಹಬೀಬ ಶಿಲೇದಾರ, ಬಿಷ್ಟಪ್ಪ ಶಿಂದೆ, ಅರ್ಜನ್ ಮಡಿವಾಳರ, ನಾಗಪ್ಪ ಅಸಲನ್ನವರ, ಮಹಾಂತಯ್ಯ ವಕ್ಕುಂದಮಠ, ನತ್ತು ಪಾರೀಸ್, ಕಾಸೀಂಸಾಬ ನೇಸರಗಿ, ಮಹಾಂತೇಶ ಎಮ್ಮಿ, ಗಿರಿಮಲ್ಲಯ್ಯ ನಾಯ್ಕರ್, ಸಲೀಂ ಮೊಕಾಶಿ, ರಾಜೀವ ದೊಡ್ಡನಾಯ್ಕರ್, ಪಿ. ಕೆ. ನೀರಲಕಟ್ಟಿ ಅವರ ಮೇಲೆ ಕಿತ್ತೂರು ಪೊಲೀಸರು ವಿವಿಧ ಕಲಂ ಅಡಿ ಪ್ರಕರಣ ದಾಖಲಿಸಿದ್ದರು.

# 60 ವರ್ಷ ಮೇಲ್ಪಟ್ಟವರಿಗೆ ಮಾತ್ರ ಮಾಸ್ಕ್ ಕಡ್ಡಾಯ: ಸಚಿವ ದಿನೇಶ್ ಗುಂಡೂರಾವ್



ಬೆಂಗಳೂರು: ರಾಜ್ಯದಲ್ಲಿ ಕೊರೊನಾ ರೂಪಾಂತರಿ ತಳಿ ಕಂಡುಬಂದಿರುವ ಹಿನ್ನೆಲೆಯಲ್ಲಿ 60 ವರ್ಷದ ಮೇಲ್ಪಟ್ಟವರಿಗೆ ಮಾಸ್ಕ್ ಕಡ್ಡಾಯಗೊಳಿಸಲಾಗಿದೆ ಎಂದು ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ಹೇಳಿದ್ದಾರೆ.

ಕುಶಾಲ್ ನಗರದಲ್ಲಿ ಮಾಧ್ಯಮದವರ ಪ್ರಶ್ನೆಗಳಿಗೆ ಪ್ರತಿಕ್ರಿಯಿಸಿದ ಸಚಿವರು, ಕೋವಿಡ್ ವಿಚಾರವಾಗಿ ಇಲಾಖೆಯಿಂದ ಮಾರ್ಗಸೂಚಿ ಹೊರಡಿಸಲಾಗುವುದು ಎಂದು ತಿಳಿಸಿದರು.

ಕೊರೋನಾ ರೂಪಾಂತರಿ ಬಗ್ಗೆ ಯಾರೂ ಕೂಡ ಆತಂಕಪಡಬೇಕಿಲ್ಲ. ಮುನ್ನೆಚ್ಚರಿಕೆ ಕ್ರಮಗಳನ್ನ ತೆಗೆದುಕೊಳ್ಳುವ ನಿಟ್ಟಿನಲ್ಲಿ ಈಗಾಗಲೇ ನಾನು ಒಂದು ಸುತ್ತಿನ ಸಭೆಯನ್ನ ಆರೋಗ್ಯ ಇಲಾಖೆ ಅಧಿಕಾರಿಗಳ ಜೊತೆ ನಡೆಸಿದ್ದೇನೆ. ಅಲ್ಲದೇ ಡಾ. ರವಿ ಅವರ ನೇತೃತ್ವದ ತಾಂತ್ರಿಕ ಸಲಹಾ ಸಮಿತಿ ಕೂಡಾ ನಿನ್ನಯೇ ಸಭೆ ನಡೆಸಿ ಕೆಲವು ಸಲಹೆಗಳನ್ನ ನೀಡಿದ್ದಾರೆ.

60 ವರ್ಷ ಮೇಲ್ಪಟ್ಟವರು ಹಾಗೂ ಹೃದಯ ಸಂಬಂಧಿ ಕಾಯಿಲೆ ಹೊಂದಿದವರು, ಉಸಿರಾಟದ ಸಮಸ್ಯೆ ಇರುವವರಿಗೆ ಮಾಸ್ಕ್ ಕಡ್ಡಾಯಗೊಳಿಸುವಂತೆ ಸಮಿತಿಯವರು ಸಲಹೆ ನೀಡಿದ್ದಾರೆ.

ಸಮಿತಿಯ ಸಲಹೆಗಳನ್ನ ಆಧರಿಸಿ ಆರೋಗ್ಯ ಇಲಾಖೆಯಿಂದ ಇಂದು ಮಾರ್ಗಸೂಚಿ ಹೊರಡಿಸಲಾಗುವುದು ಎಂದು ಸಚಿವ ದಿನೇಶ್ ಗುಂಡೂರಾವ್ ಹೇಳಿದರು.

# ಬೆಳಗಾವಿ: 1971ರ ವಿಜಯೋತ್ಸವ, ಕಾರ್ಯಾಗಾರ

ಬೆಳಗಾವಿ: ಇಲ್ಲಿನ ಆರ್.ಪಿ.ಡಿ ಮತ್ತು ಜೆ.ಎಸ್.ಎಸ್. ಮಹಾವಿದ್ಯಾಲಯಗಳ ಎನ್.ಸಿ.ಸಿ ಘಟಕ ಮತ್ತು ಫಿನ್ಸ್ ಬೆಳಗಾವಿ ಸಂಸ್ಥೆಯ ಸಹಯೋಗದಲ್ಲಿ 1971ರ ಭಾರತ ಯುದ್ಧದ ವಿಜಯೋತ್ಸವ ಅಂಗವಾಗಿ 'ರಾಷ್ಟ ನಿರ್ಮಾಣದಲ್ಲಿ ಯುವಜನತೆಯ ಸಬಲೀಕರಣ' ವಿಷಯದ ಕುರಿತು ಒಂದು ದಿನದ ಕಾರ್ಯಾಗಾರ ನಡೆಯಿತು.

ಮುಖ್ಯ ಅತಿಥಿಯಾಗಿ ಭಾಗವಹಿಸಿದ್ದ ಮೇಜರ್ ಜನರಲ್ ಕೆ.ಎನ್. ಮಿರ್ಜಿ ಮಾತನಾಡಿ, 'ಇಂದು ಭಾರತವು ದೊಡ್ಡ ಮಟ್ಟದಲ್ಲಿ ಅಭಿವೃದ್ಧಿ ಪಥದತ್ತ ಸಾಗುತ್ತಿದೆ. ದೇಶದ ಅಭಿವೃದ್ಧಿಯು ಕೇವಲ ಸರ್ಕಾರ, ಸಂಘ–ಸಂಸ್ಥೆಗಳ ಕಾರ್ಯವಲ್ಲ. ಪ್ರತಿ ಯುವಜನರೂ ಈ ನಿಟ್ಟಿನಲ್ಲಿ ಕೈ ಜೋಡಿಸಬೇಕಾಗಿದೆ' ಎಂದು ಹೇಳಿದರು.

ಸಂಪನ್ಮೂಲ ವ್ಯಕ್ತಿಯಾಗಿ ಪಾಲ್ಗೊಂಡ ಕರ್ನಲ್ ಶಾಮ್, 'ದೇಶದ ರಕ್ಷಣೆಗಾಗಿ ಹುತಾತ್ಮರಾದ ಅನೇಕ ಯುವಕರನ್ನು ಸ್ಮರಿಸುತ್ತ, ಇಂದಿನ ಯುವಕರು ಕೂಡ ದೇಶದ ರಕ್ಷಣೆಗೆ ಕಟಿಬದ್ಧರಾಗಿ ನಿಲ್ಲಬೇಕಾಗಿದೆ' ಎಂದು ಹೇಳಿದರು.




ಬೆಳಗಾವಿಯ ಆರ್.ಪಿ.ಡಿ ಕಾಲೇಜಿನಲ್ಲಿ ನಡೆದ ಕಾರ್ಯಾಗಾರದಲ್ಲಿ ಮೇಜರ್ ಜನರಲ್ ಕೆ.ಎನ್. ಮಿರ್ಜಿ ಮಾತನಾಡಿದರು

ಕಿಶೋರ್ ಕಾಕಡೆ ಅವರು ಫಿನ್ಸ್ ಸಂಸ್ಥೆಯ ಕಾರ್ಯ ಚಟುವಟಿಕೆಗಳನ್ನು ವಿವರಿಸಿದರು. ಆರ್.ಪಿ.ಡಿ. ಮಹಾವಿದ್ಯಾಲಯದ ಎನ್.ಸಿ.ಸಿ ಅಧಿಕಾರಿ, ಕ್ಯಾಪ್ಟನ್ ಎಂ.ಎಸ್. ಕುರಣಿ ಅತಿಥಿಗಳನ್ನು ಪರಿಚಯಿಸಿದರು. ನಿವೃತ್ತ ಕುಲಸಚಿವ ಪ್ರೊ.ಜೆ. ಜಿ. ನಾಯಕ್ ಅಧ್ಯಕ್ಷತೆ ವಹಿಸಿ ಮಾತನಾಡಿದರು. ಆರ್.ಪಿ.ಡಿ ಮಹಾವಿದ್ಯಾಲಯದ ಪ್ರಾಚಾರ್ಯ ಎ.ಎಂ. ಪಾಟೀಲ ಇದ್ದರು. ಡವಳೇಶ್ವರಿ ಕಾರ್ಯಕ್ರಮ ನಿರೂಪಿಸಿದರು. ಪ್ರಿಯಾಂಕಾ ವಂದಿಸಿದರು.

# ವಿಕಸಿತ ಭಾರತ ಸಂಕಲ್ಪ ಯಾತ್ರೆಗೆ ಚಾಲನೆ

ಬೆಳಗಾವಿ: 'ವಿಕಸಿತ ಭಾರತ ಸಂಕಲ್ಪ ಯಾತ್ರೆ'ಯ ನಗರ ಪ್ರದೇಶದ ಅಭಿಯಾನಕ್ಕೆ ಇಲ್ಲಿನ ಪಾಲಿಕೆ ಆವರಣದಲ್ಲಿ ಸಂಸದ ಅಣ್ಣಾಸಾಹೇಬ ಜೊಲ್ಲೆ ಹಾಗೂ ರಾಜ್ಯಸಭಾ ಸದಸ್ಯ ಈರಣ್ಣ ಕಡಾಡಿ ಶನಿವಾರ ಚಾಲನೆ ನೀಡಿದರು.

'ಪ್ರಧಾನಿ ನರೇಂದ್ರ ಮೋದಿ ಅವರ ಸಮಗ್ರ ಅಭಿವೃದ್ಧಿಯ ಕನಸಿನ ಭಾರತ ನಿರ್ಮಾಣದ ಹಿನ್ನೆಲೆಯಲ್ಲಿ ಹಮ್ಮಿಕೊಂಡ ವಿಕಸಿತ ಭಾರತ ಸಂಕಲ್ಪ ಯಾತ್ರೆ ಜಿಲ್ಲೆಯ ಗ್ರಾಮೀಣ ಪ್ರದೇಶದಲ್ಲಿ ಈಗಾಗಲೇ ಯಶಸ್ವಿಯಾಗಿ ಮುನ್ನಡೆದಿದೆ.

ಪ್ರಸ್ತುತ ನಗರ ಪ್ರದೇಶಗಳಲ್ಲಿ ಮೋದಿ ಗ್ಯಾರಂಟಿ ಯೋಜನೆ ಜಾಗೃತಿಯ ವಾಹನ ಸಂಚಿಸಿ ವಿವಿಧ ಯೋಜನೆಗಳ ಬಗ್ಗೆ ತಿಳವಳಿಕೆ ನೀಡಲಾಗುತ್ತಿದೆ. ಸಾರ್ವಜನಿಕರು ಇದರ ಲಾಭ ಪಡೆದುಕೊಳ್ಳಬೇಕು' ಎಂದು ಈರಣ್ಣ ಕಡಾಡಿ ಹೇಳಿದರು.

ಶಾಸಕ ಅಭಯ ಪಾಟೀಲ ಮಾತನಾಡಿ, 'ಜನರಿಗೆ ಪ್ರಧಾನಿ ಅವರ ಯೋಜನೆಗಳು ಹಾಗೂ ಭವಿಷ್ಯ ನಿರ್ಮಾಣದ ಬಗ್ಗೆ ತಿಳಿಸಿಕೊಡುವ ಪ್ರಯತ್ನ ಈ ಅಭಿಯಾನದ ಮುಖ್ಯ ಉದ್ದೇಶ' ಎಂದರು.




ಬೆಳಗಾವಿಯಲ್ಲಿ ಶನಿವಾರ 'ವಿಕಸಿತ ಭಾರತ ಸಂಕಲ್ಪ ಯಾತ್ರೆ'ಗೆ ಸಂಸದ ಅಣ್ಣಾಸಾಹೇಬ ಜೊಲ್ಲೆ ಹಾಗೂ ರಾಜ್ಯಸಭಾ ಸದಸ್ಯ ಈರಣ್ಣ ಕಡಾಡಿ ಚಾಲನೆ ನೀಡಿದರು

ಮೇಯರ್ ಶೋಭಾ ಸೋಮನಾಚೆ, ಉಪಮೇಯರ್ ರೇಶ್ಮಾ ಪಾಟೀಲ, ವಿಕಾಸಿತ ಭಾರತ ಸಂಕಲ್ಪ ಯಾತ್ರೆಯ ಬೆಳಗಾವಿ ಮತ್ತು ಬಾಗಲಕೋಟೆ ಜಿಲ್ಲಾ ಪ್ರಭಾರಿ ವಿನೋಧ ಸೇಷನ್, ಜಿಲ್ಲಾ ಅಗ್ರಣಿ ಬ್ಯಾಂಕ್ ವ್ಯವಸ್ಥಾಪಕ ಪಿ.ಆರ್. ಕುಲಕರ್ಣಿ ಸೇರಿದಂತೆ ಅನೇಕ ಗಣ್ಯರು ಉಪಸ್ಥಿತರಿದ್ದರು.

# ಬೆಳಗಾವಿ: ಪ್ಲಾಸ್ಟಿಕ್ ಬಳಸಿ ರಸ್ತೆ ನಿರ್ಮಾಣಕ್ಕೆ ಒಪ್ಪಿಗೆ



ಬೆಳಗಾವಿ: ಮಹಾನಗರ ಪಾಲಿಕೆಯ ವ್ಯಾಪ್ತಿಯಲ್ಲಿ ದಿನನಿತ್ಯ ಸಂಗ್ರಹವಾಗುತ್ತಿರುವ ಪ್ಲಾಸ್ಟಿಕ್ ತ್ಯಾಜ್ಯ ಬಳಸಿಕೊಂಡು ರಸ್ತೆ ನಿರ್ಮಾಣ ಮಾಡುವ ವಿನೂತನ ಯೋಜನೆ ಕೈಗೆತ್ತಿಕೊಳ್ಳಲು ನಗರ ಯೋಜನೆ ಮತ್ತು ಅಭಿವೃದ್ಧಿ ಸ್ಥಾಯಿ ಸಮಿತಿ ಸಭೆಯಲ್ಲಿ ನಿರ್ಧರಿಸಲಾಗಿದೆ.

ಸ್ಥಾಯಿ ಸಮಿತಿ ಅಧ್ಯಕ್ಷೆ ವಾಣಿ ವಿಲಾಸ ಜೋಶಿ ಅಧ್ಯಕ್ಷತೆಯಲ್ಲಿ ಈಚೆಗೆ ನಡೆದ ಸಭೆಯಲ್ಲಿ ಈ ಕುರಿತು ಚರ್ಚಿಸಲಾಗಿದ್ದು, ಪ್ರಾಯೋಗಿಕವಾಗಿ ಮಹಾನಗರ ಪಾಲಿಕೆಯ ಮುಂಭಾಗದಲ್ಲಿರುವ ರಸ್ತೆಯನ್ನು ನಿರ್ಮಿಸಲು ಯೋಜನೆ ರೂಪಿಸಲಾಯಿತು.

'ಶೇ 6ರಿಂದ ಶೇ 8ರಷ್ಟು ಪ್ಲಾಸ್ಟಿಕ್ ತ್ಯಾಜ್ಯ ಬಳಸಿ ನಿರ್ಮಿಸುವ ರಸ್ತೆಯು ಡಾಂಬರೀಕರಣ ರಸ್ತೆಗಿಂತ ಇದರ ನಿರ್ಮಾಣ ವೆಚ್ಚ, ಬಾಳಿಕೆ ಹಾಗೂ ಗುಣಮಟ್ಟದಲ್ಲಿ ಉತ್ತಮವಾಗಿರುತ್ತದೆ ಎಂದು ಸಂಶೋಧನೆಗಳು ತಿಳಿಸಿವೆ' ಎಂಬ ಮಾಹಿತಿಯನ್ನು ವಾಣಿ ಜೋಶಿ ಅವರು ಸಭೆಗೆ ನೀಡಿದರು.

ಪ್ರಾಯೋಗಿಕವಾಗಿ ಅನುಷ್ಠಾನಗೊಳಿಸಿದ ನಂತರ ಅದರ ಗುಣಮಟ್ಟ ಹಾಗೂ ಬಾಳಿಕೆಯನ್ನು ಆಧರಿಸಿ ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿನ ಇತರ ರಸ್ತೆಗಳನ್ನು ನಿರ್ಮಿಸುವ ಯೋಜನೆಯನ್ನು ರೂಪಿಸಲಾಗುವುದು ಎಂದೂ ತಿಳಿಸಿದರು.

ಸಭೆಯಲ್ಲಿ ಉಪಮೇಯರ್ ರೇಷ್ಮಾ ಪಾಟೀಲ, ಪಾಲಿಕೆ ಪರಿಷತ್ ಕಾರ್ಯದರ್ಶಿ ಉದಯಕುಮಾರ ತಳವಾರ್, ಎಂಜಿನಿಯರ್ ಲಕ್ಷ್ಮೀ ನಿಪ್ಪಾಣಿಕರ ಮುಂತಾದವರು ಪಾಲ್ಗೊಂಡಿದ್ದರು.

# ಹೆಬ್ಬಾಳಕರಗೆ ಭಗವಾನ್ ಶ್ರೀ ಮಹಾವೀರ ಪ್ರಶಸ್ತಿ

ಬೆಳಗಾವಿಯ ಬಾಲಾಚಾರ್ಯ 108 ಸಿದ್ಧಸೇನ ಮಹಾರಾಜ ಆಧ್ಯಾತ್ಮಿಕ ಅನುಸಂಧಾನ ಫೌಂಡೇಷನ್ ವತಿಯಿಂದ ಸಚಿವೆ ಲಕ್ಷ್ಮಿ ಹೆಬ್ಬಾಳಕರ ಅವರಿಗೆ ಭಾನುವಾರ 'ಭಗವಾನ್ ಶ್ರೀ ಮಹಾವೀರ ಪ್ರಶಸ್ತಿ' ಪ್ರದಾನ ಮಾಡಲಾಯಿತು

ಬೆಳಗಾವಿ: ಇಲ್ಲಿಯ ಬಾಲಾಚಾರ್ಯ 108 ಸಿದ್ಧಸೇನ ಮಹಾರಾಜ ಆಧ್ಯಾತ್ಮಿಕ ಅನುಸಂಧಾನ ಫೌಂಡೇಷನ್ ವತಿಯಿಂದ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವೆ ಲಕ್ಷ್ಮಿ ಹೆಬ್ಬಾಳಕರ ಅವರಿಗೆ 'ಭಗವಾನ್ ಶ್ರೀ ಮಹಾವೀರ ಪ್ರಶಸ್ತಿ' ಪ್ರದಾನ ಮಾಡಲಾಯಿತು.

ತಾಲ್ಲೂಕಿನ ಹಲಗಾದ ಆಶ್ರಮದಲ್ಲಿ ಭಗವಾನ್ ಮಹಾವೀರರ 2550ನೇ ನಿರ್ವಾಣ ಮಹಾಮಹೋತ್ಸವದ ಸಂದರ್ಭದಲ್ಲಿ, ಭಾನುವಾರ ಸಚಿವರಿಗೆ ಜೈನ ಮುನಿಗಳು ಪ್ರಶಸ್ತಿ ಪ್ರದಾನ ಮಾಡಿದರು.



'ಸಚಿವೆ ಲಕ್ಷ್ಮಿ ಹೆಬ್ಬಾಳಕರ ಅವರು ಜೈನ ಧಾರ್ಮಿಕ, ಜೈನ ಸಾಹಿತ್ಯ ಹಾಗೂ ಸಾಮಾಜಿಕ, ಆರೋಗ್ಯ, ಶಿಕ್ಷಣ, ಉದ್ಯಮ ಕ್ಷೇತ್ರಗಳಲ್ಲಿ ಮಾಡಿದ ಸೇವೆ ಸ್ಮರಣೀಯ. ಜೈನ ಧರ್ಮದ ಆಚಾರ, ವಿಚಾರಗಳನ್ನು ಅಳವಡಿಸಿಕೊಂಡು ಅಂಹಿಸೆ, ಪ್ರೇಮ, ವಾತ್ಸಲ್ಯದ ವಿಚಾರಗಳನ್ನು ಅನುಸರಿಸುತ್ತಿದ್ದಾರೆ. ಅವರ ಸಮರ್ಪಣಾ ಭಾವದ ಕೆಲಸ ಗಮನಿಸಿ 1008 ಭಗಾವಾನ್ ಮಹಾವೀರ ತೀರ್ಥಂಕರರ 2550ನೇ ನಿರ್ವಾಣ ಮಹಾಮಹೋತ್ಸವದ ಅಂಗವಾಗಿ, ಬಾಲಾಚಾರ್ಯ 108 ಸಿದ್ಧಸೇನ ಮುನಿ ಮಹಾರಾಜರ ಸಾನ್ನಿಧ್ಯದಲ್ಲಿ ಪ್ರಶಸ್ತಿ ಪ್ರದಾನ ಮಾಡಲಾಗಿದೆ' ಎಂದು ಆಶ್ರಮದ ಪ್ರಕಟಣೆ ತಿಳಿಸಿದೆ.

ಮುನಿಶ್ರೀ 108 ಪುಣ್ಯ ಸಾಗರ ಮಹಾರಾಜರು, 108 ಪುರಾಣ ಸಾಗರ ಮಹಾರಾಜರು, ಮುನಿಶ್ರೀ 108 ಪ್ರಸಂಗ ಸಾಗರ ಮಹಾರಾಜರು, ವಿಧಾನ ಪರಿಷತ್ ಸದಸ್ಯ ಚನ್ನರಾಜ ಹಟ್ಟಿಹೊಳಿ, ಮುಖಂಡರಾದ ಸುಕುಮಾರ ಹುಡೇದ, ಶಾಂತು ಬೆಲ್ಲದ, ಅಣ್ಣಪ್ಪ ಹುಡೇದ, ಭರತೇಶ ಬೆಲ್ಲದ, ಮಹಾವೀರ ಪಾಟೀಲ, ರಾಹುಲ ಘಂಟಿ, ಚಾರುಕೀರ್ತಿ ಸೈಬನ್ನವರ್ ಮೊದಲಾದವರು ಇದ್ದರು.

ದೇವಸ್ಥಾನ ಉದ್ಘಾಟನೆ: ಬೆಳಗಾವಿ ತಾಲ್ಲೂಕಿನ ಹಂಗರಗಾ ಗ್ರಾಮದಲ್ಲಿ ನಿರ್ಮಿಸಿದ ಮರಗಾಯಿ ದೇವಿ ದೇವಸ್ಥಾನವನ್ನು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವೆ ಹೆಬ್ಬಾಳಕರ್ ಉದ್ಘಾಟಿಸಿದರು.

ವಾಸ್ತುಶಾಂತಿ, ಕಳಸಾರೋಹನ, ಪ್ರಾಣ ಪ್ರತಿಷ್ಠಾಪನೆ ಹಾಗೂ ಅಭಿಷೇಕ ಕಾರ್ಯಕ್ರಮದಲ್ಲೂ ಪಾಲ್ಗೊಂಡರು.

ಗ್ರಾಮದ ಹಿರಿಯರಾದ ಬಾಳು ಪಾಟೀಲ, ವಿಷ್ಣು ಸೋನಾಲ್ಕರ್, ಗೋಪಾಲ್ ಘೋಡ್ಸೆ, ಉಮೇಶ ಸೋನಾಲ್ಕರ್, ಯಶವಂತ ನಾಯ್ಕ್, ಮಲ್ಲಪ್ಪ ಕಾಂಬಳೆ, ನಿವೃತ್ತಿ ಕಾಂಬಳೆ, ಮೀನಾ ಘೋಡ್ಸೆ, ಸವಿತಾ ನಾಯಕ್, ರಾಮಚಂದ್ರ ಹಲಕರಣಿಕರ್ ಉಪಸ್ಥಿತರಿದ್ದರು.

## ಲೋಕಾಯುಕ್ತ ಜನ ಸಂಪರ್ಕ ಸಭೆ ಡಿ.21 ರಂದು

ಬೆಳಗಾವಿ: ಬೆಳಗಾವಿ ತಾಲೂಕಾ ಪಂಚಾಯತ ಸಭಾ ಭವನದಲ್ಲಿ ಡಿ.21, 2023 ರಂದು ಬೆಳಿಗ್ಗೆ 11 ಗಂಟೆಯಿಂದ 2 ಗಂಟೆಯವರೆಗೆ ಬೆಳಗಾವಿ ಲೋಕಾಯುಕ್ತ ಅಧಿಕಾರಿಗಳು ಬೆಳಗಾವಿ ತಾಲೂಕಿನ ಎಲ್ಲ ತಾಲೂಕಾ ಮಟ್ಟದ ಅಧಿಕಾರಿಗಳ ಸಮಕ್ಷಮದಲ್ಲಿ ಲೋಕಾಯುಕ್ತ ಜನ ಸಂಪರ್ಕ ಸಭೆಯನ್ನು ನಡೆಯಲಿದೆ.

ಸರ್ಕಾರಿ ಕಛೇರಿಯಲ್ಲಿಯ ಅಧಿಕಾರಿಗಳು ಸಾರ್ವಜನಿಕರ ಅಧಿಕೃತ ಕೆಲಸಗಳನ್ನು ಮಾಡಿಕೊಡುವಲ್ಲಿ ವಿಳಂಬ ನೀತಿ ಅನುಸರಿಸುತ್ತಿದ್ದಲ್ಲಿ, ಅಂತಹ ಅಧಿಕಾರಿಗಳ ವಿರುದ್ಧ ದೂರು ಸಲ್ಲಿಸಿದಲ್ಲಿ, ಸ್ಥಳದಲ್ಲಿಯೇ ಅಧಿಕಾರಿಗಳಿಂದ ಪರಿಹರಿಸಿಕೊಳ್ಳಬಹುದಾಗಿದು, ಅರ್ಜಿ ಸಲ್ಲಿಸಲು ಇಚ್ಛಿಸುವವರು ನಿಗದಿತ ನಮೂನೆಯ ಅರ್ಜಿಯೊಂದಿಗೆ ಹಾಜರಿರಬೇಕು.

ಸರ್ಕಾರಿ ಅಧಿಕಾರಿಗಳು ಕೆಲಸ ಮಾಡಿಕೊಡುವಲ್ಲಿ ಹಣಕ್ಕೆ ಬೇಡಿಕೆ ಇಟ್ಟಲ್ಲಿ, ಒತ್ತಾಯಿಸಿದಲ್ಲಿ ಅಥವಾ ಸರ್ಕಾರಿ ಅಧಿಕಾರಿಯ ಅಕ್ರಮ ಆಸ್ತಿ ಸಂಪಾದನೆ ಬಗ್ಗೆ ಮಾಹಿತಿ ಇದ್ದಲ್ಲಿ, ಲೋಕಾಯುಕ್ತ ಅಧಿಕಾರಿಗಳೊಂದಿಗೆ ನೇರವಾಗಿ, ಗುಪ್ತವಾಗಿ ಮಾಹಿತಿ ನೀಡಿ, ಸದರಿ ಸಭೆಯ ಸದುಪಯೋಗ ಪಡಿಸಿಕೊಳ್ಳಬೇಕು.

ಹೆಚ್ಚಿನ ವಿವರಗಳಿಗಾಗಿ ಈ ಕಛೇರಿ ದೂರವಾಣಿ ಸಂಖ್ಯೆ 0831–2950756 ಅಥವಾ 0831–2421922 ಗೆ ಸಂಪರ್ಕಿಸಬಹುದು ಎಂದು ಬೆಳಗಾವಿ ಕರ್ನಾಟಕ ಲೋಕಾಯುಕ್ತ ಪೋಲೀಸ್ ಅಧೀಕ್ಷಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಕ್ರೀಡಾ ಶಾಲೆ/ಕ್ರೀಡಾ ನಿಲಯಗಳಿಗೆ ಆಯ್ಕೆ

ಬೆಳಗಾವಿ: ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯಿಂದ ನಡೆಸಲಾಗುತ್ತಿರುವ ಕ್ರೀಡಾ ಶಾಲೆ, ಕ್ರೀಡಾ ನಿಲಯಗಳಿಗೆ 2024–25 ನೇ ಸಾಲಿಗಾಗಿ ಆಯ್ಕೆಗಳನ್ನು ಬೆಳಗಾವಿ ಜಿಲ್ಲೆಯ ಎಲ್ಲ ತಾಲೂಕುಗಳಲ್ಲಿ ನಡೆಸಲಾಗುತ್ತಿದೆ.

ಮೂಡಲಗಿ, ರಾಮದುರ್ಗ, ಅಥಣಿ, ಖಾನಾಪೂರ ತಾಲೂಕು ಮಟ್ಟದ ಆಯ್ಕೆ ಪ್ರಕ್ರಿಯೆಗಳನ್ನು ಡಿ.21 2023 ರಂದು ಮೂಡಲಗಿ ಪಟ್ಟಣದ ಮೂಡಲಗಿ ಶಿಕ್ಷಣ ಸಂಸ್ಥೆಯ ಎಸ್.ಎಸ್.ಆರ್ ಜೂನಿಯರ್ ಕಾಲೇಜ್ ಮೈದಾನ, ರಾಮದುರ್ಗ ತಾಲೂಕಿನ ಚಂದರಗಿ ಗ್ರಾಮದ ಚಂದರಗಿ ಕ್ರೀಡಾ ಶಾಲೆಯ ಮೈದಾನ, ಅಥಣಿ ತಾಲೂಕು ಕ್ರೀಡಾಂಗಣ, ಖಾನಾಪೂರ ತಾಲೂಕು ಕ್ರೀಡಾಂಗಣಗಳಲ್ಲಿ ನಡೆಸಲಾಗುವುದು.

ಹುಕ್ಕೇರಿ, ಸವದತ್ತಿ, ರಾಯಬಾಗ ಹಾಗೂ ಬೈಲಹೊಂಗಲ ತಾಲೂಕು ಮಟ್ಟದ ಆಯ್ಕೆ ಪ್ರಕ್ರಿಯೆಗಳನ್ನು ಡಿ. 22 2023 ರಂದು ಹುಕ್ಕೇರಿ ತಾಲ್ಲೂಕು (ಕ್ಯಾರಗುಡ್–ರಕ್ಷಿ) ಕ್ರೀಡಾಂಗಣ, ಸವದತ್ತಿಯ ಶ್ರೀ ರೇಣುಕಾ ತಾಲೂಕಾ ಕ್ರೀಡಾಂಗಣ, ರಾಯಬಾಗ ತಾಲೂಕಾ ಕ್ರೀಡಾಂಗಣ, ಬೈಲಹೊಂಗಲ ತಾಲೂಕು ಕ್ರೀಡಾಂಗಣಗಳಲ್ಲಿ ನಡೆಸಲಾಗುತ್ತದೆ.

ಚಿಕ್ಕೋಡಿ, ಕಿತ್ತೂರು, ಕಾಗವಾಡ ತಾಲೂಕು ಮಟ್ಟದ ಆಯ್ಕೆ ಪ್ರಕ್ರಿಯೆಗಳನ್ನು ಡಿ.26 2023 ರಂದು ಚಿಕ್ಕೋಡಿ ತಾಲೂಕಿನ ಶಮನೇವಾಡಿ–ಬೇಡಕಿಹಾಳ ಗ್ರಾಮದ ಶ್ರೀಮತಿ ಕುಸುಮಾವತಿ ಕಲಾ ಮತ್ತು ವಾಣಿಜ್ಯ ಮಹಾವಿದ್ಯಾಲಯದ ಮೈದಾನ, ಬೈಲಹೊಂಗಲ ತಾಲೂಕು ಕ್ರೀಡಾಂಗಣ, ಕಾಗವಾಡ ಪಟ್ಟಣದ ಮಲ್ಲಿಕಾರ್ಜುನ ವಿದ್ಯಾಲಯದ ಮೈದಾನಗಳಲ್ಲಿ ನಡೆಸಲಾಗುವುದು.

ಗೋಕಾಕ, ನಿಪ್ಪಾಣಿ ತಾಲೂಕು ಮಟ್ಟದ ಆಯ್ಕೆ ಪ್ರಕ್ರಿಯೆ ಡಿ. 27 2023 ರಂದು ಗೋಕಾಕ ಪಟ್ಟಣದ ಶ್ರೀ ಮಹರ್ಷಿ ವಾಲ್ಮೀಕಿ ಕ್ರೀಡಾಂಗಣ, ನಿಪ್ಪಾಣಿ ತಾಲೂಕಿನ ಬೆಡಕಿಹಾಳ ಪಟ್ಟಣದ ಬಿ.ಎಸ್. ಸಂಯುಕ್ತ ಪದವಿಪೂರ್ವ ಕಾಲೇಜ್ ಮೈದಾನಗಳಲ್ಲಿ ನಡೆಸಲ್ಲಿದು, ಹಾಗೂ ಬೆಳಗಾವಿ ತಾಲೂಕು ಮಟ್ಟದ ಆಯ್ಕೆ ಪ್ರಕ್ರಿಯೆಯನ್ನು ಡಿ.28 2023 ರಂದು ಬೆಳಗಾವಿಯ ಜಿಲ್ಲಾ ಕ್ರೀಡಾಂಗಣದಲ್ಲಿ ಆಯ್ಕೆ ಪ್ರಕ್ರಿಯೆ ನಡೆಯಲಿದೆ.

ಅಥ್ಲೆಟಿಕ್ಸ್, ಹಾಕಿ, ಬಾಸ್ಕೇಟ್‌ಬಾಲ್, ವಾಲಿಬಾಲ್, ಫುಟ್‌ಬಾಲ್, ಜಿಮ್ನಾಸ್ಟಿಕ್, ಜುಡೋ, ಕುಸ್ತಿ, ಸೈಕ್ಲಿಂಗ್ ಹಾಗೂ ಅಥ್ಲೆಟಿಕ್ಸ್ ಕ್ರೀಡೆಗಳಲ್ಲಿ ಆಯ್ಕೆಗಳನ್ನು ನಡೆಸಲಾಗುವುದು. 4ನೇ ತರಗತಿ ಮುಗಿಸಿ 5ನೇ ತರಗತಿಗೆ ಅರ್ಹರಾಗುವ 11 ವರ್ಷದೊಳಗಿನ, 7ನೇ ತರಗತಿ ಮುಗಿಸಿ 8ನೇ ತರಗತಿಗೆ ಅರ್ಹರಾಗುವ 14 ವರ್ಷದೊಳಗಿನ ಹಾಗೂ 10ನೇ ತರಗತಿ ಮುಗಿಸಿ 1ನೇ ಪಿ.ಯು.ಸಿ ಗೆ ಅರ್ಹರಾಗುವ 18 ವರ್ಷದೊಗಳಿಗಿನ ಬಾಲಕ ಬಾಲಕಿಯರು ಈ ಆಯ್ಕೆಗಳಲ್ಲಿ ಭಾಗವಹಿಸಲು ಅರ್ಹರಿರುತ್ತಾರೆ.

ರಾಜ್ಯ ಮಟ್ಟದಲ್ಲಿ ಆಯ್ಕೆಯಾದವರಿಗೆ ಊಟೋಪಹಾರ, ವಸತಿಯೊಂದಿಗೆ ಆಯಾ ಕ್ರೀಡೆಗಳಲ್ಲಿ ಉಚಿತ ತರಬೇತಿ ನೀಡಿ ರಾಷ್ಟ್ರ, ಅಂತರರಾಷ್ಟ್ರ ಮಟ್ಟದ ಕ್ರೀಡಾಪಟುಗಳನ್ನು ತಯಾರಿಸುವುದು ಈ ಯೋಜನೆಯ ಗುರಿಯಾಗಿದೆ.

ಅರ್ಹ ಬಾಲಕ, ಬಾಲಕಿಯರು ಆಯಾ ದಿನಗಳಂದು ಸದರಿ ಮೇಲಿನ ಸ್ಥಳಗಳಲ್ಲಿ ಅಗತ್ಯ ದಾಖಲೆಗಳೊಂದಿಗೆ ಮುಂಜಾನೆ 8.30 ಗಂಟೆಗೆ ಹಾಜರಿರಬೇಕು. ತಾಲೂಕ ಮಟ್ಟದ ಆಯ್ಕೆಗಳಲ್ಲಿ ಭಾಗವಹಿಸಲು ಸಾಧ್ಯವಾಗದ ಕ್ರೀಡಾಪಟುಗಳು ಡಿ.28 2023 ರಂದು ಬೆಳಗಾವಿ ಜಿಲ್ಲಾ ಕ್ರೀಡಾಂಗಣದಲ್ಲಿ ಜರುಗಲಿರುವ ಆಯ್ಕೆ ಪ್ರಕ್ರಿಯೆಯಲ್ಲಿ ನೇರವಾಗಿ ಭಾಗವಹಿಸಬಹುದಾಗಿರುತ್ತದೆ. ರಾಯಬಾಗ, ಚಿಕ್ಕೋಡಿ, ನಿಪ್ಪಾಣಿ ತಾಲೂಕುಗಳಿಗೆ ಸಂಬಂಧಿಸಿದಂತೆ ದೂರವಾಣಿ ಸಂಖ್ಯೆ. 7022378777, ಬೈಲಹೊಂಗಲ, ಕಿತ್ತೂರು, ಗೋಕಾಕ ತಾಲೂಕುಗಳ ದೂರವಾಣಿ ಸಂಖ್ಯೆ: 7019699077, ಖಾನಾಪೂರ, ಸವದತ್ತಿ ತಾಲೂಕುಗಳಿಗೆ 8080485113, ಅಥಣಿ, ಕಾಗವಾಡ ತಾಲೂಕುಗಳ ದೂರವಾಣಿ ಸಂಖ್ಯೆ. 9379744731, ಮೂಡಲಗಿ ತಾಲೂಕುಗಳ ದೂರವಾಣಿ ಸಂಖ್ಯೆ. 8618169003, ರಾಮದುರ್ಗ ತಾಲೂಗಳ ದೂರವಾಣಿ ಸಂಖ್ಯೆ. 8317456301, ಹುಕ್ಕೇರಿ ತಾಲೂಕುಗಳ ದೂರವಾಣಿ ಸಂಖ್ಯೆ. 7259080818 ಅಥವಾ ಕಛೇರಿ ದೂರವಾಣಿ ಸಂಖ್ಯೆ 0831–2950306 ಗೆ ಸಂಪರ್ಕಿಸಬಹುದಾಗಿದೆ ಎಂದು ಬೆಳಗಾವಿ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಉಪ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಜೈವಿಕ ಪಾಲಕರು ಸಂಪರ್ಕಿಸಲು ಕೋರಿಕೆ

ಬೆಳಗಾವಿ: ಗೋಕಾಕ ಆಸ್ಪತ್ರೆಯಿಂದ ಬೆಳಗಾವಿ ಬಿಮ್ಸ್ ಆಸ್ಪತ್ರೆಗೆ ಆ.22, 2023 ರಂದು ಮಧ್ಯಾಹ್ನ 3.15 ಗಂಟೆಗೆ ಅಪರಿಚಿತ ಮಹಿಳೆಯು 22 ದಿನದ ಗಂಡು ಮಗುವನ್ನು NICU ವಿಭಾಗಕ್ಕೆ ಮಗುವಿಗೆ ಉಸಿರಾಟದ ಸಮಸ್ಯೆ ಇರುವುದರಿಂದ **(Ventilator & Tube)** ನಂತರ NICU ಸಿಬ್ಬಂದಿಗಳು ಮಗುವಿನ ದಾಖಲು ಪತ್ರ (ಓಪಿಡಿ) ಮಾಡಿಕೊಂಡು ಬರಲು ತಾಯಿಗೆ ಹೇಳಿರುತ್ತಾರೆ.

ಮಗುವಿನ ತಾಯಿಯು ಅದೆ ದಿನ ಸಂಜೆ 3.40 ಗಂಟೆಗೆ ಓಪಿಡಿ ಚೀಟಿಯನ್ನು ಮಾಡಲೆಂದು ಹೊದವರು ಮರಳಿ ಎನ್.ಆಯ್.ಸಿ.ಯು. ವಿಭಾಗಕ್ಕೆ ಬಂದಿರುವುದಿಲ್ಲ ಎಂದು ನಂತರ ಆಸ್ಪತ್ರೆಯ ಸಿಬ್ಬಂದಿಗಳು ತಾಯಿಯನ್ನು ಎಲ್ಲ ಕಡೆಗೆ ಹುಡುಕಿದರು ಸಹ ಪತ್ತೆಯಾಗದೆಯಿರುವುದರಿಂದ ಈ ವಿಷಯವನ್ನು ಸ್ಥಳೀಯ ಎ.ಪಿ.ಎಮ್.ಸಿ ಪೋಲಿಸ್ ಠಾಣೆಗೆ ಮಾಹಿತಿಯನ್ನು ನೀಡಿರುತ್ತಾರೆ.ಸದರಿ ಮಗು ಸುಮಾರು ಎರಡು ತಿಂಗಳಿನಿಂದ ಬಿಮ್ಸ್ ಆಸ್ಪತ್ರೆಯ NICU ವಿಭಾಗದಲ್ಲಿ ಚಿಕಿತ್ಸೆಯನ್ನು ಪಡೆದು ಸದ್ಯ ಮಗುವಿನ ಆರೋಗ್ಯ ಸುಧಾರಣೆಯಾಗಿದ್ದು, ಆಸ್ಪತ್ರೆಯಿಂದ ಬಿಡುಗಡೆ ಮಾಡಿ ಮಕ್ಕಳ ಕಲ್ಯಾಣ ಸಮಿತಿಯ ಮುಂದೆ ಹಾಜರಪಡಿಸಿ ಸದರಿ ಮಗುವನ್ನು ಮಕ್ಕಳ ಕಲ್ಯಾಣ ಸಮಿತಿಯ ಆದೇಶದ ಮೇರೆಗೆ ತಾತ್ಕಾಲಿಕವಾಗಿ ರಕ್ಷಣೆ ಮತ್ತು ಪೋಷಣೆಗಾಗಿ ಸರ್ಕಾರಿ ವಿಶೇಷ ದತ್ತು ಸ್ವೀಕಾರ ಕೇಂದ್ರ ರಾಮತೀರ್ಥನಗರ ಬೆಳಗಾವಿಯಲ್ಲಿ ಅಭೀರಕ್ಷಣೆಗಾಗಿ ಇಡಲಾಗಿದೆ. ಮಗುವಿನ ಜೈವಿಕ ಪಾಲಕರು ಇದ್ದಲ್ಲಿ ಜಿಲ್ಲಾ ಮಕ್ಕಳ ರಕ್ಷಣಾ ಘಟಕ, ಸುವರ್ಣ ವಿಧಾನಸೌಧ ಬೆಳಗಾವಿ ದೂ: 0831–2474111/8073972929 ಕ್ಕೆ ಸಂಪರ್ಕಿಸಬೇಕು ಎಂದು ಬೆಳಗಾವಿಯ ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿಗಳಾದ ಮಹಾಂತೇಶ ಭಜಂತ್ರಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಗೀತೆಯ ಸಂದೇಶ ಹಂಚುವ ಕಾರ್ಯ ಶ್ಲಾಘನೀಯ: ಡಾ. ಪ್ರಭಾಕರ ಕೋರೆ



ಬೆಳಗಾವಿ: ಗೀತೆಯ ಸಂದೇಶವನ್ನು ಸಮಸ್ತ ಜನತೆಗೆ ತಲುಪಿಸುತ್ತಿರುವ ಸೋಂದಾ ಸ್ವರ್ಣವಲ್ಲೀ ಮಹಾಸಂಸ್ಥಾನದ ಕಾರ್ಯ ಶ್ಲಾಘನೀಯ ಎಂದು ರಾಜ್ಯಸಭೆಯ ಮಾಜಿ ಸದಸ್ಯ, ಕೆಎಲ್‌ಇ ಸಂಸ್ಥೆಯ ಕಾರ್ಯಾಧ್ಯಕ್ಷ ಹಾಗೂ ಭಗವದ್ಗೀತೆ ಅಭಿಯಾನ ಸಮಿತಿಯ ಗೌರವಾಧ್ಯಕ್ಷ ಡಾ.ಪ್ರಭಾಕರ ಕೋರೆ ಹೇಳಿದ್ದಾರೆ.

ಸೋಮವಾರ ಇಲ್ಲಿಯ ಗುರುದೇವ ರಾನಡೆ ಮಂದಿರದಲ್ಲಿ, ಭಗವದ್ಗೀತೆ ಅಭಿಯಾನ ಸಮಿತಿ, ಜನಕಲ್ಯಾಣ ಟ್ರಸ್ಟ್ ಹಾಗೂ ಎಸಿಪಿಆರ್ ಸಹಯೋಗದಲ್ಲಿ ನಡೆದ ಗೀತಾ ಸಮನ್ವಯ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ನಿಸ್ವಾರ್ಥದಿಂದ ಮೂಲ ಧರ್ಮವನ್ನು ಎತ್ತಿ ಹಿಡಿಯುವ ಕೆಲಸ ಅತ್ಯಂತ ಸ್ತುತ್ಯಾರ್ಹ. ಬೆಳಗಾವಿಯಲ್ಲಿ ಭಗವದ್ಗೀತೆ ಅಭಿಯಾನ ನಡೆಸುತ್ತಿರುವುದು ಬಹಳ ದೊಡ್ಡ ಕೆಲಸ ಎಂದ ಕೋರೆ, ಡಿ.23ರಂದು ನಡೆಯಲಿರುವ ಮಹಾ ಸಮರ್ಪಣೆ ಕಾರ್ಯಕ್ರಮದಲ್ಲಿ ಬಹಳ ದೊಡ್ಡ ಸಂಖ್ಯೆಯಲ್ಲಿ ಜನತೆ ಭಾಗವಹಿಸಲಿದ್ದಾರೆ ಎಂದರು.

ಸಾನ್ನಿಧ್ಯ ವಹಿಸಿದ್ದ ಸ್ವರ್ಣವಲ್ಲಿಯ ಶ್ರೀಮದ್ ಗಂಗಾಧರೇಂದ್ರ ಸರಸ್ವತಿ ಸ್ವಾಮೀಜಿ, ಭಗವದ್ಗೀತೆಯ ತತ್ವದ ಅಡಿಯಲ್ಲಿ ಎಲ್ಲ ಸಿದ್ಧಾಂತಗಳನ್ನು ಒಂದೇ ಕಡೆ ತರುವ ಪ್ರಯತ್ನದ ಭಾಗವಾಗಿ ಗೀತಾ ಸಮನ್ವಯ ನಡೆಸಲಾಗುತ್ತಿದೆ ಎಂದರು.

ಎಲ್ಲದಕ್ಕೂ ಅದರದ್ದೇ ಆದ ಸ್ಥಾನ ಇರಬೇಕು. ಆದರೆ ಅವೆಲ್ಲದರ ಮಧ್ಯೆ ಹೊಂದಾಣಿಕೆ ಇರಬೇಕು. ಅದೇ ಸಮನ್ವಯ ಎಂದರು. ತತ್ವ ಶಾಸ್ತ್ರಗಳಲ್ಲಿ ಕೂಡ ಪರಸ್ಪರ ಹೊಂದಾಣಿಕೆ ಇರುತ್ತದೆ. ದ್ವೈತ, ಅದ್ವೈತ, ವಿಶಿಷ್ಟಾದ್ವೈತ ತತ್ವಗಳ ಮೇಲೆ ಇಲ್ಲಿ ವಿಷಯ ಮಂಡನೆ ನಡೆಯುತ್ತದೆ. ಈ ಮೂರೂ ಪ್ರಕಾರದ ಚಿಂತನೆಗಳಲ್ಲಿ ಹೊಂದಾಣಿಕೆ ಇರುತ್ತದೆ. ಆ ಕುರಿತ ಚರ್ಚೆಯೇ ಗೀತಾ ಸಮನ್ವಯ ಎಂದು ಶ್ರೀಗಳು ಹೇಳಿದರು.

ಎಲ್ಲರಿಗೂ ಅವರವರ ಮತಗಳ ಬಗ್ಗೆ ಗೌರವ ಇರಬೇಕು. ಆದರೆ ಬೇರೆ ಮತಗಳ ಬಗ್ಗೆ ಗೌರವ, ಸಮನ್ವಯ ಇರಬೇಕು ಎಂದೂ ಶ್ರೀಗಳು ಹೇಳಿದರು

ನಂತರ ಸಂಜೆಯವರಗೂ ವಿವಿಧ ಗೋಷ್ಠಿಗಳು ನಡೆದವು. ಭಗವದ್ಗೀತೆ ಮತ್ತು ಶರಣ ಸಾಹಿತ್ಯ ಕುರಿತು ನಿವೃತ್ತ ಪ್ರಾಚಾರ್ಯ ಡಾ.ವಿ.ಎಸ್. ಮಾಳಿ, ಆಳ್ವಾರ್ ಸಾಹಿತ್ಯ ಕುರಿತು ಮೈಸೂರು ಸಂಸ್ಕೃತ ಕಾಲೇಜಿನ ಡಾ.ಎಂ.ಆನಂದ, ಭಗವದ್ಗೀತೆ ಮತ್ತು ದಾಸ ಸಾಹಿತ್ಯ ಕುರಿತು ಇಸ್ಕಾನ್ ನ ನಾಗೇಂದ್ರ ದಾಸ ಹಾಗೂ ಪಂಡಿತ ಶ್ರೀನಿಧಿ ಆಚಾರ್ ಜಮ್ಮೀಸ್, ಭಗವದ್ಗೀತೆ ಮತ್ತು ರಾಮಕೃಷ್ಣ–ವಿವೇಕಾನಂದ ಸಾಹಿತ್ಯ ಕುರಿತು ರಾಮಕೃಷ್ಣ ಆಶ್ರಮದ ಶ್ರೀ ನಿತ್ಯಸ್ಥಾನಂದ ಸ್ವಾಮಿಗಳು ಮತ್ತು ಶ್ರೀ ಕ್ಷೇತ್ರ ಶಕಟಪುರದ ಮಧುಸೂದನ್ ಶಾಸ್ತ್ರೀ ಹಂಪಿಹೊಳಿ ವಿಷಯಗಳನ್ನು ಮಂಡಿಸಿದರು.

ಮೈಸೂರಿನ ಭಾರತೀ ಯೋಗಧಾಮದ ಯೋಗ ರತ್ನ ಡಾ.ಕೆ.ಎಲ್.ಶಂಕರನಾರಾಯಣ ಜೋಯಿಸ್ ಸಮಾರೋಪ ಭಾಷಣ ಮಾಡಿದರು.

ಹುಕ್ಕೇರಿ ಹಿರೇಮಠದ ಶ್ರೀ ಚಂದ್ರಶೇಖರ ಶಿವಾಚಾರ್ಯ ಸ್ವಾಮಿಗಳು, ವಿದ್ವಾನ್ ಸೂರ್ಯನಾರಾಯಣ ಭಟ್, ಎಸಿಪಿಆರ್ ಗೌರವ ಕಾರ್ಯದರ್ಶಿ ಎಂ.ಬಿ.ಜಿರಲಿ, ರಾಮ ಭಂಡಾರಿ, ಭಗವದ್ಗೀತೆ ಅಭಿಯಾನ ಸಮಿತಿಯ ಕಾರ್ಯಾಧ್ಯಕ್ಷ ಪರಮೇಶ್ವರ ಹೆಗಡೆ, ಕಾರ್ಯದರ್ಶಿ ಎಂ.ಕೆ.ಹೆಗಡೆ, ಸೀತಾರಾಮ ಭಾಗವತ, ಶ್ರೀಧರ ಗುಮ್ಮಾನಿ, ವೆಂಕಟ್ರಮಣ ಹೆಗಡೆ, ಗಣೇಶ ಹೆಗಡೆ, ಅರುಣ ನಾಯ್ಕ್, ಸುಬ್ರಹ್ಮಣ್ಯ ಹೆಗಡೆ, ಸಿ.ಜಿ.ಶಾಸ್ತ್ರಿ, ಶ್ರೀಪಾದ ಭಟ್, ವಿನಾಯಕ ಹೆಗಡೆ ಮೊದಲಾದವರಿದ್ದರು.

ಅಭಿಯಾನ ಸಮಿತಿ ಸಂಚಾಲಕ ಸುಬ್ರಹ್ಮಣ್ಯ ಭಟ್ ಹಾಗೂ ಉಪಾಧ್ಯಕ್ಷೆ ಪೂರ್ಣಿಮಾ ಹೆಗಡೆ ಕಾರ್ಯಕ್ರಮ ನಿರೂಪಿಸಿದರು. ಮಾತೆಯರಿಂದ ಭಗವದ್ಗೀತೆ ಪಠಣ ನಡೆಯಿತು.

# ಯೋಗದಿಂದ ಮಾನಸಿಕ ಹಾಗೂ ದೈಹಿಕ ಆರೋಗ್ಯ ವೃದ್ಧಿ



ಬೆಳಗಾವಿ: ಭಾರತದಲ್ಲಿ ಯೋಗ ಎನ್ನುವುದು ನಮ್ಮ ಗ್ರಂಥಗಳಲ್ಲಿ ಉಲ್ಲೇಖಿಸಲ್ಪಟ್ಟಿರುವಂತಹ ಅತ್ಯಂತ ಪ್ರಾಚೀನ ಕಲೆ ಇದು ಆಧುನಿಕ ವಿಜ್ಞಾನ ಮತ್ತು ಋಷಿಮುನಿಗಳ ಜ್ಞಾನದ ಸಂಯೋಜನೆ. ಯೋಗ ನಿಮ್ಮನ್ನು ಆರೋಗ್ಯವಾಗಿಡಲು ಮತ್ತು ದೀರ್ಘಾವಧಿ ಜೀವನ ನಡೆಸಲು ನೆರವಾಗಲಿದೆ ಯೋಗವು ತೂಕ ಇಳಿಸಿಕೊಳ್ಳಲು ಹಾಗೂ ದೇಹವನ್ನು ಸದೃಢವಾಗಿಡಲು ವ್ಯಾಯಾಮಕ್ಕಿಂತಲೂ ಹೆಚ್ಚು ಪರಿಣಾಮಕಾರಿ ಆಧುನಿಕ ವಿಜ್ಞಾನದೊಂದಿಗೆ ಹೆಚ್ಚಿನ ಆರೋಗ್ಯ ಲಾಭ ನೀಡುತ್ತದೆ ಎಂದು ಪತಂಜಲಿ ಯೋಗ ಶಿಕ್ಷಕರಾದ ರಮೇಶ ಮಹಾಡಿಕ ಅಭಿಪ್ರಾಯಪಟ್ಟರು.

ಜಯ ಭಾರತ ಫೌಂಡೇಶನ, ಬೆಳಗಾವಿ ಹಾಗೂ ಮಹಿಳಾ ಕಲ್ಯಾಣ ಸಂಸ್ಥೆ, ಬೆಳಗಾವಿ ಇವರ ಸಂಯುಕ್ತಾಶ್ರಯದಲ್ಲಿ ಆಂಜನೇಯನಗರದ ಗ್ಲಾಸ ಹೌಸ್‌ನಲ್ಲಿ ಪ್ರೌಢಶಾಲಾ ವಿಧ್ಯಾರ್ಥಿಗಳಿಗೆ ಆಯೋಜಿಸಿದ್ದ ಉತ್ತಮ ಆರೋಗ್ಯಕ್ಕಾಗಿ ಯೋಗಾಸನಗಳು ವಿಷಯದ ಕುರಿತು ಚಿತ್ರಕಲೆ ಸ್ಪರ್ಧೆಯಲ್ಲಿ ಮುಖ್ಯ ಅತಿಥಿಗಳಾಗಿ ಮಾತನಾಡಿದರು.

ಇನ್ನೋರ್ವ ಮುಖ್ಯ ಅತಿಥಿಗಳಾಗಿ ಆಗಮಿಸಿದ್ದ ಜಯ ಭಾರತ ಫೌಂಡೇಶನದ ಬಸನಗೌಡ ಪಾಟೀಲ ಮಾತನಾಡಿ ನಮ್ಮ ಫೌಂಢೇಶನ ವತಿಯಿಂದ ಸಮಾಜದ ಶ್ರೇಯೋಬಿವೃದ್ಧಿಗಾಗಿ ಹಲವಾರು ಕಾರ್ಯಕ್ರಮಗಳನ್ನು ಮಾಡುತ್ತಿದ್ದು ಇದರ ಸದುಪಯೋಗವನ್ನು ಸಾರ್ವಜನಿಕರು, ಶಾಲಾ ಕಾಲೇಜು ವಿದ್ಯಾರ್ಥಿಗಳು ಪಡೆದುಕೊಳ್ಳಬೇಕೆಂದರು.

ಚಿತ್ರಕಲೆಯಲ್ಲಿ ರಾಮತೀರ್ಥನಗರದ ಕರ್ನಾಟಕ ಪಬ್ಲಿಕ ಶಾಲೆಯ ವಿಧ್ಯಾರ್ಥಿನಿ ಕುಮಾರಿ ವೈಶಾಲಿ ಲೋಹಾರ ಪ್ರಥಮ, ಕುಮಾರಿ ಅಕ್ಷ ಪಟೇಲ್ ದ್ವಿತೀಯ, ಅಥಣಿಯ ಜೆ ಎ ಫ್ರೌಢಶಾಲೆಯ ಕುಮಾರ ರೋಹನ ಚವ್ಹಾನ ತೃತೀಯ ಸ್ಥಾನ ಪಡೆದುಕೊಂಡರು. ಸಮಾಧಾನಕರವಾಗಿ ರಾಮತೀರ್ಥನಗರದ ಕರ್ನಾಟಕ ಪಬ್ಲಿಕ ಶಾಲೆಯ ವಿಧ್ಯಾರ್ಥಿನಿ ಕುಮಾರಿ ಅನುಷ್ಕಾ ಹೊದ್ಲೂರ, ಕುಮಾರ ಪ್ರಕಾಶ ಹನಬರ ಇವರಿಗೆ ನೀಡಲಾಯಿತು.

ವಿಜೇತರಾದ ವಿಧ್ಯಾರ್ಥಿಗಳಿಗೆ ನಗದು, ಪಾರಿತೋಷಕ ಹಾಗೂ ಪ್ರಮಾಣ ಪತ್ರವನ್ನು ನೀಡಲಾಯಿತು ಭಾಗವಹಿಸಿದ ಎಲ್ಲ ವಿಧ್ಯಾರ್ಥಿಗಳಿಗೂ ಪ್ರಮಾಣಪತ್ರ ನೀಡಲಾಯಿತು ಕಾರ್ಯಕ್ರಮದ ಅಧ್ಯಕ್ಷತೆಯನ್ನು ಮಹಿಳಾ ಕಲ್ಯಾಣ ಸಂಸ್ಥೆಯ ಗೌರವ ಕಾರ್ಯದರ್ಶಿ ವೈಜಯಂತಿ ಚೌಗಲಾ ವಹಿಸಿದ್ದರು. ಚಿತ್ರಕಲಾ ಸ್ಪರ್ಧೆಯ ನಿರ್ಣಾಯಕರಾಗಿ ಶ್ರೀಮತಿ ಸುಜಾತಾ ವಸ್ತ್ರದ ಆಗಮಿಸಿದ್ದರು ಮಹಿಳಾ ಕಲ್ಯಾಣ ಸಂಸ್ಥೆಯ ಸಂಯೋಜಕರಾದ ಎಂ ಎಸ್ ಚೌಗಲಾ, ಉಪಸ್ಥಿತರಿದ್ದರು.

# ಅನುದಾನರಹಿತ ಶಾಲೆಗಳಿಗೆ ತಂತ್ರಾಂಶ ಬಿಡುಗಡೆ

ಬೆಳಗಾವಿ: ಖಾಸಗಿ ಅನುದಾನರಹಿತ ಶಾಲೆಗಳಲ್ಲಿ ಪ್ರವೇಶ ಪಡೆದಿರುವ ಮಕ್ಕಳ 2018–19, 2019–20, 2020–21, 2021–22 ಮತ್ತು 2022–23 ನೇ ಸಾಲಿನ ಆರ್.ಟಿ.ಇ. ಮಕ್ಕಳ ಶುಲ್ಕ ಮರುಪಾವತಿಯನ್ನು ಸಂಬಂಧಿಸಿದ ಖಾಸಗಿ ಅನುದಾನರಹಿತ ಶಾಲೆಗಳಿಗೆ ಮಂಜೂರು ಮಾಡಲು ತಂತ್ರಾಂಶ ಬಿಡುಗಡೆ ಮಾಡಲಾಗಿದೆ.

ಕಾರಣಾಂತರಗಳಿಂದ ಸದರಿ ಶೈಕ್ಷಣಿಕ ವರ್ಷಗಳ ಶುಲ್ಕ ಮರುಪಾವತಿ ಬೇಡಿಕೆ ಸಲ್ಲಿಸದ ಶಾಲೆಗಳಿಗೆ ಅವಕಾಶ ನೀಡುವ ಸಲುವಾಗಿ ವಿಶೇಷ ಕಾಲಮಿತಿ ಆಂದೋಲನ (Special Drive) –2023 ಆಯೋಜಿಸಿ ತಂತ್ರಾಂಶ ಬಿಡುಗಡೆ ಮಾಡಲಾಗಿದೆ.

ಅದರಂತೆ ಜನೇವರಿ 20, 2024 ತಂತ್ರಾಂಶದಲ್ಲಿ ಅರ್ಜಿ ಸಲ್ಲಿಸಲು ಅಂತಿಮ ದಿನಾಂಕವಾಗಿದ್ದು, ಈ ಅವಕಾಶವನ್ನು ಶುಲ್ಕ ಮರುಪಾವತಿ ಬಾಕಿ ಇರುವ ಶಾಲಾ ಆಡಳಿತ ಮಂಡಳಿಯವರು ಸದುಪಯೋಗ ಪಡಿಸಿಕೊಂಡು ಬಾಕಿ ಶುಲ್ಕ ಮರುಪಾವತಿ ಇತ್ಯರ್ಥ ಪಡಿಸಿಕೊಳ್ಳುವಂತೆ ಸೂಚಿಸಲಾಗಿದೆ.

ಈ ವಿಶೇಷ ಆಂದೋಲನದಲ್ಲಿ ಶಾಲಾ ಆಡಳಿತ ಮಂಡಳಿಗಳು ಅರ್ಜಿ ಸಲ್ಲಿಸದೆ ಬಾಕಿ ಉಳಿಸಿಕೊಂಡು ಮುಂದಿನ ದಿನಗಳಲ್ಲಿ ಮೇಲೆ ಸೂಚಿಸಿದ ಅವಧಿಯ ಶುಲ್ಕ ಮರುಪಾವತಿಗೆ ಪ್ರಸ್ತಾವನೆ ಸಲ್ಲಿಸಲು ಅವಕಾಶವಿರುವುದಿಲ್ಲ.

ಹೆಚ್ಚಿನ ಮಾಹಿತಿಗಾಗಿ ಸಂಬಂಧಿಸಿದ ಕ್ಷೇತ್ರ ಶಿಕ್ಷಣಾಧಿಕಾರಿಗಳನ್ನು ಸಂಪರ್ಕಿಸಬಹುದಾಗಿದೆ ಎಂದು ಬೆಳಗಾವಿ (ದಕ್ಷಿಣ) ಶಾಲಾ ಶಿಕ್ಷಣ ಇಲಾಖೆ (ಆಡಳಿತ) ಉಪನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಐಐಎಫ್‌ಎಲ್ ಬಾಂಡ್‌ಗಳ ಮೂಲಕ ರೂ. 1,000 ಕೋಟಿ

ಹುಬ್ಬಳ್ಳಿ: ಐಐಎಫ್‌ಎಲ್ ಸಮಸ್ತಾ ಫೈನಾನ್ಸ್, ಭಾರತದ ಅತಿದೊಡ್ಡ ಬ್ಯಾಂಕಿಂಗ್ ಅಲ್ಲದ ಕಿರುಬಂಡವಾಳ ಕಂಪನಿಗಳಲ್ಲಿ ಒಂದಾಗಿದೆ (ಎನ್ ಬಿ ಎಫ್ ಸಿ –ಎಂ ಎಫ್ ಐ), ವ್ಯವಹಾರದ ಬೆಳವಣಿಗೆ ಮತ್ತು ಬಂಡವಾಳ ವರ್ಧನೆಯ ಉದ್ದೇಶಕ್ಕಾಗಿ ಸುರಕ್ಷಿತ ಬಾಂಡ್‌ಗಳ ಮೊದಲ ಸಾರ್ವಜನಿಕ ವಿತರಣೆ ಮೂಲಕ 1,000 ಕೋಟಿ ರೂ. ಬಾಂಡ್‌ಗಳು 10.50% ಮತ್ತು ಹೆಚ್ಚಿನ ಮಟ್ಟದ ಸುರಕ್ಷತೆ ನೀಡುತ್ತವೆ. ಈ ಸಂಚಿಕೆಯು ಶುಕ್ರವಾರ, ಡಿಸೆಂಬರ್ 15, 2023 ರಂದು ಮುಕ್ತಾಯಗೊಳ್ಳುತ್ತದೆ. ಐಐಎಫ್‌ಎಲ್ ಸಮಸ್ತವು ಐಐಎಫ್‌ಎಲ್ ಫೈನಾನ್ಸ್‌ನ ಒಂದು ಭಾಗವಾಗಿದೆ, ಇದು ರೂ. 73,066 ಕೋಟಿಗಳ ನಿರ್ವಹಣೆಯ ಅಡಿಯಲ್ಲಿ ಸಾಲದ ಆಸ್ತಿಯೊಂದಿಗೆ ಭಾರತದ ಅತಿದೊಡ್ಡ ಚಿಲ್ಲರೆ–ಕೇಂದ್ರಿತ ಎನ್ ಬಿ ಎಫ್ ಸಿ ಗಳಲ್ಲಿ ಒಂದಾಗಿದೆ. ಐಐಎಫ್‌ಎಲ್ ಸಮಸ್ತಾ ಫೈನಾನ್ಸ್ ರೂ 200 ಕೋಟಿಗೆ ಒಟ್ಟುಗೂಡಿಸಿ ರೂ 800 ಕೋಟಿವರೆಗಿನ ಅಧಿಕ ಚಂದಾದಾರಿಕೆಯನ್ನು ಉಳಿಸಿಕೊಳ್ಳಲು ಹಸಿರು–ಶೂ ಆಯ್ಕೆಯೊಂದಿಗೆ ಬಾಂಡ್‌ಗಳನ್ನು ಬಿಡುಗಡೆ ಮಾಡುತ್ತದೆ. ಐಐಎಫ್‌ಎಲ್ ಸಮಸ್ತಾ ಬಾಂಡ್‌ಗಳು 60 ತಿಂಗಳ ಅವಧಿಗೆ ವಾರ್ಷಿಕ 10.50% ರಷ್ಟು ಹೆಚ್ಚಿನ ಕೂಪನ್ ದರ ನೀಡುತ್ತವೆ.

ಎನ್ ಸಿ ಡಿ 24 ತಿಂಗಳುಗಳು, 36 ತಿಂಗಳುಗಳು ಮತ್ತು 60 ತಿಂಗಳುಗಳ ಅವಧಿಗಳಲ್ಲಿ ಲಭ್ಯವಿದೆ. ಪ್ರತಿ ಸರಣಿಗೆ ಮಾಸಿಕ ಮತ್ತು ವಾರ್ಷಿಕ ಆಧಾರದ ಮೇಲೆ ಬಡ್ಡಿ ಪಾವತಿಯ ಆವರ್ತನ ಲಭ್ಯವಿದೆ.

ಕ್ರೆಡಿಟ್ ರೇಟಿಂಗ್ ಸಿಆರ್‌ಐಎಸ್‌ಐಎಲ್‌ಎಎ –/ಪಾಸಿಟಿವ್ ಬೈ ಸಿಆರ್‌ಐಎಸ್‌ಐಎಲ್ ರೇಟಿಂಗ್ಸ್ ಲಿಮಿಟೆಡ್ ಮತ್ತು ಅಕ್ಯೂಟ್ ಎಎ । ಅಕ್ಯೂಟ್ ರೇಟಿಂಗ್ಸ್ ಮತ್ತು ರಿಸರ್ಚ್ ಲಿಮಿಟೆಡ್‌ನಿಂದ ಸ್ಥಿರವಾಗಿದೆ,

ಇದು ಹಣಕಾಸಿನ ಜವಾಬ್ದಾರಿಗಳ ಸಮಯೋಚಿತ ಸೇವೆಗಾಗಿ ಉಪಕರಣಗಳು ಹೆಚ್ಚಿನ ಮಟ್ಟದ ಸುರಕ್ಷತೆಯನ್ನು ಹೊಂದಿವೆ ಮತ್ತು ಕಡಿಮೆ ಕ್ರೆಡಿಟ್ ಅಪಾಯ ಹೊಂದಿವೆ ಎಂದು ಸೂಚಿಸುತ್ತದೆ. ಐಐಎಫ್‌ಎಲ್ ಸಮಸ್ತಾ ಈ ತಿಂಗಳ ಆರಂಭದಲ್ಲಿ ಕ್ರಿಸಿಲ್‌ನಿಂದ 'ಸ್ಥಿರ'ದಿಂದ 'ಪಾಸಿಟಿವ್' ಗೆ ರೇಟಿಂಗ್ ಔಟ್‌ಲುಕ್ ಅಪ್‌ಗ್ರೇಡ್ ಪಡೆದುಕೊಂಡಿದೆ. ಐಐಎಫ್‌ಎಲ್ ಸಮಸ್ತಾ ಫೈನಾನ್ಸ್‌ನ ಎಂ ಡಿ ಮತ್ತು ಸಿ ಇ ಓ ವೆಂಕಟೇಶ್ ಎನ್ ಹೇಳುತ್ತಾರೆ, "ಐಐಎಫ್‌ಎಲ್ ಸಮಸ್ತಾ ಫೈನಾನ್ಸ್ ಸುಮಾರು 1,500 ಶಾಖೆಗಳ ಮೂಲಕ ಭಾರತದಾದ್ಯಂತ ಬಲವಾದ ಭೌತಿಕ ಅಸ್ತಿತ್ವ ಹೊಂದಿದೆ. ಇದು ಹಿಂದುಳಿದ ಮತ್ತು ಸೇವೆಯಿಲ್ಲದ ಜನಸಂಖ್ಯೆಯ ಕ್ರೆಡಿಟ್ ಅಗತ್ಯಗಳನ್ನು ಪೂರೈಸುತ್ತದೆ, ಮುಖ್ಯವಾಗಿ ಹಿಂದುಳಿದ ಹಿನ್ನೆಲೆಯ ಮಹಿಳಾ ಉದ್ಯಮಿಗಳು ಉತ್ತಮ–ವೈವಿಧ್ಯತೆಯ ಪೋರ್ಟ್‌ಫೋಲಿಯೊ ಮೂಲಕ, ಸಂಗ್ರಹಿಸಿದ ಹಣವನ್ನು ಕ್ರೆಡಿಟ್ ಬೇಡಿಕೆ ಪೂರೈಸಲು ಮತ್ತು ವ್ಯಾಪಾರದ ಬೆಳವಣಿಗೆ ಹೆಚ್ಚಿಸಲು ಬಳಸಲಾಗುತ್ತದೆ.

ಐಐಎಫ್‌ಎಲ್ ಸಮಸ್ತಾ ಫೈನಾನ್ಸ್ ಸೆಪ್ಟೆಂಬರ್ 2023 ರ ಅಂತ್ಯದ ವೇಳೆಗೆ ರೂ 12,196 ಕೋಟಿಗಳ ನಿರ್ವಹಣೆಯ ಅಡಿಯಲ್ಲಿ ಸಾಲ ಆಸ್ತಿ ಹೊಂದಿತ್ತು ಮತ್ತು ಎಫ್ ವೈ 24 ರ ಮೊದಲ ಆರು ತಿಂಗಳಲ್ಲಿ ರೂ 233 ಕೋಟಿಗಳ ಲಾಭ ವರದಿ ಮಾಡಿದೆ.

ಐಐಎಫ್‌ಎಲ್ ಸಮಸ್ತಾ ಫೈನಾನ್ಸ್ 1,485 ಶಾಖೆಗಳ ಜಾಲ ಹೊಂದಿದೆ ಮತ್ತು 14,286 ಉದ್ಯೋಗಿಗಳ ಪ್ರಬಲ ಉದ್ಯೋಗಿಗಳನ್ನು ಹೊಂದಿದೆ.

ಸಮಸ್ಯೆಯ ಪ್ರಮುಖ ವ್ಯವಸ್ಥಾಪಕರು ಜೆ ಎಂ ಫೈನಾನ್ಶಿಯಲ್ ಲಿಮಿಟೆಡ್, ಐಐಎಫ್‌ಎಲ್ ಸೆಕ್ಯುರಿಟೀಸ್ ಲಿಮಿಟೆಡ್, ನುವಾಮಾ ವೆಲ್ತ್ ಮ್ಯಾನೇಜ್ಮೆಂಟ್ ಲಿಮಿಟೆಡ್ ಮತ್ತು ಟ್ರಸ್ಟ್ ಇನ್ವೆಸ್ಟ್ಮೆಂಟ್ ಅಡ್ವೈಸರ್ಸ್ ಪ್ರೈವೇಟ್ ಲಿಮಿಟೆಡ್. ಹೂಡಿಕೆದಾರರಿಗೆ ದ್ರವ್ಯತೆ ಒದಗಿಸಲು ಎನ್ ಸಿ ಡಿ ಗಳನ್ನು ಬಿ ಎಸ್ ಇ ಲಿಮಿಟೆಡ್ ಮತ್ತು ನ್ಯಾಷನಲ್ ಸ್ಟಾಕ್ ಎಕ್ಸ್ಚೇಂಜ್ ಆಫ್ ಇಂಡಿಯಾ ಲಿಮಿಟೆಡ್ ನಲ್ಲಿ ಪಟ್ಟಿ ಮಾಡಲಾಗುವುದು. ಐಐಎಫ್‌ಎಲ್ ಬಾಂಡ್‌ಗಳನ್ನು ರೂ 1,000 ಮುಖಬೆಲೆಯಲ್ಲಿ ನೀಡಲಾಗುವುದು ಮತ್ತು ಎಲ್ಲಾ ವರ್ಗಗಳಲ್ಲಿ ಕನಿಷ್ಠ ಅಪ್ಲಿಕೇಶನ್ ಗಾತ್ರ ರೂ 10,000 ಆಗಿದೆ.

# ಗ್ರೀನ್ ರೈಡ್ 3.0 ಭಾಗವಾಗಿ ಟಿವಿಎಸ್ ಐಕ್ಯೂಬ್ ಎಲೆಕ್ಟ್ರಿಕ್ ಬೈಕ್‌ನಲ್ಲಿ 200 ಕಿ.ಮೀ ಎಲೆಕ್ಟ್ರಿಕ್ ಬೈಕ್ ಯಾನ ಯಶಸ್ವಿ



ಬೆಂಗಳೂರು: ಸುಸ್ಥಿರ ಸಾರಿಗೆ ವಿಚಾರದಲ್ಲಿ ಮಹತ್ವದ ಸಾಧನೆ ಮಾಡಿರುವ ಮಿಲಿಂದ್ ಸೋಮನ್, ಭಾರತದ ಫಿಟ್ನೆಸ್ ಐಕಾನ್, ಅವರು 200 ಕಿ.ಮೀ ಎಲೆಕ್ಟ್ರಿಕ್ ವಾಹನ (ಇವಿ) ಯಾನವನ್ನು ಬೆಂಗಳೂರಿನಲ್ಲಿ ಪೂರ್ಣಗೊಳಿಸಿದ್ದಾರೆ. ಪರಿಸರ–ಸ್ನೇಹಿ ಸಾರಿಗೆಯನ್ನು ಉತ್ತೇಜಿಸುವ ಮತ್ತು ಮಾಲಿನ್ಯ ತಗ್ಗಿಸಲು ಕಾರ್ಬನ್ ಪ್ರಮಾಣ ಕಡಿಮೆ ಮಾಡುವ ಪ್ರಯತ್ನವಾದ ಗ್ರೀನ್ ರೈಡ್ 3.0 ಅಭಿಯಾನದಲ್ಲಿ ಈ ಮಹತ್ವದ ಮೈಲುಗಲ್ಲು ದಾಖಲಾಗಿದೆ.

ಮಿಲಿಂದ್, ಆರೋಗ್ಯಕರ ಮತ್ತು ಪರಿಸರ ಪ್ರಜ್ಞೆಯ ಜೀವನವನ್ನು ಪ್ರತಿಪಾದಿಸುತ್ತಿದ್ದು, ಟಿವಿಎಸ್ ಐಕ್ಯೂಬ್ ಎಲೆಕ್ಟ್ರಿಕ್ ಅನ್ನು ಈ ಯಾನಕ್ಕಾಗಿ ಆಯ್ಕೆ ಮಾಡಿಕೊಂಡಿರುವುದು, ನಗರಗಳಲ್ಲಿ ಸ್ವಚ್ಛ ಮತ್ತು ಜಾಣತನದ ಪರ್ಯಾಯ ಸಾರಿಗೆ ವ್ಯವಸ್ಥೆ ಅಳವಡಿಸುವುದರ ಅಗತ್ಯವನ್ನು ಸಂಕೇತಿಸುತ್ತದೆ.

ವಿಶಾಲ ವ್ಯಾಪ್ತಿಯ ಗ್ರೀನ್ ರೈಡ್ 3.0 ಅಭಿಯಾನದ ಭಾಗವಾಗಿ ಮಿಲಿಂದ್ ಅವರು ಆರಂಭದಲ್ಲಿ ಡಿಸೆಂಬರ್ 11ರಂದು ಪುಣೆಯಿಂದ ಲೈಫ್ಲಾಂಗ್ ಸೈಕಲ್ನಲ್ಲಿ ವಡೋದರಾಗೆ ಯಾನ ಆರಂಭಿಸಿದರು. ಮುಂಬಯಿ ಮತ್ತು ಸೂರತ್ಗಳಲ್ಲಿ ಸೈಕಲ್ ಯಾನಕ್ಕೆ ವಿರಾಮ ನೀಡಲಾಗಿತ್ತು. ಅದರ ಬೆನ್ನಲ್ಲಿಯೇ ಅವರು ಬೆಂಗಳೂರು ತಲುಪಲು ಟಿವಿಎಸ್ ಐಕ್ಯೂಬ್ ಎಲೆಕ್ಟ್ರಿಕ್ನಲ್ಲಿ 200 ಕಿ.ಮೀ ಕ್ರಮಿಸಿದರು. ಇದು ಬಹುಮುಖಿ ಮತ್ತು ಪರಿಸರ–ಸ್ನೇಹಿ ಎಲೆಕ್ಟ್ರಿಕ್ ಸಾರಿಗೆಯ ಮಹತ್ವವನ್ನು ಒತ್ತಿ ಹೇಳುತ್ತದೆ.

ಶ್ರೀ ಮಿಲಿಂದ್ ಸೋಮನ್, ಫಿಟ್ನೆಸ್ ಐಕಾನ್ ಅವರು ತಮ್ಮ ಅನುಭವವನ್ನು ಉತ್ಸಾಹದಿಂದ ಹಂಚಿಕೊಂಡರು ಮತ್ತು ಹೇಳಿದರು, "ಈ ಯಾನಕ್ಕಾಗಿ ಟಿವಿಎಸ್ ಐಕ್ಯೂಬ್ ಎಲೆಕ್ಟ್ರಿಕ್ ಅನ್ನು ಆಯ್ಕೆ ಮಾಡಿಕೊಂಡಿರುವುದರ ಹಿಂದೆ ಸ್ವಚ್ಛ ಮತ್ತು ಸ್ಮಾರ್ಟ್ ಸಾರಿಗೆ ಆಯ್ಕೆ ಮಾಡಿಕೊಳ್ಳಬೇಕೆಂಬ ಪ್ರತಿಪಾದನೆ ಅಡಗಿದೆ. ಇತರರು ಪರಿಸರ–ಸ್ನೇಹಿ ಆಯ್ಕೆಗಳ ಮೂಲಕ ಆರೋಗ್ಯಕರ ಗ್ರಹಕ್ಕೆ ಕೊಡುಗೆ ನೀಡಲೆಂದು ಆಶಿಸೋಣ'.

ಗ್ರೀನ್ರೈಡ್ 3.0 ಆರೋಗ್ಯಕರ ಗ್ರಹಕ್ಕಾಗಿ ಅಗತ್ಯವಾಗಿರುವ ಸಾಮೂಹಿಕ ಪ್ರಯತ್ನವನ್ನು ಸಂಕೇತಿಸುವ ಸಲುವಾಗಿ ವೈವಿಧ್ಯಮಯ ಭೂಪ್ರದೇಶಗಳನ್ನು ಹೊಂದಿರುವ ವಿವಿಧ ನಗರಗಳನ್ನು ವ್ಯಾಪಿಸಿದೆ.

ಮಿಲಿಂದ್ ಸೋಮನ್ ಅವರು ಸಹಭಾಗಿತ್ವದಲ್ಲಿ, ಫಿಟ್ನೆಸ್ ಕುರಿತು ಜಾಗೃತಿ ಮೂಡಿಸಲು, ಪರಿಸರದ ಕುರಿತು ಒಮ್ಮತಾಭಿಪ್ರಾಯ ಮೂಡಿಸಲು ಮತ್ತು ಆರೋಗ್ಯಕರ, ಸುಸ್ಥಿರ ಭವಿಷ್ಯಕ್ಕಾಗಿ ಶ್ರಮಿಸಲು ಈ ಅಭಿಯಾನದ ಭಾಗವಾಗುವಂತೆ ಎಲ್ಲರಿಗೂ ಮುಕ್ತ ಆಹ್ವಾನ ನೀಡಿದ್ದಾರೆ.

# ಸೇವಾ ಜಾಲ ವಿಸ್ತರಿಸಿದ ಟಾಟಾ ಮೋಟಾರ್ಸ್

ಬೆಳಗಾವಿ: ಟಾಟಾ ಮೋಟಾರ್ಸ್ ತನ್ನ ಸೇವಾ ವಿಧಾನವನ್ನು ಒಂದು ದರ್ಜೆಯ ಎತ್ತರಕ್ಕೆ ತೆಗೆದುಕೊಂಡು, ತನ್ನ ಸೇವಾಜಾಲವನ್ನು ವಿಸ್ತರಿಸಿದೆ. ಬಳ್ಳಾರಿ, ಬೆಂಗಳೂರು, ಬೀದರ್, ಚಿಕ್ಕಮಗಳೂರು, ಗದಗ, ಕುಶಾಲನಗರ, ಮಂಗಳೂರು ಮತ್ತು ಉಡುಪಿಯಲ್ಲಿ ಒಟ್ಟು 58 ಸೇವಾಕೇಂದ್ರಗಳಿಗೆ 11 ಹೊಸ ಸೇವಾ ಕೇಂದ್ರಗಳನ್ನು ಸೇರಿಸಿದೆ. ಇದಲ್ಲದೆ, ಟಾಟಾಮೋಟಾರ್ಸ ಅಧಿಕೃತ ಡೀಲರ್ ಶೀಫಗಳು ಬೆಳಗಾವಿಯಲ್ಲಿ ಈಸಿಸರ್ವ EzServe ಕಾರ್ಯ ಕ್ರಮವನ್ನು ನಿಯೋಜಿಸಿವೆ. ಈಸಿಸರ್ವ EzServe ದ್ವಿಚಕ್ರವಾಹನ ಆಧಾರಿತ ಸೇವೆಯಾಗಿದ್ದು, ಗ್ರಾಹಕರಿಗೆ ಅವರಮನೆ ಬಾಗಿಲಿಗೆ ಸುರಕ್ಷಿತ ಮತ್ತು ಅನುಕೂಲಕರ ಅನುಭವವನ್ನು ಒದಗಿಸಲು ವಿನ್ಯಾಸಗೊಳಿಸಲಾಗಿದೆ. ಈಸಿಸರ್ವ EzServe) ಮೂಲಸೇವೆ, ತ್ವರಿತ ರಿಪೇರಿ ಮತ್ತು ಗ್ರಾಹಕರ ಆದ್ಯತೆಯ ಸ್ಥಳದಲ್ಲಿಸಮಸ್ಯೆ ಪರಿಹಾರ ಸೇರಿದಂತೆ ಹಲವಾರು ಪ್ರಯೋಜನಗಳನ್ನು ನೀಡುತ್ತದೆ. ಡೀಲರ್ ಶೀಫ್ ಗಳು ಮಾನಿಕಾ ಬ್ಯಾಗ್ ಆಟೋ ಮೊಬೈಲ್ಸ್ ಪ್ರೇವೈಟ್ ಲಿ ಬೆಳಗಾವಿಯಲ್ಲಿ ಈಸಿಸರ್ವ EzServe ಬೈಕ್ ಅನ್ನು ನಿಯೋಜಿಸಿದೆ. ಭೇಟಿ ನೀಡಿ ಈ ಉಪಕ್ರಮವು ಏಪ್ರಿಲ್ 2023 ರಿಂದನಗರದ 226 ಗ್ರಾಹಕರಿಗೆ ಪ್ರಯೋಜನಕಾರಿಯಾಗಿದೆ. ಟಾಟಾ ಮೋಟಾರ್ಸ್ ಗ್ರಾಹಕರ ಕಾರುಹೆಚ್ಚಿನ ಕಾಳಜಿಯನ್ನು ಪಡೆಯುತ್ತದೆ ಎಂದು ಖಾತ್ರಿಪಡಿಸುವ ಸೇವೆಗಳ ಸಮಗ್ರ ಶ್ರೇಣಿಯನ್ನು ನೀಡುವ ನಿಟ್ಟಿನಲ್ಲಿ ಕಾರ್ಯ ನಿರ್ವಹಿಸುತ್ತದೆ. ಹೆಚ್ಚಿನ ವಿವರಗಳಿಗಾಗಿ ; https://cars.tatamotors.com/service

# ಕಿಂಡರ್ ವುಮೆನ್ಸ್ ಹಾಸ್ಪಿಟಲ್ ಗೆ ಪ್ರತಿಷ್ಠಿತ ಪ್ರಶಸ್ತಿ

ಬೆಂಗಳೂರು: ಬೆಂಗಳೂರಿನ ಪ್ರಮುಖ ಆರೋಗ್ಯ ಸಂಸ್ಥೆಯಾದ ಕಿಂಡರ್ ವುಮೆನ್ಸ್ ಹಾಸ್ಪಿಟಲ್ ಮತ್ತು ಫರ್ಟಿಲಿಟಿ ಸೆಂಟರ್ 2023ರ ಪ್ರತಿಷ್ಠಿತ ಟೈಮ್ಸ್ ಹೆಲ್ತ್ ಎಕ್ಸಲೆನ್ಸ್ ಪ್ರಶಸ್ತಿ ಗೌರವಕ್ಕೆ ಪಾತ್ರವಾಗಿದೆ. ಈ ಅತ್ಯಂತ ಪ್ರತಿಷ್ಠಿತ ಪ್ರಶಸ್ತಿಯು ಗುಣಮಟ್ಟದ ಆರೋಗ್ಯ ಸೇವೆ ಮತ್ತು ರೋಗಿಗಳ ತೃಪ್ತಿಗೆ ಅದರ ಬದ್ಧತೆಯ ಪ್ರದರ್ಶನವನ್ನು ಆಧರಿಸಿ ಆಸ್ಪತ್ರೆಯನ್ನು "ಬೆಂಗಳೂರಿನ ಅತ್ಯುತ್ತಮ ಉದಯೋನ್ಮುಖ ತಾಯಿ ಮತ್ತು ಮಕ್ಕಳ ಆರೈಕೆ ಆಸ್ಪತ್ರೆ" ಎಂದು ಗುರುತಿಸಿದೆ.

ಈ ಪ್ರತಿಷ್ಠಿತ ಮನ್ನಣೆಯ ಕುರಿತು ಮಾತನಾಡಿದ ಕಿಂಡರ್ ಹಾಸ್ಪಿಟಲ್ಸ್ ಸಿಇಓ, ಶ್ರೀ ರೆಂಜಿತ್ ಕೃಷ್ಣನ್, "ಈ ಪ್ರಶಸ್ತಿಯು ತಾಯಿ ಮತ್ತು ಮಗುವಿನ ಆರೈಕೆಯಲ್ಲಿನ ನಮ್ಮ ಶ್ರೇಷ್ಠತೆ, ದಣಿವರಿಯದ ಬದ್ಧತೆಯನ್ನು ಪ್ರತಿಬಿಂಬಿಸುತ್ತದೆ. ಆರೋಗ್ಯ ಕ್ಷೇತ್ರದಲ್ಲಿ ಹೊಸತನವನ್ನು ಮುಂದುವರಿಸುವ ಮತ್ತು ಉನ್ನತ ಗುಣಮಟ್ಟವನ್ನು ಹೊಂದಿಸುವ ನಮ್ಮ ಸಂಕಲ್ಪವನ್ನು ಇದು ಬಲಪಡಿಸುತ್ತದೆ. ವೈದ್ಯರಿಂದ ಸಹಾಯಕ ಸಿಬ್ಬಂದಿಯವರೆಗೆ, ನಮ್ಮ ತಂಡದ ಪ್ರತಿಯೊಬ್ಬ ಸದಸ್ಯರು ಈ ಪ್ರಯಾಣದಲ್ಲಿ ಪ್ರಮುಖ ಪಾತ್ರ ವಹಿಸಿದ್ದಾರೆ ಮತ್ತು ಈ ಪುರಸ್ಕಾರವು ಪ್ರತಿಯೊಬ್ಬರಿಗೂ ಸೇರಿದೆ. ಈ ಮೈಲಿಗಲ್ಲನ್ನು ಸಂಭ್ರಮಿಸುತ್ತಾ, ನಾವು ನಮ್ಮ ಸಮುದಾಯಕ್ಕೆ ಸಾಟಿಯಿಲ್ಲದ ಕಾಳಜಿ ಮತ್ತು ಸೇವೆಯನ್ನು ಒದಗಿಸುವ ನಮ್ಮ ಪ್ರತಿಜ್ಞೆಯನ್ನು ಪುನರುಚ್ಚರಿಸುತ್ತೇವೆ" ಎಂದು ಹೇಳಿದ್ದಾರೆ.

ಶ್ರೀ ಕೃಷ್ಣನ್ ಅವರು ಸಿಓಓ ಶ್ರೀ ಸುಧೀಂದ್ರ ಜಿ ಭಟ್ ಮತ್ತು ಮಾರ್ಕೆಟಿಂಗ್ ಹೆಡ್ ಶ್ರೀ ಕಿರಣ್ ಅವರೊಂದಿಗೆ ಇಡೀ ಕಿಂಡರ್ ಕುಟುಂಬದ ಪರವಾಗಿ ಗೌರವಾನ್ವಿತ ಪುರಸ್ಕಾರವನ್ನು ಸ್ವೀಕರಿಸಿದರು. ಈ ಪ್ರಶಸ್ತಿಯು ಕಿಂಡರ್ ವುಮೆನ್ಸ್ ಹಾಸ್ಪಿಟಲ್ ಮತ್ತು ಫರ್ಟಿಲಿಟಿ ಸೆಂಟರ್‌ನ ಇಡೀ ತಂಡದ ಅಚಲವಾದ ಬದ್ಧತೆ ಮತ್ತು ಕಠಿಣ ಪರಿಶ್ರಮಕ್ಕೆ ಸಾಕ್ಷಿಯಾಗಿದೆ.

ಕಿಂದೋರಮಾ ಹೆಲ್ತ್ ಕೇರ್ ಪ್ರೈವೇಟ್ ಲಿಮಿಟೆಡ್‌ನ ಅಡಿಯಲ್ಲಿನ, ಕಿಂಡರ್ ಆಸ್ಪತ್ರೆಯು ಆರೋಗ್ಯ ರಕ್ಷಣೆಯಲ್ಲಿ ಅಂತರರಾಷ್ಟ್ರೀಯ ಗುಣಮಟ್ಟವನ್ನು ಸ್ಥಿರವಾಗಿ ಎತ್ತಿಹಿಡಿದಿದೆ.

ಈ ಪ್ರಶಸ್ತಿಯು ಸಹಾನುಭೂತಿಯ ಆರೈಕೆಯನ್ನು ಒದಗಿಸುವ ಮತ್ತು ಆರೋಗ್ಯ ಕ್ಷೇತ್ರದಲ್ಲಿ ಹೊಸ ಮಾನದಂಡಗಳನ್ನು ಸ್ಥಾಪಿಸುವ ಅವರ ನಿರಂತರ ಬದ್ಧತೆಗೆ ಸಂದ ಮನ್ನಣೆಯಾಗಿದೆ.

ಕೈಗೆಟುಕುವ ವೆಚ್ಚದಲ್ಲಿ ಸಮಗ್ರ ಮತ್ತು ಗುಣಮಟ್ಟದ ಆರೋಗ್ಯ ಸೇವೆಗಳನ್ನು ನೀಡುವ ಅವರ ಬದ್ಧತೆಯು ಸಮಾಜದ ಎಲ್ಲಾ ಸ್ತರಗಳ ಮೇಲೆ ಗಮನಾರ್ಹ ಪರಿಣಾಮ ಬೀರಿದೆ.

ಕಿಂಡರ್ ವುಮೆನ್ಸ್ ಹಾಸ್ಪಿಟಲ್ ಮತ್ತು ಫರ್ಟಿಲಿಟಿ ಸೆಂಟರ್ ಆರೋಗ್ಯ ಸೇವೆಯ ಉತ್ಕೃಷ್ಟತೆಯ ಕಡೆಗಿನ ತನ್ನ ಪ್ರಯಾಣವನ್ನು ಮುಂದುವರೆಸುತ್ತಿರುವುದರಿಂದ, ಈ ಪ್ರಶಸ್ತಿಯು ಅತ್ಯುನ್ನತ ಗುಣಮಟ್ಟಕ್ಕಾಗಿ ಶ್ರಮಿಸಲು ಸ್ಫೂರ್ತಿಯಾಗಿ ಕಾರ್ಯನಿರ್ವಹಿಸುತ್ತದೆ. ಆಸ್ಪತ್ರೆಯು ತನ್ನ ಉತ್ಕೃಷ್ಟತೆಯ ಪಥವನ್ನು ಕಾಪಾಡಿಕೊಳ್ಳುವ ಕುರಿತಾಗಿ ಪ್ರತಿಜ್ಞೆ ಮಾಡುತ್ತದೆ, ಪ್ರತಿ ರೋಗಿಗೆ ಭರವಸೆ, ಚಿಕಿತ್ಸೆ ಮತ್ತು ಅತ್ಯುತ್ತಮವಾದ ಆರೈಕೆಯನ್ನು ಒದಗಿಸುವ ತನ್ನ ಧ್ಯೇಯವನ್ನು ಮುಂದುವರಿಸುತ್ತದೆ. ಕಿಂಡರ್ ವುಮೆನ್ಸ್ ಹಾಸ್ಪಿಟಲ್ ಮತ್ತು ಫರ್ಟಿಲಿಟಿ ಸೆಂಟರ್ ಎಂಬುದು ಸಿಂಗಾಪುರ ಮತ್ತು ಭಾರತದ ಪರಿಣತಿಯನ್ನು ಹೊಂದಿರುವ ಅಂತರಾಷ್ಟ್ರೀಯ ಉದ್ಯಮವಾಗಿದ್ದು, ಮಹಿಳೆಯರು ಮತ್ತು ಮಕ್ಕಳ ಆರೋಗ್ಯ ರಕ್ಷಣೆಗೆ ಅತ್ಯುನ್ನತ ಆರೈಕೆಯನ್ನು ಒದಗಿಸುತ್ತದೆ. ಕಿಂಡರ್ ಈಗಾಗಲೇ ಇತ್ತೀಚಿನ ಅತ್ಯಾಧುನಿಕ ಸೌಲಭ್ಯವನ್ನು ಬೆಂಗಳೂರಿನ ಮಹದೇವಪುರದ ಗ್ರಾಫೈಟ್ ಇಂಡಿಯಾ ರಸ್ತೆಯಲ್ಲಿ ಸ್ಥಾಪಿಸಿದ್ದೇವೆ.

ಸಂಪುಟ: 4 ಸಂಚಿಕೆ: 268 ಪುಟ: 4 RNI: KARKAN/2020/79084 Regn,No:G-2/PMG/KA/NK/BM/139/2021-23

BELAGAVI VARADI KANNADA DAILY MORNING : Editor, Printer, Publisher & Owned By : **Satish Basavani Gudagenatti,** Basavani House No.53, Ashray Colony, Sarathi Nagar, Tv Center - 590019, TQ & DIST Belagavi, Karnataka.

Printed At : LAXMI PRINTERS, No.627. Auto Nagar - 590016.TQ & DIST Belagavi, Karnataka Mob : 9900332089